ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಒಟ್ಟು ಪ್ರಶ್ನೆಗಳು – ೧೪೦**

**ಪಟ್ಟಿ – ೦೪**

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೇಳನೇ ಅಧಿವೇಶನ

**ಶುಕ್ರವಾರ, ದಿನಾಂಕ : ೦೬ನೇ ಫೆಬ್ರವರಿ, ೨೦೧೫**

---

## ಸಮೂಹ – V

೧. ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

೩. ವಸತಿ ಸಚಿವರು

೪. ಅಬಕಾರಿ ಸಚಿವರು

೫. ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು

೭. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು

---

## ಸರ್ಕಾರಿ ಪದವಿ ಕಾಲೇಜುಗಳಲ್ಲಿ ಸ್ಮಾರ್ಟ್ ಹಾಗೂ ವರ್ಚ್ಯುವಲ್ ತರಗತಿ ಆರಂಭಿಸುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೪ (೩೦೯) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಸ್ಮಾರ್ಟ್ ಹಾಗೂ ವರ್ಚ್ಯುವಲ್ ತರಗತಿ ಆರಂಭಿಸುವ ವಿಚಾರ ಸರ್ಕಾರದ ಮುಂದೆ ಇದೆಯೇ ;

(ಆ) ಹಾಗಿದ್ದಲ್ಲಿ, ಇದಕ್ಕೆ ತಗಲುವ ಒಟ್ಟು ವೆಚ್ಚ ಎಷ್ಟು ; ಹಾಗೂ ಯಾವ ಯಾವ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಅಳವಡಿಸಲಿದೆ ;

(ಇ) ಇದರಿಂದ ವಿದ್ಯಾರ್ಥಿಗಳಿಗೆ ಆಗುವ ಲಾಭವೇನು ; ಇದು ವಿದ್ಯಾರ್ಥಿಗಳಿಗೆ ಹೇಗೆ ಲಭ್ಯವಾಗಲಿದೆ ;

(ಈ) ಇದಕ್ಕಾಗಿ ನುರಿತ ಬೋಧಕ ತಂತ್ರಜ್ಞಾನರನ್ನು ಸರ್ಕಾರ ನೇಮಕಾತಿ ಮಾಡಿಕೊಳ್ಳಲಿದೆಯೇ ;

(ಉ) ಹೈಟೆಕ್ ವರ್ಚ್ಯುವಲ್ ಶಿಕ್ಷಣಗೋಸ್ಕರ ಪ್ರತ್ಯೇಕ ಕ್ಲಾಸ್ ರೂಂಗಳ ವ್ಯವಸ್ಥೆಯನ್ನು ಸಿದ್ಧತೆ ಮಾಡಿಕೊಂಡಿದೆಯೇ ?



## ಗ್ರಾಮೀಣಾಭಿವೃದ್ಧಿ ಅಧಿಕಾರಿಗಳನ್ನು ನೇಮಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೫ (೩೧೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ರಾಮೀಣಾಭಿವೃದ್ಧಿ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಗ್ರಾಮೀಣಾಭಿವೃದ್ಧಿ ಅಧಿಕಾರಿ (ಆರ್.ಡಿ.ಓ)ಗಳನ್ನು ನೇಮಿಸಲು ಮುಂದಾಗಿರುವುದು ನಿಜವೇ ;

(ಆ) ಆದರೆ, ಸರ್ಕಾರವು ಎಷ್ಟು ಜನ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಒಬ್ಬರಂತೆ ಗ್ರಾಮೀಣಾಭಿವೃದ್ಧಿ ಅಧಿಕಾರಿ (ಆರ್.ಡಿ.ಓ)ಗಳನ್ನು ನೇಮಿಸಲಾಗುವುದು ;

(ಇ) ಗ್ರಾಮೀಣಾಭಿವೃದ್ಧಿ ಅಧಿಕಾರಿ (ಆರ್.ಡಿ.ಓ)ಗಳ ನೇಮಕಾತಿಗೆ ಇರುವ ಮಾನದಂಡಗಳೇನು ; ಯಾವಾಗ ನೇಮಕಾತಿ ಮಾಡಿಕೊಳ್ಳಲಾಗುವುದು ;

(ಈ) ಗ್ರಾಮೀಣಾಭಿವೃದ್ಧಿ ಅಧಿಕಾರಿ (ಆರ್.ಡಿ.ಓ.)ಗಳ ಜವಾಬ್ದಾರಿಗಳೇನು ; ಇದರಿಂದ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಆಗುವ ಸಹಾಯವೇನು ?

## ಗ್ರಾಮೀಣ ಹಾಗೂ ಬಡ ವಿದ್ಯಾರ್ಥಿಗಳಿಗೆ ಸರ್ಕಾರಿ/ಖಾಸಗಿ ಚಾನೆಲ್‌ಗಳು ಸಿ.ಇ.ಟಿ. ತರಬೇತಿ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೬ (೩೦೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಗ್ರಾಮೀಣ ಹಾಗೂ ಬಡ ವಿದ್ಯಾರ್ಥಿಗಳಿಗೆ ಸಿ.ಇ.ಟಿ. ತರಬೇತಿ ನೀಡುವ ಕುರಿತು ಡಿ.ಡಿ. ಚಂದನದಲ್ಲಿ ಅಥವಾ ಖಾಸಗಿ ಏಜೆನ್ಸಿ ಮೂಲಕ ಪ್ರಸಾರ ಮಾಡುವ ವಿಚಾರ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಸರ್ಕಾರವು ಈ ಕುರಿತು ಪ್ರಸ್ತಾವನೆ ತಯಾರಿಸಿದೆಯೇ ;

(ಇ) ಪ್ರಸ್ತಾವನೆ ಸಲ್ಲಿಸಿದ್ದರೆ ಪ್ರಸಾರ ಮಾಡಲು ಅನುಮತಿ ನೀಡಲು ಇಲಾಖೆಯು ಏಕೆ ಹಿಂದೇಟು ಹಾಕುತ್ತಿದೆ ;

(ಈ) ಡಿ.ಡಿ. ಚಂದನ ವಾಹಿನಿಯಲ್ಲಿ ಪ್ರಸಾರ ಮಾಡಲು ತಗಲುವ ವೆಚ್ಚ ಎಷ್ಟು ; ಖಾಸಗಿ ಏಜೆನ್ಸಿಗೆ ವಹಿಸಿದರೆ ತಗಲುವ ವೆಚ್ಚ ಎಷ್ಟು ?

## ನದಿಗಳ ನೀರು ಕಲುಷಿತವಾಗುತ್ತಿರುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೭ (೩೧೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನದಿ ಪಾತ್ರದಲ್ಲಿ ಇರುವ ಗ್ರಾಮೀಣ ಭಾಗದ ಗ್ರಾಮಗಳ ಮಲೀನ ನೀರು ಘಟರ್ ಮೂಲಕ ಹರಿದು ನದಿಗಳಿಗೆ ಸೇರಿ ನದಿಗಳಲ್ಲಿನ ನೀರು ಕಲುಷಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;



(ಆ) ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಕೊಳಚೆ ನೀರನ್ನು ಶುದ್ಧೀಕರಿಸುವ ವಿಚಾರ ಸರ್ಕಾರದ ಮುಂದೆ ಇದೆಯೇ ;

(ಈ) ಅದಕ್ಕೆ ಕ್ರಿಯಾ ಯೋಜನೆ ತಯಾರಿಸಲಾಗಿದೆಯೇ ; ಹಾಗಾದರೆ ಅದಕ್ಕೆ ತಗಲುವ ವೆಚ್ಚವೆಷ್ಟು ; ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸುವಿರಿ ? (ವಿವರ ನೀಡುವುದು)

## ಪಂಚಾಯತ್ ವ್ಯವಸ್ಥೆಯಲ್ಲಿ ಹೊಸದಾಗಿ ಹುದ್ದೆಗಳನ್ನು ಸೃಜಿಸುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೮ (೩೧೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ಹೊಸದಾಗಿ ಸೃಜಿಸಿರುವ ಗ್ರಾಮೀಣಾಭಿವೃದ್ಧಿ ಅಧಿಕಾರಿಗಳ ಹುದ್ದೆಗಳೆಷ್ಟು ;

(ಆ) ನೇಮಕಾತಿಯನ್ನು ಯಾವ ಮಾದರಿಯಲ್ಲಿ ಮತ್ತು ಯಾವಾಗ ಪ್ರಾರಂಭಿಸಲಾಗುವುದು ;

(ಇ) ಸದರಿ ಹುದ್ದೆಯ ಜವಾಬ್ದಾರಿಗಳೇನು ;

(ಈ) ಸದರಿ ಹುದ್ದೆಗಳಲ್ಲಿ ನೇರ ನೇಮಕಾತಿ ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಂದ ಪದೋನ್ನತಿ ಪಡೆದವರ ಪ್ರಮಾಣವೆಷ್ಟು ?

## ಭಾಗ್ಯ ಲಕ್ಷ್ಮಿ ಬಾಂಡ್‌ಗೆ ಮದುವೆ ನೋಂದಣಿ ಕಡ್ಡಾಯವಿರುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೯ (೩೧೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ "ಭಾಗ್ಯ ಲಕ್ಷ್ಮಿ" ಯೋಜನೆಯ ಬಾಂಡ್ ವಿತರಿಸಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ವರ್ಷವಾರು ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) "ಭಾಗ್ಯ ಲಕ್ಷ್ಮಿ" ಬಾಂಡ್‌ಗೆ ಅರ್ಜಿ ಸಲ್ಲಿಸಲು ಕಡ್ಡಾಯ ಮದುವೆ ನೋಂದಣಿ ಮಾನದಂಡ ಮುಂದುವರಿದಿದೆಯೇ ; ಇಲ್ಲವಾದಲ್ಲಿ, ಈಗಿರುವ ಮಾನದಂಡವೇನು ;

(ಇ) ಭಾಗ್ಯ ಲಕ್ಷ್ಮಿ ಯೋಜನೆ ಅರ್ಹತೆಗೆ ಹೆಣ್ಣು ಮಗುವಿನ ತಂದೆ ಅಥವಾ ತಾಯಿ ಯಾರಾದರೊಬ್ಬರ ಹೆಸರು BPL ಪಡಿತರ ಚೀಟಿಯಲ್ಲಿದ್ದರೆ ಸಾಕು ಎಂಬ ಸರ್ಕಾರದ ಆಶ್ವಾಸನೆ ಈಡೇರಿಸಲಾಗಿದೆಯೇ ? (ವಿವರ ನೀಡುವುದು)

## ರೈಲು ಮಾರ್ಗವನ್ನು ಪೂರ್ಣಗೊಳಿಸುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೨೦ (೩೧೫) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ–ಮಂಗಳೂರು ಮಾರ್ಗವಾಗಿ, ಹಾಸನ–ಕುಣಿಗಲ್ ಮೂಲಕ ಬೆಂಗಳೂರು ಸೇರುವ ರೈಲು ಮಾರ್ಗವನ್ನು ಎಂದು



ಪೂರ್ಣಗೊಳಿಸಲಾಗುವುದು ; ರೈಲು ಸಂಚಾರ ಪ್ರಾರಂಭಿಸಲಾಗುವುದು ಯಾವಾಗ ;

(ಆ) ಸದರಿ ಮಾರ್ಗದ ಕಾಮಗಾರಿಯಲ್ಲಿ ಅತೀ ವಿಳಂಬ ನೀತಿಯನ್ನು ಅನುಸರಿಸಲು ಕಾರಣವೇನು ; ಇದನ್ನು ತ್ವರಿತಗೊಳಿಸಲು ರೂಪಿಸಿರುವ ಯೋಜನೆಗಳಾವುವು ;

(ಇ) ಹಾಸನ–ಕುಣಿಗಲ್ ರೈಲು ಮಾರ್ಗ ಪೂರ್ಣಗೊಂಡಲ್ಲಿ, ಕೇವಲ ೮ ತಾಸುಗಳಲ್ಲಿ ಕರಾವಳಿ ಜಿಲ್ಲೆಗಳ ಜನ ಬೆಂಗಳೂರು ಸೇರಬಹುದೆಂಬುದು ಸರ್ಕಾರ ಗಮನಿಸಿದೆಯೇ ;

(ಈ) ಹಾಗಿದ್ದಲ್ಲಿ, ಸದರಿ ರೈಲು ಮಾರ್ಗಗಳ ಸಂಚಾರವನ್ನು ತ್ವರಿತವಾಗಿ ಪ್ರಾರಂಭಿಸಲು ಸರ್ಕಾರದ ಯೋಜನೆ ಮತ್ತು ಯೋಚನೆಗಳೇನು ?

## ಮನೆಗಳ ಬಾಕಿ ಬಿಲ್ಲು ಮತ್ತು ಅನುದಾನವನ್ನು ಹೆಚ್ಚಿಸುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೨೧ (೩೧೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿವಿಧ ಯೋಜನೆಗಳಡಿಯಲ್ಲಿ ಕಳೆದ ೩ ವರ್ಷಗಳಲ್ಲಿ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು ; ಬಸವ ವಸತಿ, ಇಂದಿರಾ ಆವಾಸ್, ಅಂಬೇಡ್ಕರ್ ವಸತಿ ಯೋಜನೆಯಲ್ಲಿ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು ; (ವಿಧಾನ ಸಭಾ ಕ್ಷೇತ್ರ, ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷದಲ್ಲಿ ಮಂಜೂರಾದ ಮನೆಗಳಲ್ಲಿ NOT OK ಆದ ಮನೆಗಳ ಸಂಖ್ಯೆ ಎಷ್ಟು ; ಬಿಲ್ಡಿಂಗ್ ಮತ್ತು ಹಂತವಾರು ಫೋಟೋಗಳ ಕಾರಣ ನೀಡಿ ಅನುದಾನ ತಡೆ ಹಿಡಿದಿರುವ ಮನೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ವಿಧಾನ ಸಭಾ ಕ್ಷೇತ್ರವಾರು ನೀಡುವುದು)

(ಇ) ೨೦೧೪–೧೫ನೇ ಸಾಲಿನಲ್ಲಿ ಹೆಚ್ಚುವರಿ ಮನೆಗಳನ್ನು ಯಾವ ಯಾವ ವಿಧಾನಸಭಾ ಕ್ಷೇತ್ರಗಳಿಗೆ ಮಂಜೂರು ಮಾಡಲಾಗಿದೆ ; ಯಾವ ಆಧಾರದ ಮೇಲೆ ಮಂಜೂರು ಮಾಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಮಿತಿಯ ಶಿಫಾರಸ್ಸಿನಂತೆ ಮನೆಗಳ ಘಟಕ ವೆಚ್ಚವನ್ನು ೧೦ ಲಕ್ಷಕ್ಕೆ ಏರಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಉ) ಇಲ್ಲವಾದಲ್ಲಿ, ಈ ಬಗ್ಗೆ ಸರ್ಕಾರದ ಮುಂದಿರುವ ತೊಡಕುಗಳೇನು ?

## ಪಂಚಾಯತ್ ಮರು ವಿಂಗಡಣೆಯಲ್ಲಿ ಹೆಚ್ಚುವರಿ ಪ್ರಸ್ತಾವದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೨೨ (೩೧೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಂಜಯ್ಯನಮಠ್ ವರದಿಯ ಶಿಫಾರಸ್ಸಿನಂತೆ, ಹೆಚ್ಚುವರಿಯಾಗಿ ಘೋಷಿಸಿದ ಗ್ರಾಮ ಪಂಚಾಯತ್‌ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಹೆಸರು ಮತ್ತು ಸಂಖ್ಯೆ ನೀಡುವುದು)



(ಆ) ಯಾವ ಮಾನದಂಡದಲ್ಲಿ ಪಂಚಾಯತ್ ಪುನರ್ ವಿಂಗಡಣೆ ಮಾಡಲಾಗಿದೆ ;

(ಇ) ಪಂಚಾಯತ್ ಪುನರ್ ವಿಂಗಡಣೆಯಲ್ಲಿ ಸಾಕಷ್ಟು ಲೋಪದೋಷಗಳಿದ್ದು. ಕೆಲ ದೊಡ್ಡ ಪಂಚಾಯತ್‌ಗಳನ್ನು ವಿಂಗಡಿಸದೇ ಹಾಗೇಯೇ ಬಿಟ್ಟಿರುವ ಹಿನ್ನೆಲೆಯಲ್ಲಿ, ಪುನರ್ ವಿಂಗಡಣೆಗೆ ಹೆಚ್ಚುವರಿಯಾಗಿ ಹೊಸ ಪ್ರಸ್ತಾವನೆಯನ್ನು ಪಡೆಯಲು ಅವಕಾಶ ನೀಡಲಾಗಿದೆಯೇ ;

(ಈ) ಒಟ್ಟಾರೆಯಾಗಿ ನಂಜಯ್ಯನಮಠ್ ವರದಿ ಸರ್ಕಾರಕ್ಕೆ ಸಮಾಧಾನ ತಂದಿದೆಯೇ ?

## ಬೀದರ್ ಜಿಲ್ಲೆಯಲ್ಲಿ ಗ್ರಾಮಗಳ ಅಭಿವೃದ್ಧಿಪಡಿಸುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೨೩ (೩೧೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿರುವ ಗ್ರಾಮ ಪಂಚಾಯತ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಪ್ರತಿ ಗ್ರಾಮ ಪಂಚಾಯತಿಗಳಿಗೆ ಬಂದಿರುವ ಅನುದಾನದ ಮೊತ್ತ ಎಷ್ಟು ; (ವಿವರ ನೀಡುವುದು)

(ಇ) ಪ್ರತಿ ಗ್ರಾಮ ಪಂಚಾಯತಿಗೆ ಎಷ್ಟು ಗ್ರಾಮಗಳು ಸೇರುವವು ; ಆ ಗ್ರಾಮಗಳ ಹೆಸರುಗಳೊಂದಿಗೆ ವಿವರ ನೀಡುವುದು ;

(ಈ) ಈ ಗ್ರಾಮ ಪಂಚಾಯತಿಗಳಲ್ಲಿ ಸುಮಾರು ಮೂರು ವರ್ಷಗಳಿಂದ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; ಕೈಗೊಂಡಿದ್ದಲ್ಲಿ ಕಾಮಗಾರಿಗಳಿಗೆ ತಗಲಿದ ವೆಚ್ಚ ಎಷ್ಟು ; (ಕಾಮಗಾರಿಗಳು ಪೂರ್ಣಗೊಂಡಿದ್ದಲ್ಲಿ ಅವುಗಳ ಅಂದಾಜು ಪಟ್ಟಿಯ ಪ್ರತಿ, ಕಾಮಗಾರಿ ನಿರ್ವಹಿಸಿದ ದಿನಾಂಕ ಹಾಗೂ ಗುತ್ತಿಗೆದಾರರ ಹೆಸರು ಅಂಕಿಅಂಶಗಳೊಂದಿಗೆ ಗ್ರಾಮ ಪಂಚಾಯತ್‌ಗಳವಾರು, ತಾಲ್ಲೂಕುವಾರು, ಮಾಹಿತಿ ನೀಡುವುದು)

(ಉ) ಔರಾದ್ ತಾಲ್ಲೂಕಿನ ಜಂಬಗಿ ಗ್ರಾಮ ಪಂಚಾಯತಿಗೆ ೩ ವರ್ಷಗಳಲ್ಲಿ ಎಷ್ಟು ಮನೆಗಳನ್ನು ನೀಡಲಾಗಿದೆ ; (ನೀಡಿದ್ದಲ್ಲಿ, ಆ ಫಲಾನುಭವಿಗಳ ಹೆಸರು ಮತ್ತು ಜಾತಿವಾರು, ಗ್ರಾಮಗಳವಾರು ವರ್ಷವಾರು ಮಾಹಿತಿ ನೀಡುವುದು)

(ಊ) ಜಂಬಗಿ ಗ್ರಾಮ ಪಂಚಾಯತಿಗೆ ಸೇರಿದ ಕಂದಗೂಳ್ ಗ್ರಾಮಕ್ಕೆ ಸುಮಾರು ೩ ವರ್ಷಗಳಲ್ಲಿ ಒದಗಿಸಿರುವ ಅನುದಾನ ಎಷ್ಟು ;

(ಋ) ಈ ಗ್ರಾಮದಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಜನರಿರುವ ಓಣಿಗಳಲ್ಲಿ ಕಾಮಗಾರಿ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಭಿವೃದ್ಧಿಪಡಿಸಲು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)



## ನಿರ್ಮಿತಿ ಕೇಂದ್ರದ ಕಾಮಗಾರಿಗಳು ಕುರಿತು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೨೪ (೩೧೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಿರ್ಮಿತಿ ಕೇಂದ್ರಗಳ ಸ್ಥಾಪನೆ ಆಗಿದ್ದು ಯಾವಾಗ ; (ಕೇಂದ್ರ ಕಛೇರಿಯ ವಿಳಾಸದ ಮಾಹಿತಿ ನೀಡುವುದು)

(ಆ) ೨೦೧೧ ರಿಂದ ೨೦೧೪–೧೫ನೇ ಸಾಲಿನವರೆಗೆ ನಿರ್ಮಿತಿ ಕೇಂದ್ರದಿಂದ ಬೆಂಗಳೂರ ಗ್ರಾಮಾಂತರ ಜಿಲ್ಲೆ ಮತ್ತು ಬೀದರ್ ಜಿಲ್ಲೆಗೆ ಒದಗಿಸಲಾಗಿರುವ ಅನುದಾನ ಎಷ್ಟು ; (ವರ್ಷವಾರು ವಿವರ ನೀಡುವುದು)

(ಇ) ನಿರ್ಮಿತಿ ಕೇಂದ್ರಕ್ಕೆ ಎಲ್ಲಾ ಲೆಕ್ಕಶೀರ್ಷಿಕೆಯಡಿಯಲ್ಲಿ ಬಂದ ಅನುದಾನದಲ್ಲಿ ಕೈಗೊಂಡ ಕಾಮಗಾರಿಗಳ ವಿವರ, ಬಿಲ್ಲಿನ ಮೊತ್ತ, ಬಾಕಿ ಉಳಿದಿರುವ ಮೊತ್ತದ ಸಂಪೂರ್ಣ ವಿವರ ನೀಡುವುದು ;

(ಈ) ಪೂರ್ಣಗೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ; ನಿರ್ಮಿತಿ ಕೇಂದ್ರದಿಂದ ಹಾಗೇ ಗುತ್ತಿಗೆದಾರರಿಂದ ನಿರ್ವಹಿಸಲಾಗಿರುವ ಕಾಮಗಾರಿಗಳ ಸಂಖ್ಯೆ ; (ಸ್ಥಳವಾರು, ವರ್ಷವಾರು ಮಾಹಿತಿ ಒದಗಿಸುವುದು)

(ಉ) ಗುತ್ತಿಗೆದಾರರಿಗೆ ಪಾವತಿಸಿರುವ ಬಿಲ್ಲಿನ ಮೊತ್ತ ಎಷ್ಟು ; ನೀಡಬೇಕಾಗಿರುವ ಬಾಕಿ ಮೊತ್ತ ಎಷ್ಟು ; ನಿರ್ಮಿತಿ ಕೇಂದ್ರದಿಂದ

ಗುತ್ತಿಗೆದಾರರಿಗೆ ಒಂದೊಂದು ಕಾಮಗಾರಿಗೆ ಒಂದೊಂದು ರೀತಿಯಲ್ಲಿ ಚಾರ್ಜ್ ಮಾಡುತ್ತಿರುವ (ಶೇಕಡವಾರು ಹಣ ಪಡೆಯುತ್ತಿರುವ) ಬಗ್ಗೆ ಮಾಹಿತಿ ನೀಡುವುದು ;

(ಊ) ಇಲಾಖೆ ವತಿಯಿಂದ ಬಿಲ್ಲಿನ ಮೊತ್ತದಲ್ಲಿ ಶೇಕಡವಾರು ಕಡಿತಗೊಳಿಸಲಾಗುತ್ತಿದೆಯೇ ? (ಹಾಗಿದ್ದಲ್ಲಿ, ವಿವರ ನೀಡುವುದು)

## ಬೀದರ್ ನಗರದ ಅವೈಜ್ಞಾನಿಕ ರಸ್ತೆಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೨೫ (೩೧೮) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ನಗರದ ವ್ಯಾಪ್ತಿಯಲ್ಲಿ ಕೈಗೊಳ್ಳಲಾಗಿರುವ ರೈಲ್ವೆ ರಸ್ತೆ, ಅಂಡರ್‌ಪಾಸ್‌ಗಳ ಸಂಖ್ಯೆ ಎಷ್ಟು ; ಅದರ ಒಟ್ಟು ವಿಸ್ತೀರ್ಣ ಎಷ್ಟು ;

(ಆ) ರೈಲ್ವೆ ಇಲಾಖೆಯವರು ಅವೈಜ್ಞಾನಿಕವಾಗಿ ರಸ್ತೆ ಮಾಡಿ (ಏರ್–ಫೋರ್ಸ್ ಹತ್ತಿರದಲ್ಲಿನ) ಅಂಡರ್‌ಪಾಸ್ ರಸ್ತೆಯು ಅರ್ಧಕ್ಕೆ ನಿಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರವು ಯಾವ ಕ್ರಮ ಕೈಗೊಂಡಿದೆ ; (ಮಾಹಿತಿ ನೀಡುವುದು)



(ಇ) ಈ ಅಂಡರ್‌ಪಾಸ್ ರಸ್ತೆ ಕಾಮಗಾರಿಯು ಅಪೂರ್ಣವಾಗಿರುವುದರಿಂದ ಸಾರ್ವಜನಿಕರಿಗೆ ಬಹಳಷ್ಟು ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ರಸ್ತೆಯನ್ನು ಅಭಿವೃದ್ಧಿ ಪಡಿಸಲು ಬೇಕಾಗುವ ಕಾಲಮಿತಿ ಎಷ್ಟು ? (ಮಾಹಿತಿ ನೀಡುವುದು)

## ಆರ್.ಟಿ.ಇ. ಅನುಷ್ಠಾನ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೨೬ (೩೨೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩ ರಿಂದ ೨೦೧೫ನೇ ಸಾಲಿನವರೆಗೆ ಆರ್.ಟಿ.ಇ. ಕಾಯ್ದೆಯ ಸಮರ್ಪಕ ಅನುಷ್ಠಾನಕ್ಕೆ ಸರ್ಕಾರ ಬಿಡುಗಡೆ ಮಾಡಿರುವ ಅನುದಾನದ ಮೊತ್ತವೆಷ್ಟು ; (ಜಿಲ್ಲಾವಾರು ವಿವರದೊಂದಿಗೆ ಎಲ್ಲಾ ಸರ್ಕಾರಿ ಆದೇಶದ ಪ್ರತಿಗಳನ್ನು ಒದಗಿಸುವುದು)

(ಆ) ೨೦೧೩ ರಿಂದ ೨೦೧೫ನೇ ಸಾಲಿನವರೆಗೆ ಖಾಸಗಿ ಅನುದಾನ ರಹಿತ ಶಾಲೆಗಳಿಗೆ ಆರ್.ಟಿ.ಇ. ಮೂಲಕ ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಪ್ರತ್ಯೇಕ ಶಾಲೆಗಳವಾರು, ವಲಯಗಳವಾರು ಮತ್ತು ಲಿಂಗವಾರು ವಿವರ ನೀಡುವುದು)

(ಇ) ಆರ್.ಟಿ.ಇ. ಕಾಯ್ದೆಯ ಮೂಲಕ ಪ್ರವೇಶ ನೀಡಲು ನಿರಾಕರಿಸಿರುವ ಪ್ರತಿಷ್ಠಿತ ಶಾಲೆಗಳ ವಿರುದ್ಧ ಸರ್ಕಾರವು ಯಾವ ಕಠಿಣ ಕ್ರಮಗಳನ್ನು ಕೈಗೊಂಡಿದೆ ; ೨೦೧೩-೧೪ನೇ ಸಾಲಿನಲ್ಲಿ ದಾಖಲಾಗಿರುವ ದೂರುಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಬೀದರ್ ಜಿಲ್ಲೆಯಲ್ಲಿರುವ ಖಾಸಗಿ ಅನುದಾನ ರಹಿತ ಶಾಲೆಗಳ ಸಂಖ್ಯೆ ಎಷ್ಟು ? (ವಲಯವಾರು, ವಿಳಾಸ ಸಹಿತ ಐ.ಸಿ.ಎಸ್.ಇ. ಸಿ.ಬಿ.ಎಸ್.ಇ. ಮತ್ತು ರಾಜ್ಯ ಸಿಲೇಬಸ್ ಶಾಲೆಗಳ ವಿವರ ನೀಡುವುದು)

## ರಾಜ್ಯದ ಪ್ರವಾಸಿ ತಾಣಗಳನ್ನು ಖಾಸಗಿ ಸಹಭಾಗಿತ್ವದಲ್ಲಿ ಅಭಿವೃದ್ಧಿಪಡಿಸುವುದು

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೨೭ (೩೮೨) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರವಾಸಿ ತಾಣಗಳೆಂದು ಗುರುತಿಸಲಾಗಿರುವ ಪ್ರದೇಶಗಳು ಯಾವುವು ; (ಮಾಹಿತಿ ಒದಗಿಸುವುದು)

(ಆ) ಪ್ರವಾಸಿಗರಿಗೆ ಪ್ರವಾಸಿ ತಾಣಗಳ ಮಾಹಿತಿ ದೊರಕಿಸುವ ಮತ್ತು ಅವುಗಳನ್ನು ತಲುಪಲು ಇರುವ ಮೂಲಭೂತ ಸೌಲಭ್ಯಗಳ, ಕೊರತೆಗಳ ಅರಿವು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಕುರಿತು ಕೈಗೊಂಡಿರುವ ಕ್ರಮಗಳೇನು ; (ಮಾಹಿತಿ ಒದಗಿಸುವುದು)



(ಇ) ಪ್ರವಾಸೋದ್ಯಮ ಇಲಾಖೆ ವ್ಯಾಪ್ತಿಗೆ ಸೇರಿರುವ ಒಟ್ಟು ಜಮೀನು ಎಷ್ಟು ; ಖಾಸಗಿ ಸಹಭಾಗಿತ್ವದಲ್ಲಿ ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಸರ್ಕಾರದ ಆಲೋಚನೆ ಮತ್ತು ರೂಪುರೇಷೆಗಳು ಏನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿ ಟಿ.ವಿ. ಕೇಬಲ್ ಅಳವಡಿಕೆ ದರ ವ್ಯತ್ಯಾಸ

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೨೮ (೪೩೦) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಟಿ.ವಿ. ವೀಕ್ಷಣೆಯ ಸಲುವಾಗಿ ಕೇಬಲ್ ಅಳವಡಿಸಿಕೊಂಡ ಮನೆಗಳ ಅಂದಾಜು ಸರ್ಕಾರಕ್ಕಿದೆಯೇ ; ಇದ್ದಲ್ಲಿ, ಜಿಲ್ಲಾವಾರು ಪ್ರತ್ಯೇಕ ಮಾಹಿತಿ ಒದಗಿಸುವುದು ;

(ಆ) ಕೇಬಲ್ ಅಳವಡಿಕೆಯಿಂದಾಗಿ ಸರ್ಕಾರಕ್ಕೆ ಆದಾಯವಿದೆಯೇ, ಇದ್ದಲ್ಲಿ ಕಳೆದ ೫ ವರ್ಷಗಳ ಅವಧಿಯಲ್ಲಿ ಸರ್ಕಾರಕ್ಕೆ ಸಂದ ತೆರಿಗೆ ಎಷ್ಟು ; ಮಾಹಿತಿ ಒದಗಿಸುವುದು ;

(ಇ) ಮರಗಳು, ಟೆಲಿಫೋನ್ ಕಂಬಗಳು ಸೇರಿದಂತೆ ಕೇಬಲ್ ವೈರ್‌ಗಳನ್ನು ಮನೆಗಳಿಗೆ ಹಾಯಿಸಿ ಸಂಪರ್ಕಿಸಿರುವ, ಮಾಸಿಕ ದರ ನಿಗದಿಯಲ್ಲಿ ವ್ಯತ್ಯಾಸವಿರುವ ಅಂಶವನ್ನು ಸರ್ಕಾರವು

ಗಂಭೀರವಾಗಿ ಪರಿಗಣಿಸಿದೆಯೇ ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರವು ಕೈಗೊಂಡ ಕ್ರಮಗಳು ಏನು ? (ಮಾಹಿತಿ ಒದಗಿಸುವುದು)

## ಪಿ.ಹೆಚ್.ಡಿ. ಸಂಶೋಧನಾರ್ಥಿಗಳ ಅಧ್ಯಯನ ರಜೆ ಹಾಗೂ ಸಮರ್ಪಕ ತೊಡಗಿಸುವಿಕೆ

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೨೯ (೪೩೧) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ವಿಶ್ವವಿದ್ಯಾನಿಲಯಗಳಲ್ಲಿ ಪಿ.ಹೆಚ್.ಡಿ. ಅಧ್ಯಯನ ನಡೆಸುತ್ತಿರುವ ಸಂಶೋಧನಾರ್ಥಿಗಳ ಅಂದಾಜು ಸರ್ಕಾರಕ್ಕೆ ಇದೆಯೇ ; ಹಾಗಿದ್ದಲ್ಲಿ, ವಿಷಯವಾರು, ವಿಶ್ವವಿದ್ಯಾನಿಲಯವಾರು, ಸರ್ಕಾರಿ ಸೇವೆಯ ಪ್ರಾಧ್ಯಾಪಕರು/ಉಪನ್ಯಾಸಕರು ಸೇರಿದಂತೆ ಪ್ರತ್ಯೇಕವಾದ ಮಾಹಿತಿಯನ್ನು ಒದಗಿಸುವುದು ;

(ಆ) ಸರ್ಕಾರಿ ಕಾಲೇಜು ಅಧ್ಯಾಪಕರು, ಉಪನ್ಯಾಸಕರು Faculty Improvement Project ಯೋಜನೆಯಡಿ ಪಿ.ಹೆಚ್.ಡಿ.ಗೆ ಅಧ್ಯಯನ ಸಲುವಾಗಿ ಅವಕಾಶ, ಅನುಮತಿ ಪಡೆದು ಅಧ್ಯಯನ ನಡೆಸುತ್ತಿರುವುದು ನಿಜವೇ ; ಹಾಗಿದ್ದಲ್ಲಿ, ಈ ಯೋಜನೆಯಡಿ ವೇತನ ಸಹಿತ ರಜೆ ಪಡೆದವರ ಪಿ.ಹೆಚ್.ಡಿ. ಅಧ್ಯಯನ ಕಾಲಾವಧಿ, ಪೂರ್ಣಗೊಂಡ ಕುರಿತಾದ ಸಂಪೂರ್ಣ ಮಾಹಿತಿಯನ್ನು ಕಾಲೇಜುವಾರು ಸಮೇತ ಮಾಹಿತಿ ಒದಗಿಸುವುದು ;



(ಇ) ಹೆಚ್ಚಿನ ವಿದ್ಯಾರ್ಹತೆ ಪಡೆದು ಹಿಂದಿರುಗಿದ ಉಪನ್ಯಾಸಕರ ಕೌಶಲ್ಯ, ಜ್ಞಾನವನ್ನು ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸುವ ನಿಟ್ಟಿನಲ್ಲಿ ತೊಡಗಿಸಿಕೊಳ್ಳಲಾಗುತ್ತಿದೆಯೇ, ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಅನುಸರಿಸಲಾಗುತ್ತಿರುವ ಕ್ರಮಗಳೇನು ? (ಮಾಹಿತಿ ಒದಗಿಸುವುದು)

## ರಾಜ್ಯದ ಪದವಿ ಮತ್ತು ಸ್ನಾತಕೋತ್ತರ ಪದವೀಧರರ ನಿರುದ್ಯೋಗ ಸಮಸ್ಯೆ

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೩೦ (೪೩೨) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳ ಅವಧಿಯಲ್ಲಿ ರಾಜ್ಯದ ವಿವಿಧ ವಿಶ್ವವಿದ್ಯಾನಿಲಯಗಳಿಂದ ವಿವಿಧ ಪದವಿ ಪಡೆದ ಪದವೀಧರರು ಮತ್ತು ಸ್ನಾತಕೋತ್ತರ ಪದವೀಧರರ ಅಂದಾಜು ಸರ್ಕಾರಕ್ಕಿದೆಯೇ, ಹಾಗಿದ್ದಲ್ಲಿ, ವರ್ಷವಾರು ಪ್ರತ್ಯೇಕ ಮಾಹಿತಿ ಒದಗಿಸುವುದು ;

(ಆ) ಇದುವರೆವಿಗೆ ರಾಜ್ಯದಲ್ಲಿ ನೋಂದಾಯಿತವಾಗಿರುವ ಪದವೀಧರರ ಮತ್ತು ಸ್ನಾತಕೋತ್ತರ ಪದವೀಧರರ ಅಂದಾಜು ಮಾಹಿತಿ ಸರ್ಕಾರಕ್ಕೆ ಇದೆಯೇ ; ಹಾಗಿದ್ದಲ್ಲಿ, ಪ್ರತ್ಯೇಕ ಮಾಹಿತಿ ಒದಗಿಸುವುದು ;

(ಇ) ಪದವಿ ಮತ್ತು ಸ್ನಾತಕೋತ್ತರ ಪದವಿಯ ನಂತರದಲ್ಲಿ ಸೂಕ್ತ ಉದ್ಯೋಗ ದೊರಕುತ್ತಿಲ್ಲವೆಂಬ ಮಾಹಿತಿ ನಿಜವೇ ; ಹಾಗಿದ್ದಲ್ಲಿ,

ವಿದ್ಯಾವಂತ ನಿರುದ್ಯೋಗಿಗಳ ಸಮಸ್ಯೆ ಪರಿಹರಿಸುವ ನಿಟ್ಟಿನಲ್ಲಿ ಸರ್ಕಾರವು ಯಾವ ಕ್ರಮಗಳನ್ನು ಕೈಗೊಂಡಿದೆ ? (ಮಾಹಿತಿ ಒದಗಿಸುವುದು)

## ಅಬಕಾರಿ ಇಲಾಖೆಯಿಂದ ಆದಾಯ ಕಡಿಮೆಯಾಗಿರುವ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೩೧ (೩೮೩) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ನೇ ಸಾಲಿನಲ್ಲಿ ಅಬಕಾರಿ ಇಲಾಖೆಯಿಂದ ನಿರೀಕ್ಷಿಸಿದ ಆದಾಯಕ್ಕಿಂತ ಎಷ್ಟು ಕೋಟಿ ಕಡಿಮೆಯಾಗಿದೆ, ಇದಕ್ಕೆ ಉನ್ನತ ಮಟ್ಟದಲ್ಲಿನ ನಿರ್ಲಕ್ಷತೆ, ಅದಕ್ಷತೆ ಹಾಗೂ ಭ್ರಷ್ಠಾಚಾರ ಕಾರಣವಲ್ಲವೆ ;

(ಆ) ಬೆಂಗಳೂರು ಉತ್ತರ ತಾಲ್ಲೂಕಿನಲ್ಲಿರುವ ಸಿ.ಎಲ್. ೨ ಹಾಗೂ ಸಿ.ಎಲ್. ೯ ಸನ್ನದ್ದುದಾರರ ಹೆಸರು, ಸನ್ನದು ಸಂಖ್ಯೆ ಇತ್ಯಾದಿ ಪೂರ್ಣ ಮಾಹಿತಿ ಒದಗಿಸುವುದು ;

(ಇ) ಇಲ್ಲಿನ ಯಾವ ಯಾವ ಸಿ.ಎಲ್. ೨ ಸನ್ನದುದಾರರು ಸಿ.ಎಲ್. ೯ ರೀತಿ ಮಹಡಿಗಳಲ್ಲಿ ವ್ಯಾಪಾರ ವಹಿವಾಟು ನಡೆಸುತ್ತಿದ್ದಾರೆ. ಇದರಿಂದ ಸರ್ಕಾರಕ್ಕೆ ಆಗುತ್ತಿರುವ ನಷ್ಟವೆಷ್ಟು ; ಇದನ್ನು ತಪ್ಪಿಸಲು ಕೈಗೊಳ್ಳುವ ಕ್ರಮಗಳೇನು ; ಇದಕ್ಕೆ ಜವಾಬ್ದಾರರಾದ ಅಧಿಕಾರಿಗಳು ಯಾರು ಯಾರು ;



(ಈ) ಇಲ್ಲಿ ೨ ವರ್ಷಕ್ಕಿಂತ ಹೆಚ್ಚು ಅವಧಿ ಇರುವ ಅಧಿಕಾರಿ/ ನೌಕರರುಗಳ ಪೂರ್ಣ ವಿವರ ಒದಗಿಸುವುದು ; ಅಬಕಾರಿ ಪರಿವೀಕ್ಷಕರು ಡಿ.ಸಿ. ಹೆಸರಿನಲ್ಲಿ ಪ್ರತಿ ಸನ್ನದದಾರರಿಂದ ಪ್ರತಿ ತಿಂಗಳು ರೂ. ೧೦ ಸಾವಿರ ವಸೂಲಿ ಮಾಡಿ ವ್ಯಾಪಕ ಭ್ರಷ್ಠಾಚಾರದಲ್ಲಿ ತೊಡಗಿರುವುದರಿಂದ ಕಾನೂನು ಬಾಹಿರ ಚಟುವಟಿಕೆಗಳು ಹೆಚ್ಚಾಗಿ, ಸರ್ಕಾರಕ್ಕೆ ಕೋಟ್ಯಾಂತರ ರೂ. ನಷ್ಟವಾಗಲು ಕಾರಣವಾಗಿದ್ದು, ೨ ವರ್ಷಕ್ಕಿಂತ ಹೆಚ್ಚು ಸೇವೆ ಮಾಡಿರುವ ಅಧಿಕಾರಿ/ನೌಕರರುಗಳನ್ನು ಕೂಡಲೇ ಗ್ರಾಮಾಂತರ ಕೇಂದ್ರಗಳಿಗೆ ವರ್ಗಾಯಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

## ಗ್ರಾಮ, ಪಟ್ಟಣ, ನಗರಗಳಲ್ಲಿ ಟಿ.ವಿ. ಕೇಬಲ್ ಅಳವಡಿಕೆ ಬಗ್ಗೆ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ) :–**

೩೩೨ (೩೮೪) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಯಾವ ಯಾವ ಗ್ರಾಮ, ಪಟ್ಟಣ, ನಗರಗಳಲ್ಲಿ ಟಿ.ವಿ. ಕೇಬಲ್ ವ್ಯವಸ್ಥೆ ಒದಗಿಸಲಾಗಿದೆ ; (ಗ್ರಾಮ, ಪಟ್ಟಣ, ನಗರವಾರು ವಿವರ ನೀಡುವುದು)

(ಆ) ಟಿ.ವಿ. ಕೇಬಲ್ ನಿಯಂತ್ರಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಕೇಬಲ್‌ಗಳು ಭೂಮಿ ಒಳಗಡೆ ಅಥವಾ ಮೇಲ್ಭಾಗದಲ್ಲಿ ಹಾಕಬೇಕೊ, ಇದಕ್ಕೆ ಇರುವ ನಿಬಂಧನೆಗಳು ಯಾವುವು ;

(ಈ) ಕೇಬಲ್ ಅಳವಡಿಸಲು ಹಾಗೂ ಸಂಪರ್ಕಕ್ಕೆ ನಿಗಧಿಪಡಿಸಿರುವ ದರ ಎಷ್ಟು ; ಇದರಿಂದ ಸರ್ಕಾರಕ್ಕೆ ಬರುತ್ತಿರುವ ಆದಾಯ ಎಷ್ಟು ? (ವಿವರ ನೀಡುವುದು)

## ಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿರುವ ಶಿಕ್ಷಕರ ಬಗ್ಗೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೩೩ (೩೮೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಗ್ರಾಮಾಂತರ ಮತ್ತು ಬೆಂಗಳೂರು ಜಿಲ್ಲೆಯಲ್ಲಿ ಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು ;

(ಆ) ಇತ್ತೀಚೆಗೆ ನೇಮಕಗೊಂಡಿರುವ ಗುತ್ತಿಗೆ ಶಿಕ್ಷಕರ ಸಂಖ್ಯೆ ಎಷ್ಟು ;

(ಇ) ಇನ್ನೂ ಮುಂದೆಯೂ ಗುತ್ತಿಗೆ ಆಧಾರದ ಮೇಲೆ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗುವುದೇ ;

(ಈ) ಇನ್ನೂ ಎಷ್ಟು ಮಂದಿ ಶಿಕ್ಷಕರನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗುವುದು ? (ಮಾಹಿತಿ ನೀಡುವುದು)

## ಅಂಗನವಾಡಿ ಶಿಶು ವಿಹಾರದ ಬಗ್ಗೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೩೪ (೩೮೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನಲ್ಲಿರುವ ಅಂಗನವಾಡಿ ಶಿಶು ವಿಹಾರ ಕೇಂದ್ರಗಳ ಸಂಖ್ಯೆ ಎಷ್ಟು ;



(ಆ) ಅಂಗನವಾಡಿ ಶಿಶು ವಿಹಾರ ಕೇಂದ್ರಗಳಲ್ಲಿ ಮಕ್ಕಳಿಗೆ ಸರಿಯಾದ ಪೌಷ್ಠಿಕ ಆಹಾರ ನೀಡುವಲ್ಲಿ ತಾರತಮ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಒಂದು ಮಗುವಿಗೆ ನೀಡುತ್ತಿರುವ ಪೌಷ್ಠಿಕ ಆಹಾರದ ಪ್ರಮಾಣ ಎಷ್ಟು ? (ವಿವರ ನೀಡುವುದು)

## ದಾವಣಗೆರೆ ವಿಶ್ವವಿದ್ಯಾಲಯದ ಬೋಧಕ/ಬೋಧಕೇತರ ಸಿಬ್ಬಂದಿ ವಿವರ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ) :–**

೩೩೫ (೩೮೮) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಾವಣಗೆರೆ ವಿಶ್ವವಿದ್ಯಾಲಯಕ್ಕೆ ಪ್ರಾರಂಭದಲ್ಲಿ ಮಂಜೂರಾತಿ ನೀಡಿದ ಹುದ್ದೆಗಳ ಸಂಖ್ಯೆ ಎಷ್ಟು ; (ವೃಂದವಾರು ಮಾಹಿತಿ ನೀಡುವುದು)

(ಆ) ಇವುಗಳನ್ನು ಭರ್ತಿ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಭರ್ತಿ ಮಾಡಿದ್ದರೆ, ವಿವರ ನೀಡುವುದು ; ಮೀಸಲಾತಿ ಕ್ರಮ ಕೈಗೊಂಡಿರುವ ಬಗ್ಗೆ ವಿವರ ನೀಡುವುದು ;

(ಇ) ವಿದ್ಯಾರ್ಥಿಗಳ ಸಂಖ್ಯೆಯ ಅನುಗುಣವಾಗಿ ಭರ್ತಿ ಮಾಡಲಾಗಿದೆಯೇ ;

(ಈ) ಇನ್ನು ಭರ್ತಿ ಮಾಡಬೇಕಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ವೃಂದವಾರು ವಿವರ ನೀಡುವುದು) ವಿಳಂಬಕ್ಕೆ ಕಾರಣಗಳೇನು ;

(ವಿವರ ನೀಡುವುದು) ಮೀಸಲಾತಿ ಬಾಕಿ ಉಳಿದಿದ್ದರೆ ಮಾಹಿತಿ ನೀಡುವುದು ;

(ಉ) ದಾವಣಗೆರೆ ವಿಶ್ವವಿದ್ಯಾಲಯದ ವ್ಯಾಪ್ತಿಗೆ ಬರುವ ಸರ್ಕಾರಿ ಹಾಗೂ ಖಾಸಗಿ ಕಾಲೇಜುಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ದಾವಣಗೆರೆ ವಿಶ್ವವಿದ್ಯಾಲಯಕ್ಕೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಅನುದಾನದ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ) :–**

೩೩೬ (೩೮೯) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಾವಣಗೆರೆ ವಿಶ್ವವಿದ್ಯಾಲಯಕ್ಕೆ ಈವರೆವಿಗೂ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಒದಗಿಸಲಾಗಿರುವ ಅನುದಾನ ಎಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಆ) ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; ಆ ಪೈಕಿ ಪೂರ್ಣಗೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ; ಬಾಕಿ ಇರುವ ಕಾಮಗಾರಿಗಳ ಸಂಖ್ಯೆ ಎಷ್ಟು ; ಕಾಮಗಾರಿಗಳನ್ನು ಪೂರ್ಣ ಮಾಡದಿರುವುದಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಇ) ಈ ಕಾಮಗಾರಿಗಳು ಗುಣಮಟ್ಟದಿಂದ ಕೂಡಿದೆಯೇ ; ಬಿಡುಗಡೆಯಾದ ಹಣದಲ್ಲಿ ಬಾಕಿ ಉಳಿದಿರುವ ಹಣ ಎಷ್ಟು ? (ವಿವರ ನೀಡುವುದು)



## ರಾಜ್ಯದ ಜಿಲ್ಲಾ ಪಂಚಾಯತಿ ತಾಲ್ಲೂಕು ಪಂಚಾಯತಿ ಹಾಗೂ ಗ್ರಾಮ ಪಂಚಾಯತಿ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೩೭ (೩೯೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಜಿಲ್ಲಾ ಪಂಚಾಯತಿಗಳ ಸಂಖ್ಯೆ ಎಷ್ಟು ; ಆಯಾ ಜಿಲ್ಲಾ ಪಂಚಾಯತಿಯಲ್ಲಿರುವ ಸದಸ್ಯರುಗಳ ಸಂಖ್ಯೆ ಎಷ್ಟು ; (ಕ್ಷೇತ್ರದ ಹೆಸರುಗಳೊಂದಿಗೆ ವಿವರವನ್ನು ಒದಗಿಸುವುದು)

(ಆ) ರಾಜ್ಯದಲ್ಲಿರುವ ತಾಲ್ಲೂಕು ಪಂಚಾಯತಿಗಳ ಸಂಖ್ಯೆ ಎಷ್ಟು ; (ಸದಸ್ಯರ ಸಂಖ್ಯೆ ಮತ್ತು ಕ್ಷೇತ್ರದ ಹೆಸರುಗಳೊಂದಿಗೆ ವಿವರವನ್ನು ಒದಗಿಸುವುದು)

(ಇ) ರಾಜ್ಯದಲ್ಲಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು ; ಆಯಾ ತಾಲ್ಲೂಕಿನ ಗ್ರಾಮ ಪಂಚಾಯತಿ ಹೆಸರು ಹಾಗೂ ಆ ಗ್ರಾಮ ಪಂಚಾಯತಿಗಳ ವಾರ್ಡ್ ಸಂಖ್ಯೆಗಳೆಷ್ಟು ? (ಮಾಹಿತಿ ಒದಗಿಸುವುದು)

## ಹಳ್ಳಿಗಳಿಗೆ ಶೌಚಾಲಯ ಮಂಜೂರು ಕುರಿತು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೩೮ (೩೯೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಬುರ್ಗಿ ಜಿಲ್ಲೆಯ ಆಳಂದ ಪಟ್ಟಣ ಮತ್ತು ಅದರ ವ್ಯಾಪ್ತಿಗೆ ಬರುವ ಒಟ್ಟು ೧೧೫ ಹಳ್ಳಿಗಳಿಗೆ ಸರ್ಕಾರದಿಂದ ಮಂಜೂರಾಗಿರುವ ಶೌಚಾಲಯಗಳ ಸಂಖ್ಯೆ ಎಷ್ಟು ;

(ಆ) ಆ ಪೈಕಿ ನಿರ್ಮಿಸಲಾಗಿರುವ ಶೌಚಾಲಯಗಳ ಸಂಖ್ಯೆ ಎಷ್ಟು ? (ವಿವರವನ್ನು ಒದಗಿಸುವುದು)

## ಗ್ರಾಮ ಪಂಚಾಯಿತಿಗಳ ವಿವಿಧ ಯೋಜನೆಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೩೯ (೩೯೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯಿತಿಗಳ ಯಾವ ಯಾವ ಯೋಜನೆಗಳ ಅಡಿಯಲ್ಲಿ ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರಗಳಿಂದ ಬಿಡುಗಡೆಗೊಳಿಸಿದ ಅನುದಾನವೆಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು, ಪಂಚಾಯಿತಿವಾರು ವಿವರ ನೀಡುವುದು)

(ಆ) ಈ ಬಿಡುಗಡೆಗೊಳಿಸಿದ ಅನುದಾನದಲ್ಲಿ ಪೂರ್ಣಗೊಂಡ ಯೋಜನೆಗಳಾವುವು ; ಹಾಗೂ ಬಾಕಿ ಇರುವ ಯೋಜನೆಗಳಾವುವು ?(ಪಂಚಾಯಿತಿವಾರು ಮಾಹಿತಿ ಒದಗಿಸುವುದು)



## ಶಾಲೆಗಳ ಮಂಜೂರಾತಿ.

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೪೦ (೪೪೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಬುರ್ಗಿ ಜಿಲ್ಲೆಯ ಆಳಂದ ಪಟ್ಟಣ ಮತ್ತು ಅದರ ವ್ಯಾಪ್ತಿಗೆ ಬರುವ ಹೋಬಳಿ ಹಾಗೂ ಹಳ್ಳಿಗಳಿಗೆ ಸರ್ಕಾರದಿಂದ ಎಷ್ಟು ಸರ್ಕಾರಿ ಪ್ರೌಢ ಮತ್ತು ಪ್ರಾಥಮಿಕ ಶಾಲೆಗಳು ಮಂಜೂರಾಗಿವೆ ; (ಪಟ್ಟಣ, ಹೋಬಳಿವಾರು, ಹಳ್ಳಿವಾರು ಮಾಹಿತಿ ಒದಗಿಸುವುದು)

(ಆ) ಮಂಜೂರಾಗಿರುವ ಶಾಲೆಗಳ ಪೈಕಿ ಎಷ್ಟು ಕಡೆ ಕಾರ್ಯನಿರ್ವಹಿಸುತ್ತಿವೆ ; (ಪಟ್ಟಣ, ಹೋಬಳಿವಾರು, ಹಳ್ಳಿವಾರು ಮಾಹಿತಿ ಒದಗಿಸುವುದು)

(ಇ) ಸದರಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧ್ಯಾಪಕರುಗಳ ಸಂಖ್ಯೆ ಎಷ್ಟು ? (ಶಾಲಾವಾರು, ಹೆಸರುವಾರು ಮಾಹಿತಿ ಒದಗಿಸುವುದು)

## ಆಶ್ರಯ ಯೋಜನೆಯಡಿ ಮನೆ ನೀಡುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೪೧ (೪೪೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಬುರ್ಗಿ ಜಿಲ್ಲೆಯ ಆಳಂದ ಪಟ್ಟಣ ಮತ್ತು ಅದರ ವ್ಯಾಪ್ತಿಗೆ ಬರುವ ಹಳ್ಳಿಗಳಿಗೆ ಸರ್ಕಾರದಿಂದ ಎಷ್ಟು ಜನರಿಗೆ ಆಶ್ರಯ

ಮನೆಯನ್ನು ನೀಡಲಾಗಿದೆ ; ನೀಡದಿದ್ದಲ್ಲಿ, ಯಾವಾಗ ನೀಡಲಾಗುವುದು ;

(ಆ) ನೀಡಿದ್ದರೆ, ಎಷ್ಟು ಜನ ಫಲಾನುಭವಿಗಳಿಗೆ ಅದನ್ನು ವಿತರಿಸಲಾಗಿದೆ ? (ಹೆಸರು ಮತ್ತು ವಿಳಾಸದೊಂದಿಗೆ ಮಾಹಿತಿ ಒದಗಿಸುವುದು)

## ಚಲನಚಿತ್ರ ಚಿತ್ರೀಕರಣಕ್ಕೆ ಪ್ರಾಯೋಜಕತ್ವ.

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು)**

೩೪೨ (೩೯೩) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪ್ರವಾಸಿ ಸ್ಥಳಗಳು/ಪ್ರೇಕ್ಷಣೀಯ ಸ್ಥಳಗಳಲ್ಲಿ, ಚಲನಚಿತ್ರ TV ಸಿರಿಯಲ್‌ಗಳ ಚಿತ್ರೀಕರಣ ಮಾಡಿದರೆ, ಪ್ರವಾಸೋದ್ಯಮ ಇಲಾಖೆ ಪ್ರಾಯೋಜಕತ್ವ ನೀಡುತ್ತದೆಯೇ ; ನೀಡುತ್ತಿದ್ದಲ್ಲಿ, ವಿವರಗಳನ್ನು ನೀಡುವುದು ;

(ಆ) ನೀಡದಿದ್ದಲ್ಲಿ, ರಾಜ್ಯದ ಪ್ರವಾಸಿ ಸ್ಥಳಗಳ ಪ್ರಚಾರದ ಉದ್ದೇಶದಿಂದ ಚಲನಚಿತ್ರಗಳ ಚಿತ್ರೀಕರಣಕ್ಕೆ ಪ್ರಾಯೋಜಕತ್ವ ನೀಡಲು ಚಿಂತಿಸುವುದೇ ?

## ವಸತಿ ರಹಿತ ಕುಟುಂಬಗಳು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೩೪೩ (೩೯೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಸತಿ ರಹಿತ ಕುಟುಂಬಗಳನ್ನು ಗುರುತಿಸಲಾಗಿದೆಯೇ ; ಗುರುತಿಸಿದ್ದಲ್ಲಿ, ಜಿಲ್ಲಾವಾರು ವಿವರಗಳನ್ನು ನೀಡುವುದು ;



(ಆ) ಇಲ್ಲದಿದ್ದಲ್ಲಿ, ಗುರುತಿಸಲು ಯಾವಾಗ ಕಾರ್ಯಕ್ರಮ ರೂಪಿಸಲಾಗುವುದು ;

(ಇ) ರಾಜ್ಯವನ್ನು ಯಾವಾಗ 'ವಸತಿ ರಹಿತ ಕುಟುಂಬ' ರಾಜ್ಯವನ್ನಾಗಿ ಮಾಡಲಾಗುವುದು ;

(ಈ) ಚಲನಚಿತ್ರ, ಕಿರುತೆರೆ ಮತ್ತು ರಂಗಭೂಮಿ ರಂಗದಲ್ಲಿರುವ ವಸತಿ ರಹಿತ ಕಲಾವಿದರು, ತಾಂತ್ರಿಕ ವರ್ಗದವರು ಮತ್ತು ಕಾರ್ಮಿಕರನ್ನು ಗುರುತಿಸಿ, ವಸತಿಗಳನ್ನು ಒದಗಿಸಲು ಸರ್ಕಾರ ತತ್‌ಕ್ಷಣ ಕ್ರಮ ಕೈಗೊಳ್ಳುವುದೇ ?

## ಚಲನಚಿತ್ರ ಕಾರ್ಮಿಕರಿಗೆ ವಸತಿ.

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು)**

೩೪೪ (೩೯೪) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕನ್ನಡ ಚಲನಚಿತ್ರರಂಗದ ಕಾರ್ಮಿಕರಿಗಾಗಿ ರಾಜೀವ್ ಗಾಂಧಿ ವಸತಿ ನಿಗಮದ ವತಿಯಿಂದ ವಸತಿ ಯೋಜನೆಯನ್ನು ಸರ್ಕಾರ ರೂಪಿಸಿದೆಯೇ ;

(ಆ) ರೂಪಿಸಿದ್ದಲ್ಲಿ, ಯೋಜನೆಯ ರೂಪುರೇಷೆಗಳೇನು ;

(ಇ) ರೂಪಿಸದಿದ್ದಲ್ಲಿ, ರೂಪಿಸಲು ಸರ್ಕಾರ ಚಿಂತಿಸುವುದೇ ?

## ಹೊರಗುತ್ತಿಗೆ ನೌಕರರ ಸೇವೆ ಖಾಯಂ ಕುರಿತು.

**ಶ್ರೀ ಕೆ.ಬಿ.ಶಾಣಪ್ಪ (ನಾಮನಿರ್ದೇಶನ ಹೊಂದಿದವರು) :–**

೩೪೫ (೯೬೬) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ವಿಶ್ವವಿದ್ಯಾಲಯ ಪ್ರಾರಂಭಗೊಂಡಿದ್ದು ಯಾವಾಗ ;

(ಆ) ಈ ವಿಶ್ವವಿದ್ಯಾಲಯದಲ್ಲಿ ಸದ್ಯ ಹೊರಗುತ್ತಿಗೆ ಆಧಾರದ ಮೇಲೆ ಎಷ್ಟು ಜನ ಯಾವ ಯಾವ ಹುದ್ದೆಯಲ್ಲಿ ಎಷ್ಟು ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ ;

(ಇ) ಸರ್ಕಾರ ಇವರ ಸೇವೆಯನ್ನು ಖಾಯಂಗೊಳಿಸಲು ಇದುವರೆಗೆ ಕೈಗೊಂಡ ಕ್ರಮಗಳೇನು ;

(ಈ) ಇವರ ಸೇವೆಯನ್ನು ಖಾಯಂಗೊಳಿಸಲು ಕ್ರಮ ವಹಿಸದಿದ್ದಲ್ಲಿ ಇದಕ್ಕೆ ಕಾರಣಗಳೇನು ?

## ದಾವಣಗೆರೆ ವಿಶ್ವವಿದ್ಯಾನಿಲಯದ ಅಭಿವೃದ್ಧಿ ಕುರಿತು.

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೪೬ (೯೬೭) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಾವಣಗೆರೆ ವಿಶ್ವವಿದ್ಯಾನಿಲಯದಲ್ಲಿ ಮೂಲಭೂತ ಸೌಲಭ್ಯಗಳು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;



(ಆ) ಹಾಗಿದ್ದಲ್ಲಿ, ದಾವಣಗೆರೆ ವಿಶ್ವವಿದ್ಯಾನಿಲಯದ ಬಾಕಿ ಇರುವ ವಿವಿಧ ಕಟ್ಟಡಗಳ ಕಾಮಗಾರಿಗಳು ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ಆದ್ಯತೆ ಮೇರೆಗೆ ಕೈಗೆತ್ತಿಕೊಳ್ಳಲಾಗುವುದು ಯಾವಾಗ ;

(ಇ) ಸದರಿ ವಿಶ್ವವಿದ್ಯಾನಿಲಯದಲ್ಲಿ ವಿಜ್ಞಾನ ಕೇಂದ್ರ ಸ್ಥಾಪನೆ ಮತ್ತು ಕ್ರೀಡಾ ಸಂಪನ್ಮೂಲ ಅಭಿವೃದ್ಧಿ ಹಾಗೂ ಕುಡಿಯುವ ನೀರಿನ ಸೌಲಭ್ಯಗಳನ್ನು ಶೀಘ್ರದಲ್ಲಿ ಒದಗಿಸಲಾಗುವುದೆ ;

(ಈ) ಸದರಿ ವಿಶ್ವವಿದ್ಯಾನಿಲಯದಲ್ಲಿ ಖಾಲಿ ಇರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ; ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಉತ್ತರ ಕರ್ನಾಟಕದ ಶಾಲೆಗಳಲ್ಲಿ ಟೆಲಿ ಶಿಕ್ಷಣ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೪೭ (೪೨೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕರ್ನಾಟಕದಲ್ಲಿನ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳು ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಇಲ್ಲಿನ ಶಾಲೆಗಳಲ್ಲಿ ಹೆಚ್ಚಿನ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಇ) ಸದರಿ ಶಾಲೆಗಳನ್ನು ಖಾಸಗಿ ಸಹಭಾಗಿತ್ವದಲ್ಲಿ ಅಭಿವೃದ್ಧಿ ಪಡಿಸಲಾಗುವುದೇ ;

(ಈ) ಈ ಶಾಲೆಗಳಲ್ಲಿ ಟೆಲಿ ಶಿಕ್ಷಣ ಸೌಲಭ್ಯಗಳನ್ನು ಕಲ್ಪಿಸಲಾಗುವುದೇ ; ಹಾಗಿದ್ದಲ್ಲಿ, ವಿವರಗಳನ್ನು ನೀಡುವುದು ?

## ಬಯಲು ಶೌಚಾಲಯ ಮುಕ್ತ 'ಗ್ರಾಮ ಭಾರತ' ನಿರ್ಮಾಣ ಯೋಜನೆ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೪೮ (೪೨೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣ ಬಡ ಮಹಿಳೆಯರ ಆರ್ಥಿಕ ಸಬಲೀಕರಣಕ್ಕಾಗಿ ಸರ್ಕಾರವು ಕೈಗೊಳ್ಳುತ್ತಿರುವ ಕಾರ್ಯಕ್ರಮಗಳೇನು ;

(ಆ) ಬಯಲು ಶೌಚಾಲಯ ಮುಕ್ತ 'ಗ್ರಾಮ ಭಾರತ' ನಿರ್ಮಾಣ ಯೋಜನೆಯನ್ನು ರೂಪಿಸಲಾಗಿದೆಯೇ ; (ವಿವರಗಳನ್ನು ನೀಡುವುದು)

(ಇ) ಗ್ರಾಮೀಣ ಮಹಿಳೆಯರಲ್ಲಿ ಶೌಚಾಲಯ ಬಳಕೆ ಮತ್ತು ಸ್ವಚ್ಛತೆ ಕುರಿತು ಹೆಚ್ಚಿನ ಅರಿವು ಮೂಡಿಸಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ?



## ಉತ್ತರ ಕರ್ನಾಟಕದ ಗ್ರಾಮಗಳಿಗೆ ಉತ್ತಮ ರಸ್ತೆ ಮತ್ತು ಚರಂಡಿ ವ್ಯವಸ್ಥೆ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೪೯ (೪೩೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಭಿವೃದ್ಧಿ ವಂಚಿತ ಉತ್ತರ ಕರ್ನಾಟಕದ ಗ್ರಾಮಗಳಲ್ಲಿ ಉತ್ತಮ ರಸ್ತೆ ಮತ್ತು ಚರಂಡಿ ವ್ಯವಸ್ಥೆಯನ್ನು ಒದಗಿಸಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ;

(ಆ) ಗ್ರಾಮ ನೈರ್ಮಲ್ಯ ಕಾಪಾಡುವ ದಿಸೆಯಲ್ಲಿ ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಇ) ಅಂಗನವಾಡಿ ಮಕ್ಕಳಿಗಾಗಿ ಶೌಚಾಲಯ ಮತ್ತು ನೈರ್ಮಲ್ಯ ಕಾಪಾಡುವ ಬಗ್ಗೆ ಮಕ್ಕಳಲ್ಲಿ ಅರಿವು ಮೂಡಿಸಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ?

## ಉತ್ತರ ಕರ್ನಾಟಕದ ಜನತೆಗೆ ವಸತಿ ಸೌಲಭ್ಯಗಳನ್ನು ಒದಗಿಸುವುದು

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೫೦ (೪೩೪) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕರ್ನಾಟಕದ ಜನತೆ ಸೂಕ್ತ ವಸತಿ ಸೌಲಭ್ಯಗಳಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವಸತಿ ಹಂಚಿಕೆಯಲ್ಲಿನ ತಾರತಮ್ಯವನ್ನು ಸರಿದೂಗಿಸಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ;

(ಇ) ಕಳೆದ ೩ ವರ್ಷಗಳಲ್ಲಿ ವಿವಿಧ ಜಿಲ್ಲೆಗಳಲ್ಲಿ ಹಂಚಿಕೆ ಮಾಡಲಾಗಿರುವ ಮನೆಗಳು ಮತ್ತು ನಿವೇಶನಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಡಾ॥ ನಂಜುಂಡಪ್ಪ ವರದಿ ಪ್ರಕಾರ ಉತ್ತರ ಕರ್ನಾಟಕದಲ್ಲಿನ ಜನರಿಗೆ ಹೆಚ್ಚಿನ ಸಂಖ್ಯೆಯಲ್ಲಿ ವಸತಿ ಸೌಕರ್ಯಗಳನ್ನು ಕಲ್ಪಿಸಲಾಗುವುದೆ ; ಹಾಗಿದ್ದಲ್ಲಿ ಯಾವಾಗ ?

## ವಸತಿ ರಹಿತ ಕುಟುಂಬಗಳು.

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೩೫೧ (೪೦೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಸತಿ ರಹಿತ ಕುಟುಂಬಗಳನ್ನು ಗುರುತಿಸಲಾಗಿದೆಯೇ ; ಗುರುತಿಸಿದ್ದಲ್ಲಿ ಎಷ್ಟಿವೇ ; (ಜಿಲ್ಲಾವಾರು ವಿವರ ನೀಡುವುದು)

(ಆ) ಇವರ ಪೈಕಿ ಚಲನಚಿತ್ರ ರಂಗದ ವಲಯದವರೆಷ್ಟು ;

(ಇ) ಕರ್ನಾಟಕ ರಾಜ್ಯವನ್ನು ಯಾವಾಗ ವಸತಿ ರಹಿತ ಕುಟುಂಬ ಮುಕ್ತ ರಾಜ್ಯವನ್ನಾಗಿ ಮಾಡಲಾಗುವುದು ;

(ಈ) ತತ್‌ಕ್ಷಣ ಆದ್ಯತೆ ಮೇರೆಗೆ, ಚಲನಚಿತ್ರರಂಗದಲ್ಲಿರುವ ವಸತಿ ರಹಿತರನ್ನು ಗುರುತಿಸಿ, ವಸತಿಗಳನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?



## ಅಪೌಷ್ಟಿಕತೆಯಿಂದ ನರಳುತ್ತಿರುವ ಮಕ್ಕಳ ಬಗ್ಗೆ.

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೩೫೨ (೪೦೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಪೌಷ್ಟಿಕತೆಯಿಂದ ನರಳುತ್ತಿರುವ ಮಕ್ಕಳನ್ನು ಗುರುತಿಸಲಾಗಿದೆಯೇ ; ಗುರುತಿಸಿದ್ದಲ್ಲಿ, ಅಂತಹ ಮಕ್ಕಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಮಕ್ಕಳಿಗಾಗಿ ಅನುಷ್ಠಾನಗೊಳಿಸುತ್ತಿರುವ ಯೋಜನೆ/ ಕಾರ್ಯಕ್ರಮಗಳು ಯಾವ್ಯಾವು ; ವಾರ್ಷಿಕವಾಗಿ ವಿನಿಯೋಗಿಸುತ್ತಿರುವ ಹಣವೆಷ್ಟು ;

(ಇ) ಇದರಲ್ಲಿ ಹಣ ದುರುಪಯೋಗ ಮಾಡಿಕೊಂಡ ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿವೆ ;

(ಈ) ಅಪೌಷ್ಟಿಕತೆ ಮುಕ್ತ ಮಕ್ಕಳ ರಾಜ್ಯವನ್ನಾಗಿ ಕರ್ನಾಟಕ ರಾಜ್ಯವನ್ನು ಯಾವಾಗ ಮಾಡಲಾಗುವುದು ?

## ಶಾಲಾ ಕಾಲೇಜುಗಳಲ್ಲಿ ರಂಗ ಶಿಕ್ಷಕರ ನೇಮಕ.

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೩೫೩ (೩೯೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲಾ ಕಾಲೇಜುಗಳಲ್ಲಿ ಮಕ್ಕಳಿಗೆ ಪಠ್ಯಪುಸ್ತಕದಲ್ಲಿರುವ ನಾಟಕಗಳ ಬಗ್ಗೆ ಪಾಠ ಮಾಡಲಾಗುತ್ತಿದೆಯೇ ವಿನಹ, ಅದರ ಬಗ್ಗೆ

ಪ್ರಾಯೋಗಿಕವಾಗಿ ಶಿಕ್ಷಣ ನೀಡಲು ಮಾರ್ಗದರ್ಶಕರ/ಶಿಕ್ಷಕರು ಇಲ್ಲದಿರುವುದು ನಿಜವೇ ;

(ಆ) ಈ ನಿಟ್ಟಿನಲ್ಲಿ ಸರ್ಕಾರ ಶಾಲಾ ಕಾಲೇಜುಗಳಲ್ಲಿ ರಂಗಶಿಕ್ಷಕರನ್ನು ನೇಮಿಸಿಕೊಳ್ಳಲು ಚಿಂತನೆ ಮಾಡುವುದೇ ?

## ಶುದ್ಧ ಕುಡಿಯುವ ನೀರಿನ ಘಟಕ.

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೩೫೪ (೩೯೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ತೆರೆಯುವ ಯೋಜನೆ ಸರ್ಕಾರದ ಮುಂದಿದೆಯೇ ;

(ಆ) ಇದ್ದಲ್ಲಿ, ಆ ಯೋಜನೆಯ ರೂಪುರೇಷೆಗಳೇನು ?

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಸರ್ಕಾರದಿಂದ ಗುರುತಿಸಲ್ಪಟ್ಟ ಪ್ರವಾಸಿ ತಾಣಗಳ ಕುರಿತು.

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೫೫ (೪೦೨) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಸರ್ಕಾರದಿಂದ ಗುರುತಿಸಲ್ಪಟ್ಟ ಪ್ರವಾಸಿ ತಾಣಗಳು ಯಾವುವು ಮತ್ತು ಅವುಗಳ ಅಭಿವೃದ್ಧಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;



(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಸರ್ಕಾರದಿಂದ ಗುರುತಿಸಲ್ಪಟ್ಟ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಕಳೆದ ೩ ವರ್ಷಗಳಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಸರ್ಕಾರದಿಂದ ಇವುಗಳ ಅಭಿವೃದ್ಧಿಗೆ ಬಿಡುಗಡೆಯಾದ ಅನುದಾನವೆಷ್ಟು ? (ವರ್ಷವಾರು ವಿವರ ನೀಡುವುದು)

## ರಾಜ್ಯದಲ್ಲಿನ ಗ್ರಾಮಸಭೆ ಮತ್ತು ವಾರ್ಡ್ ಸಭೆಗಳಲ್ಲಿನ ವ್ಯಕ್ತವಾಗುವ ಜನರ ಭಾವನೆಗಳಿಗೆ ಸ್ಪಂದಿಸುವ ಕುರಿತು.

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೫೬ (೪೦೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಗ್ರಾಮಸಭೆ ಮತ್ತು ವಾರ್ಡ್‌ಸಭೆಗಳಲ್ಲಿ ವ್ಯಕ್ತವಾಗುವ ಜನಸಾಮಾನ್ಯರ ಭಾವನೆಗಳಿಗೆ ಸ್ಪಂದಿಸಲು ಸರ್ಕಾರ ಹಾಕಿಕೊಂಡ ಕಾರ್ಯಕ್ರಮಗಳೇನು ;

(ಆ) ಗ್ರಾಮ ಪಂಚಾಯತ್‌ಗಳ ಸಭೆಯಲ್ಲಿ ಬರತಕ್ಕಂತಹ ಮನವಿ ಮತ್ತು ನಿರ್ಣಯಗಳ ಮೇಲೆ ಕ್ರಮಕೈಗೊಳ್ಳಲು ಸರ್ಕಾರ ಹಾಕಿಕೊಂಡ ಕಾರ್ಯಕ್ರಮಗಳೇನು ;

(ಇ) ತಾಲ್ಲೂಕು ಪಂಚಾಯತ್ ಮತ್ತು ಜಿಲ್ಲಾ ಪಂಚಾಯತ್‌ಗಳ ನಿರ್ಣಯಗಳ ಮೇಲಿನ ಕ್ರಮಕ್ಕೆ ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು ;

(ಈ) ಜನಸಾಮಾನ್ಯರ ಭಾವನೆಗಳಿಗೆ ಸ್ಪಂದಿಸದ ವಿಧೇಯಕವು ಬಲಿಷ್ಠ ಪಂಚಾಯತ್ ರಾಜ್ ವಿಧೇಯಕವಾಗಲಾರದು ಎಂಬುದನ್ನು ಸರ್ಕಾರ ಗಮನಿಸಿದೆಯೇ ?

## ರಾಜ್ಯದಲ್ಲಿ ಎಂಎಸ್ಐಎಲ್ ಮದ್ಯ ಮಾರಾಟದ ಅಂಗಡಿಗಳನ್ನು ತೆರೆಯಲು ಇರುವ ಮಾನದಂಡದ ಕುರಿತು.

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೫೭ (೪೦೩) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಂಎಸ್ಐಎಲ್ ಮದ್ಯ ಮಾರಾಟದ ಅಂಗಡಿಗಳನ್ನು ತೆರೆಯಲು ಇರುವ ಮಾನದಂಡಗಳೇನು ;

(ಆ) ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ಎಷ್ಟು ಎಂಎಸ್ಐಎಲ್ ಮದ್ಯ ಮಾರಾಟದ ಅಂಗಡಿಗಳನ್ನು ನೂತನವಾಗಿ ತೆರೆಯುವ ಯೋಜನೆ ಸರ್ಕಾರದ ಮುಂದಿದೆ ;

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಗೂಡಂಗಡಿಗಳಲ್ಲಿ ಅಕ್ರಮ ಹಾಗೂ ದುಬಾರಿ ಬೆಲೆಗೆ ಮದ್ಯ ಮಾರಾಟ ಮಾಡುತ್ತಿರುವುದನ್ನು ನಿಯಂತ್ರಿಸಲು ತುರ್ತಾಗಿ ತಾಲ್ಲೂಕಿಗೆ ಕನಿಷ್ಠ ಐದರಂತೆ ಎಂಎಸ್ಐಎಲ್ ಮದ್ಯ ಮಾರಾಟದ ಅಂಗಡಿಗಳನ್ನು ತೆರೆಯುವ ಯೋಜನೆ ಸರ್ಕಾರದ ಮುಂದಿದೆಯೇ ;

(ಈ) ಯಾವ ಯಾವ ಜಿಲ್ಲೆಗಳಲ್ಲಿ ವಾರ್ಷಿಕ ಎಷ್ಟೆಷ್ಟು ಲೈಸೆನ್ಸ್ ನೀಡಬೇಕೆಂದು ಸರ್ಕಾರ ನಿಗಧಿಪಡಿಸಿದೆ ; ಇದನ್ನು ಉಲ್ಲಂಘಿಸಿ, ಕಳೆದ ૩ ವರ್ಷಗಳಿಂದ ಅಬಕಾರಿ ಅಧಿಕಾರಿಗಳು ಎಷ್ಟು ಲೈಸೆನ್ಸ್‌ಗಳನ್ನು ನೀಡುವಲ್ಲಿ ವಿಳಂಬ ಮಾಡಿರುತ್ತಾರೆ ? (ತಾಲ್ಲೂಕುವಾರು ಮಾಹಿತಿ ಒದಗಿಸುವುದು)



## ರಾಜ್ಯದ ಗ್ರಾಮಾಂತರ ಪ್ರದೇಶದಲ್ಲಿ ನೂತನ ಮನೆ ನಿರ್ಮಾಣ ಪರವಾನಿಗೆಗೆ ಸಲ್ಲಿಸಬೇಕಾದ ದಾಖಲಾತಿಗಳ ಕುರಿತು.

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೫೮ (೪೦೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ರಾಮಾಂತರ ಪ್ರದೇಶಗಳಲ್ಲಿ ನೂತನ ಮನೆ ನಿರ್ಮಿಸಲು ಪರವಾನಿಗೆ ಕೋರಿ ಅರ್ಜಿ ಸಲ್ಲಿಸುವಾಗ ಗ್ರಾಮ ಪಂಚಾಯತುಗಳಿಗೆ ನೀಡಬೇಕಾದ ದಾಖಲೆಗಳು ಯಾವುವು ಮತ್ತು ಏಕೆ ;

(ಆ) ರಾಜ್ಯದಲ್ಲಿ ಗ್ರಾಮಾಂತರ ಪ್ರದೇಶಗಳಲ್ಲಿ ನೂತನ ಮನೆ (Single Layout) ನಿರ್ಮಿಸಲು ಪರವಾನಿಗೆ ನೀಡುವಾಗ ಪ್ರಾಧಿಕಾರದ ಅನುಮತಿಯ ಔಚಿತ್ಯವೇನು ;

(ಇ) ರಾಜ್ಯದಲ್ಲಿ ಗ್ರಾಮಾಂತರ ಪ್ರದೇಶದಲ್ಲಿ ನೂತನ ಮನೆ ನಿರ್ಮಿಸಲು ಪರವಾನಿಗೆ ನೀಡುವಲ್ಲಿ ರಾಜ್ಯಕ್ಕೊಂದು ಶಾಸನ ಹಾಗೂ ಜಿಲ್ಲೆಗೊಂದು ಶಾಸನದ ಉದ್ದೇಶವೇನು ; ಇದರಿಂದ ಜನಸಾಮಾನ್ಯರಿಗೆ ಅನಗತ್ಯ ತೊಂದರೆಯಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ?

## ಮಂಜೂರಾದ ಮತ್ತು ರದ್ದುಗೊಂಡ ಮನೆಗಳು.

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೫೯ (೪೧೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ೨೦೧೦–೧೧ ರಿಂದ ೨೦೧೪–೧೫ನೇ ಸಾಲಿನವರೆಗೆ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಹಾಗೂ ಯೋಜನೆಗಳವಾರು ವಿವರ ನೀಡುವುದು)

(ಆ) ಮಂಜೂರಾದ ಮನೆಗಳ ಪೈಕಿ ಎಷ್ಟು ಮನೆಗಳನ್ನು ಹಂಚಿಕೆ ಮಾಡಲಾಗಿದೆ ;

(ಇ) ಎಷ್ಟು ಮನೆಗಳ ಹಂಚಿಕೆ ಮಾಡಲಾಗದೇ ರದ್ದುಗೊಳಿಸಲಾಗಿದೆ ; ರದ್ದುಗೊಳ್ಳಲು ಕಾರಣವೇನು ;

(ಈ) ಮಂಜೂರಾದ ಮನೆಗಳಲ್ಲಿ ಎಷ್ಟು ಮನೆಗಳು ಪೂರ್ಣಗೊಂಡಿವೆ ; (ವಿವರ ತಿಳಿಸುವುದು) ಮತ್ತು ಪೂರ್ಣಗೊಳ್ಳದ ಮನೆಗಳ ಸಂಖ್ಯೆ ಎಷ್ಟು ; ಪೂರ್ಣಗೊಳ್ಳದೆ ಇರುವುದಕ್ಕೆ ಕಾರಣಗಳೇನು ?

## ವಿಕಲಚೇತನರಿಗೆ ಸರ್ಕಾರಿ ಉದ್ಯೋಗದ ನೇಮಕಾತಿಯಲ್ಲಿ ಮೀಸಲಾತಿ.

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೬೦ (೪೧೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ವಿಕಲಚೇತನರ ಸಂಖ್ಯೆ ಎಷ್ಟು ; ಇದರಲ್ಲಿ ಭಾಗಶಃ/ಸಂಪೂರ್ಣವಾಗಿ ಮತ್ತೊಬ್ಬರ ಮೇಲೆ ಅವಲಂಬಿಸಿರುವ ವಿಕಲಚೇತನರ ಸಂಖ್ಯೆ ಎಷ್ಟು ;



(ಆ) ವಿಕಲಚೇತನರಿಗೆ ಸರ್ಕಾರಿ ಇಲಾಖೆಯಲ್ಲಿ ನೇರ ನೇಮಕಾತಿ ಸಂದರ್ಭದಲ್ಲಿ ಮೀಸಲಾತಿ ಅನ್ವಯ ಎಷ್ಟು ಜನರನ್ನು ನೇಮಕ ಮಾಡಿಕೊಳ್ಳಲಾಗಿದೆ ;

(ಇ) ಮೀಸಲಾತಿಯಡಿಯಲ್ಲಿ ನೇಮಕಾತಿ ಮಾಡಿಕೊಳ್ಳದೆ ಉಳಿದಿರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮವೇನು ;

(ಈ) ಅಲ್ಪಸಂಖ್ಯಾತರಿಗೆ ತಂದಿರುವ ಶಾದಿ ಭಾಗ್ಯ ಯೋಜನೆಯನ್ನು ಸರ್ಕಾರ ವಿಕಲಚೇತನರಿಗೂ ಜಾರಿಗೊಳಿಸಬಾರದೇಕೆ ?

## ಖಾಸಗಿ ಶಾಲೆಗಳಲ್ಲಿ ಡೊನೇಷನ್ ಮತ್ತು ಶಿಕ್ಷಣ ಮಾಧ್ಯಮದ ಬಗ್ಗೆ.

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೬೧ (೪೦೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಖಾಸಗಿ ಶಾಲೆಗಳಲ್ಲಿ ವಿದ್ಯಾಭ್ಯಾಸಕ್ಕೆಂದು ವಾರ್ಷಿಕ/ ತಿಂಗಳ ನಿರ್ದಿಷ್ಟ ಹಣ ಪಡೆಯಬೇಕೆಂಬುದರ ಬಗ್ಗೆ ಮಾನದಂಡ ಇದೆಯೇ ;

(ಆ) ೧ ರಿಂದ ೭ ಮತ್ತು ೮ ರಿಂದ ೧೦ ನೇ ತರಗತಿಯ ಮಕ್ಕಳಿಗೆ ಖಾಸಗಿ ಶಾಲೆಗಳಲ್ಲಿ ನಿಗದಿಪಡಿಸಿರುವ ಶುಲ್ಕ ಎಷ್ಟು ;

(ಇ) ಖಾಸಗಿ ಶಾಲೆಗಳಲ್ಲಿ ಡೊನೇಷನ್ ಹಾವಳಿ ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಕನ್ನಡ ಮಾಧ್ಯಮ ಶಾಲೆಯ ಅನುಮತಿ ಪಡೆದು ಆಂಗ್ಲ ಮಾಧ್ಯಮದಲ್ಲಿ ಬೋಧನೆ ಮಾಡುತ್ತಿರುವುದರ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತಹ ಶಾಲೆಗಳ ವಿವರ ನೀಡುವುದು ;

(ಉ) ಆ ಶಾಲೆಗಳ ಮೇಲೆ ಕೈಗೊಂಡಿರುವ ಕಾನೂನು ಕ್ರಮಗಳೇನು ? (ವಿವರ ನೀಡುವುದು)

## ಪಂಚಾಯತ್ ರಾಜ್ ಇಲಾಖೆಯಲ್ಲಿ ಇರುವ ಅಭಿಯಂತರರ ಹುದ್ದೆಗಳ ಬಗ್ಗೆ.

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೬೨ (೪೧೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯ ಪಂಚಾಯತ್ ರಾಜ್ ಇಲಾಖೆಯಲ್ಲಿ ಮಂಜೂರಾದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಸಹಾಯಕ ಅಭಿಯಂತರರು ಮತ್ತು ಕಿರಿಯ ಅಭಿಯಂತರರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು)

(ಆ) ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಭರ್ತಿಯಾದ ಹುದ್ದೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು) ಹುದ್ದೆಗಳು ಎಷ್ಟು ಅವಧಿಯಿಂದ ಖಾಲಿ ಇವೆ ;

(ಇ) ಹಾಗಿದ್ದಲ್ಲಿ, ಈ ಖಾಲಿ ಹುದ್ದೆಗಳನ್ನು ತುರ್ತಾಗಿ ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?



## ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ರಸ್ತೆ ಕಾಮಗಾರಿಗಳು.

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೬೩ (೪೦೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ಚಿಕ್ಕಮಗಳೂರು ಜಿಲ್ಲೆಯಲ್ಲಿ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಯೋಜನೆಯಡಿಯಲ್ಲಿ ಯಾವ ಯಾವ ರಸ್ತೆಗಳ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗಿದೆ ; (ತಾಲ್ಲೂಕುವಾರು ಮತ್ತು ವರ್ಷವಾರು ವಿವರ ನೀಡುವುದು)

(ಆ) ಇದುವರೆವಿಗೂ ಎಷ್ಟು ಕಿ.ಮೀ. ರಸ್ತೆಗಳನ್ನು ಅಭಿವೃದ್ಧಿಪಡಿಸಲಾಗಿದೆ ; ಅಭಿವೃದ್ಧಿಗಾಗಿ ಎಷ್ಟು ಹಣ ಬಿಡುಗಡೆಯಾಗಿದೆ ಮತ್ತು ಎಷ್ಟು ಖರ್ಚು ಮಾಡಲಾಗಿದೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಸಣ್ಣ ವಾರ್ತಾ ಪತ್ರಿಕೆಗಳ ಹಿತರಕ್ಷಣೆಗಾಗಿ ಸರ್ಕಾರದ ನಿಲುವಿನ ಕುರಿತು.

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೬೪ (೪೧೨) ಮಾನ್ಯ ಮೂಲ ಸೌಲಭ್ಯ, ಅಭಿವೃದ್ಧಿ ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹಲವಾರು ಸಣ್ಣ ವಾರ್ತಾ ಪತ್ರಿಕೆಗಳ ವರದಿಗಾರರು ಮತ್ತು ಮಾಲೀಕರು ಸರ್ಕಾರದ ವಿರುದ್ಧ ಪ್ರತಿಭಟನೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸರ್ಕಾರ ಯಾವ ರೀತಿ ಕ್ರಮ ಕೈಗೊಂಡಿದೆ ; ಪ್ರತಿಭಟನೆಗೆ ಕಾರಣಗಳೇನು ; (ವಿವರ ನೀಡುವುದು)

(ಆ) ಸಣ್ಣ ಪತ್ರಿಕೆಗಳ ಸಮಸ್ಯೆಗಳನ್ನು ನಿವಾರಿಸಲು ಸರ್ಕಾರ ಹೊಸ ಜಾಹೀರಾತು ನೀತಿ ಜಾರಿಗೆ ತಂದಿದ್ದು, ಅದು ಕಾರ್ಯರೂಪಕ್ಕೆ ಬಂದಿಲ್ಲವೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಪ್ರಾದೇಶಿಕ ವಾರ್ತಾ ಪತ್ರಿಕೆಗಳಿಗೆ ಸಂಬಂಧಿಸಿದಂತೆ ನಿರ್ಧಾರ ಕೈಗೊಂಡಿರುವುದು ಸಮರ್ಪಕವಾಗಿಲ್ಲವೆಂಬುವುದಕ್ಕೆ ಸರ್ಕಾರ ಯಾವ ರೀತಿಯಲ್ಲಿ ಸ್ಪಂದಿಸಿದೆ ;

(ಇ) ಸಣ್ಣ ವಾರ್ತಾ ಪತ್ರಿಕೆಗಳ ಹಿತರಕ್ಷಣೆಗಾಗಿ ಹಾಗೂ ಸಂಪಾದಕರು ಮತ್ತು ಮಾಲೀಕರಿಗಾಗಿ ಸರ್ಕಾರದಿಂದ ನೀಡಲಾಗುತ್ತಿರುವ ಸೌಲಭ್ಯಗಳೇನು ; ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ವಾರ್ತಾ ಇಲಾಖೆಯಿಂದ ಪ್ರತಿ ವರ್ಷ ಜಾಹೀರಾತಿಗಾಗಿ ಮೀಸಲಿಟ್ಟಿರುವ ಅನುದಾನವೆಷ್ಟು ; ಕಳೆದ ೨ ವರ್ಷಗಳಿಂದ ಜಾಹೀರಾತಿಗಾಗಿ ಸರ್ಕಾರದಿಂದ ಬಿಡುಗಡೆಯಾಗಿರುವ ಹಣ ಎಷ್ಟು , ರಾಜ್ಯದಲ್ಲಿ ನೋಂದಣಿಯಾಗಿರುವ ಒಟ್ಟು ವಾರ್ತಾ ಪತ್ರಿಕೆಗಳ ಸಂಖ್ಯೆ ಎಷ್ಟು ; ಯಾವ ಯಾವ ಪತ್ರಿಕೆಗಳಿಗೆ ಜಾಹೀರಾತಿಗೆ ಸಂಬಂಧಿಸಿದಂತೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ? (ಎಲ್ಲಾ ವಾರ್ತಾ ಪತ್ರಿಕೆಗಳ ಹೆಸರುಗಳೊಡನೆ ಪೂರ್ಣ ವಿವರ ನೀಡುವುದು)

## ಭಾಷಾ ಮತೀಯ ಅಲ್ಪಸಂಖ್ಯಾತರ ಶಾಲೆಗಳಿಗೆ ಮಾನ್ಯತೆ ನೀಡುವ ಬಗ್ಗೆ.

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೩೬೫ (೪೧೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಭಾಷಾ ಮತ್ತು ಮತೀಯ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳಿಗೆ ಮಾನ್ಯತೆ ನೀಡಲು ಯಾವ ಯಾವ ಭಾಷೆ ಹಾಗೂ ಧರ್ಮಗಳನ್ನು ಸರ್ಕಾರ ಪರಿಗಣಿಸುತ್ತಿದೆ ;



(ಆ) ಅಲ್ಪಸಂಖ್ಯಾತರ ಮಾನ್ಯತೆಗೆ ೧೮–೦೬–೨೦೧೪ ರಂದು ಹೊರಡಿಸಿದ ಸರ್ಕಾರಿ ಆದೇಶವು ಸಂವಿಧಾನದ ೩೦(೧) ಹಾಗೂ ರಾಷ್ಟ್ರೀಯ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳ ಕಾಯ್ದೆ ೨೦೦೪ರ ೨(ಜಿ) ಕಂಡಿಕೆಗಳನ್ವಯ ಇದೆಯೇ ;

(ಇ) ಇಲ್ಲದಿದ್ದಲ್ಲಿ, ಈ ಆದೇಶವನ್ನು ರದ್ದುಪಡಿಸಿ ಹೊಸ ಆದೇಶ ಹೊರಡಿಸಲು ಸರ್ಕಾರ ಉದ್ದೇಶಿಸಿದೆಯೇ ; ಹಾಗಿದ್ದಲ್ಲಿ ಈ ಆದೇಶವನ್ನು ಯಾವಾಗ ಹೊರಡಿಸಲಾಗುವುದು ;

(ಈ) ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳಿಗೆ ಮಾನ್ಯತೆ ನೀಡುವ ಅಧಿಕಾರವನ್ನು ಸಾರ್ವಜನಿಕ ಶಿಕ್ಷಣ ಇಲಾಖೆಗೆ ನೀಡಿ ಸರ್ಕಾರದ ಆದೇಶವಾಗಿದೆಯೇ ; ಆಗಿದ್ದಲ್ಲಿ ಆದೇಶ ಸಂಖ್ಯೆ ತಿಳಿಸುವುದು ?

## ಗ್ರಾಮೀಣ ಅಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯಲ್ಲಿ ದುರುಪಯೋಗವಾದ ಹಣವನ್ನು ಸಂಬಂಧಿಸಿದವರಿಂದ ವಸೂಲು ಮಾಡುವ ಬಗ್ಗೆ.

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೩೬೬ (೪೧೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣ ಅಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಮೀಸಲಿಟ್ಟ ಹಣವನ್ನು ದುರುಪಯೋಗ ಪಡಿಸಿಕೊಂಡ ಪ್ರಕರಣಗಳು ಎಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಆ) ಹಣ ದುರುಪಯೋಗಪಡಿಸಿಕೊಂಡ ಅಧಿಕಾರಿ/ಸಿಬ್ಬಂದಿಗಳು ಯಾರು ; (ಹುದ್ದೆವಾರು ವಿವರ ನೀಡುವುದು)

(ಇ) ದುರುಪಯೋಗ ಪಡಿಸಿಕೊಳ್ಳಲಾದ ಹಣವನ್ನು ವಸೂಲಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಸ್ಥಳೀಯ ಸಂಸ್ಥೆಗಳಿಂದ ಗ್ರಂಥಾಲಯ ಕರ ಬಾಕಿ ಪಾವತಿಸುವುದು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೩೬೭ (೪೩೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ನಡೆಯುತ್ತಿರುವ ನಗರ ಕೇಂದ್ರ ಗ್ರಂಥಾಲಯಗಳ ಹಾಗೂ ಜಿಲ್ಲಾ ಗ್ರಂಥಾಲಯಗಳ ಸಂಖ್ಯೆ ಎಷ್ಟು ;

(ಆ) ಈ ಗ್ರಂಥಾಲಯಗಳಿಗೆ ಮಹಾನಗರ ಪಾಲಿಕೆ ಹಾಗೂ ರಾಜ್ಯದ ಸ್ಥಳೀಯ ಸಂಸ್ಥೆಗಳಿಂದ ಪ್ರತಿ ವರ್ಷ ಪಾವತಿಸಬೇಕಾದ ಗ್ರಂಥಾಲಯ ಕರದ ಮೊತ್ತವೆಷ್ಟು ;

(ಇ) ಇಲ್ಲಿಯವರೆಗೆ ಬಿ.ಬಿ.ಎಂ.ಪಿ. ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಜಿಲ್ಲಾ ಪಂಚಾಯತ್‌ಗಳು ಸೇರಿದಂತೆ ಸ್ಥಳೀಯ ಸಂಸ್ಥೆಗಳು ಸಾರ್ವಜನಿಕ ಗ್ರಂಥಾಲಯ ಇಲಾಖೆಗೆ ಪಾವತಿಸಲು ಬಾಕಿಯಿರುವ ಗ್ರಂಥಾಲಯ ಕರ ಎಷ್ಟು ; (ಗ್ರಂಥಾಲಯವಾರು ಮಾಹಿತಿ ನೀಡುವುದು)

(ಈ) ಗ್ರಂಥಾಲಯ ಕರವನ್ನು ನಿಯಮಿತವಾಗಿ ಪಾವತಿಸಲು ನಗರ ಸ್ಥಳೀಯ ಸಂಸ್ಥೆಗಳಿಗೆ ಸರ್ಕಾರ ಬಿಡುಗಡೆ ಮಾಡುವ ಹಣದಲ್ಲಿ ಕಡಿತ ಮಾಡಿ ಪಾವತಿಸಲು ಸರ್ಕಾರ ಉದ್ದೇಶಿಸಿದೆಯೇ ;

(ಉ) ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಯಾವಾಗ ಆದೇಶ ಹೊರಡಿಸಲಿದೆ ;



(ಊ) ಬಾಕಿ ಇರುವ ಗ್ರಂಥಾಲಯ ಕರವನ್ನು ಪಾವತಿಸಲು ನಗರ ಸ್ಥಳೀಯ ಸಂಸ್ಥೆಗಳಿಗೆ ಸರ್ಕಾರ ಕಾಲಮಿತಿ ಹಾಕಲಿದೆಯೇ ?

## ಗ್ರಾಮೀಣ ಪ್ರದೇಶದ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರುಗಳಿಗೆ ನಿರ್ಮಿಸಲಾದ "ಗುರುಸದನ"ಗಳು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೩೬೮ (೪೩೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ರಾಮೀಣ ಪ್ರದೇಶದ ಸರ್ಕಾರಿ ಶಾಲಾ ಶಿಕ್ಷಕರ ವಸತಿ ಸೌಕರ್ಯದ ಕುರಿತು "ಗುರು ಸದನ" ಯೋಜನೆಯನ್ನು ಯಾವ ದಿನಾಂಕದಿಂದ ಜಾರಿಗೆ ತರಲಾಯಿತು ; ಈ ಯೋಜನೆಯಡಿ ನಿರ್ಮಿಸಿದ ವಸತಿ ಗೃಹಗಳ ಸಂಖ್ಯೆ ಎಷ್ಟು ; ಅವುಗಳನ್ನು ನಿರ್ಮಿಸಿದ ಸ್ಥಳ ತಾಲ್ಲೂಕು, ಜಿಲ್ಲೆಯ ವಿವರ ನೀಡುವುದು ;

(ಆ) ಈ ಯೋಜನೆಗೆ ೨೦೦೭ ರಿಂದ ಈವರೆಗೆ ನಿಗಧಿಪಡಿಸಿದ ಅನುದಾನವೆಷ್ಟು ; ಅದರಲ್ಲಿ ಖರ್ಚಾದ ಅನುದಾನ ಎಷ್ಟು ; ಹಾಗೂ ಇನ್ನು ಎಷ್ಟು ಸ್ಥಳಗಳಲ್ಲಿ ಈ ವಸತಿ ಗೃಹಗಳನ್ನು ನಿರ್ಮಾಣ ಮಾಡಲು ಬಾಕಿ ಇದೆ ;

(ಇ) ಪೂರ್ಣಗೊಂಡ ವಸತಿಗೃಹಗಳಲ್ಲಿ ಶಿಕ್ಷಕರು ವಾಸ ಮಾಡಲು ನಿರಾಕರಿಸುತ್ತಿರುವುದು ನಿಜವೇ ; ಹಾಗಿದ್ದರೆ ಕಾರಣಗಳೇನು ; ಈ ವಸತಿ ಗೃಹಗಳು ಬೇರೆ ರೀತಿಯಲ್ಲಿ ಬಳಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದರೆ ಕೈಗೊಂಡ ಕ್ರಮಗಳೇನು ;

(ಈ) ಶಿಕ್ಷಕರುಗಳ ವೇತನದಲ್ಲಿ ನೀಡಲಾಗುವ ಶೇ: ೧೦ರಷ್ಟು ಮನೆಬಾಡಿಗೆ ಮೊತ್ತವನ್ನು ಕಡಿತ ಮಾಡುತ್ತಿರುವುದರಿಂದ ಇಲ್ಲಿ ಶಿಕ್ಷಕರು ವಾಸ ಮಾಡಲು ಸಿದ್ಧರಿಲ್ಲವೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರಿಪಡಿಸಲು ಸರ್ಕಾರ ತೆಗೆದುಕೊಳ್ಳಬಹುದಾದ ಕ್ರಮವೇನು ?

## ರಾಜ್ಯ ವಿಶ್ವವಿದ್ಯಾಲಯ ಮತ್ತು ಕಾಲೇಜುಗಳಿಂದ ಯು.ಜಿ.ಸಿ. ವೇತನ ಶ್ರೇಣಿಯಲ್ಲಿ ನಿವೃತ್ತರಾದ ಅಧ್ಯಾಪಕರುಗಳ ನಿವೃತ್ತಿ ವೇತನ ಪರಿಷ್ಕರಣೆ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೩೬೯ (೪೩೫) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಿ: ೧೬–೧೧–೨೦೧೧ರ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ೫ನೇ ಸಾಮಾನ್ಯ ಸಭೆಯಲ್ಲಿ ಭಾಗವಹಿಸಿದ ೨೭ ಜನ ಪದಾಧಿಕಾರಿಗಳ ಹೆಸರು ಹಾಗೂ ಹುದ್ದೆಗಳು ಯಾವುವು ;

(ಆ) ೨೦೦೬ಕ್ಕಿಂತ ಪೂರ್ವದಲ್ಲಿ ನಿವೃತ್ತರಾದ ರಾಜ್ಯ ವಿಶ್ವವಿದ್ಯಾಲಯ ಮತ್ತು ಕಾಲೇಜುಗಳ (ಯು.ಜಿ.ಸಿ ವೇತನ ಶ್ರೇಣಿಯ) ಅಧ್ಯಾಪಕರುಗಳು, ಗ್ರಂಥಪಾಲಕರುಗಳು ಹಾಗೂ ದೈಹಿಕ ಶಿಕ್ಷಣ ಶಿಕ್ಷಕರುಗಳ ಸಂಖ್ಯೆ ಎಷ್ಟು ;

(ಇ) ೬ನೇ ಕೇಂದ್ರ ವೇತನ ಆಯೋಗದ ಶಿಫಾರಸ್ಸಿನಂತೆ ನಿವೃತ್ತಿ ವೇತನವನ್ನು ಪರಿಷ್ಕರಿಸಲು ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಸಭೆಯಲ್ಲಿ ತೀರ್ಮಾನಿಸಿದಂತೆ ತೆಗೆದುಕೊಂಡ ಕ್ರಮಗಳೇನು ;



(ಈ) ಬೇರೆ ರಾಜ್ಯಗಳಲ್ಲಿ ೬ನೇ ಕೇಂದ್ರ ವೇತನ ಆಯೋಗದ ಶಿಫಾರಸ್ಸನ್ನು ಜಾರಿಗೊಳಿಸಿ ನಿವೃತ್ತಿ ವೇತನ ಪರಿಷ್ಕರಿಸಿದ್ದು, ಆದರೆ ರಾಜ್ಯದ ನಿವೃತ್ತ ವಿಶ್ವವಿದ್ಯಾಲಯಗಳ ಹಾಗೂ ಕಾಲೇಜು ಅಧ್ಯಾಪಕರುಗಳ ನಿವೃತ್ತಿ ವೇತನವನ್ನು ೨೦೦೬ರ ಕೇಂದ್ರ ವೇತನ ಶ್ರೇಣಿಯಲ್ಲಿ ಈವರೆಗೂ ಪರಿಷ್ಕರಿಸದಿರಲು ಕಾರಣಗಳೇನು ;

(ಉ) ಯು.ಜಿ.ಸಿ. ವೇತನ ಶ್ರೇಣಿಯಲ್ಲಿ ನಿವೃತ್ತರಾದ ಅಧ್ಯಾಪಕರುಗಳ ನಿವೃತ್ತಿ ವೇತನವನ್ನು ಪರಿಷ್ಕರಿಸಿ ಆದೇಶ ಹೊರಡಿಸಲು ಸರ್ಕಾರ ತಕ್ಷಣ ಕ್ರಮ ಕೈಗೊಳ್ಳುವುದೇ ?

## ಕನ್ನಡ ಸಿನಿಮಾಗಳ ಸಬ್ಸಿಡಿಯಲ್ಲಿ ಏರಿಕೆ ಮಾಡುವ ಬಗ್ಗೆ.

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜು)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೭೦ (೪೧೬) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕನ್ನಡ ಚಿತ್ರಗಳಿಗೆ ಈಗ ನೀಡುತ್ತಿರುವ ಸಬ್ಸಿಡಿ ಮೊತ್ತ ಎಷ್ಟು ; ಕಳೆದ ಎರಡು ವರ್ಷಗಳಲ್ಲಿ ಎಷ್ಟು ಕನ್ನಡ ಚಲನಚಿತ್ರಗಳಿಗೆ ಎಷ್ಟು ಸಬ್ಸಿಡಿ ಮಂಜೂರು ಮಾಡಿ ಪಾವತಿ ಮಾಡಲಾಗಿದೆ ; (ವಿವರ ಒದಗಿಸುವುದು)

(ಆ) ಈಗ ನೀಡುತ್ತಿರುವ ಸಬ್ಸಿಡಿಯ ಮೊತ್ತವನ್ನು ಕನಿಷ್ಠ ೨೫ ಲಕ್ಷ ರೂಪಾಯಿಗಳಿಗೆ ಹೆಚ್ಚಿಸುವುದರ ಮೂಲಕ ಕನ್ನಡ ಚಿತ್ರರಂಗಕ್ಕೆ ಪ್ರೋತ್ಸಾಹ ನೀಡಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ ;

(ಇ) ಬೆಂಗಳೂರು ನಗರದಲ್ಲಿರುವ ಕಂಠೀರವ ಸ್ಟುಡಿಯೋ ಅಭಿವೃದ್ಧಿಗೆ ಕೈಗೊಂಡಿರುವ ಕ್ರಮಗಳೇನು ; ರಿಯಾಯಿತಿ ದರದಲ್ಲಿ ಕನ್ನಡ

ಚಲನಚಿತ್ರಗಳ ಚಿತ್ರೀಕರಣಕ್ಕೆ ಸ್ಟುಡಿಯೋ ಒದಗಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಈ) ಬೆಂಗಳೂರು ಮಹಾನಗರದಲ್ಲಿರುವ ಉದ್ಯಾನವನ, ಸರ್ಕಾರಿ ಕಛೇರಿಗಳು, ಪಾರಂಪರಿಕ ಕಟ್ಟಡಗಳು, ಪೊಲೀಸ್ ಠಾಣೆ ಮೊದಲಾದ ಕಡೆಗಳಲ್ಲಿ ಕನ್ನಡ ಚಲನಚಿತ್ರಗಳ ಚಿತ್ರೀಕರಣಕ್ಕೆ ಅನುಮತಿ ನೀಡಲು ಕ್ರಮ ಜರುಗಿಸಲಾಗುವುದೇ ?

## ಜೀತದಾಳು ಪದ್ಧತಿ ವ್ಯವಸ್ಥೆ ಬಗ್ಗೆ.

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೩೭೧ (೪೧೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇಂದಿಗೂ ಜೀತದಾಳು ಪದ್ಧತಿ ಮುಂದುವರೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ ಜೀತ ವಿಮುಕ್ತ ಕರ್ನಾಟಕ (ಜಿ.ವಿ.ಕ) ದವರು ಕಳೆದ ವರ್ಷ ನಡೆಸಿದ ಸಮೀಕ್ಷೆಯ ವಿವರ ಸರಕಾರದಲ್ಲಿ ಲಭ್ಯವಿದೆಯೇ ; ಇದ್ದಲ್ಲಿ ಈ ಸಮೀಕ್ಷೆಯ ಪ್ರಮುಖ ಅಂಶಗಳೇನು (ವಿವರ ನೀಡುವುದು) ;

(ಇ) ಕರ್ನಾಟಕವನ್ನು ಜೀತ ವಿಮುಕ್ತ ರಾಜ್ಯವನ್ನಾಗಿ ಮಾಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ?



## ಬೆಂಗಳೂರು ನಗರದಲ್ಲಿರುವ ಪ್ರಾಥಮಿಕ ಪೂರ್ವ ಪ್ರಾಥಮಿಕ ಶಿಕ್ಷಣ ಸಂಸ್ಥೆಗಳು.

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೩೭೨ (೪೬೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿರುವ ಒಟ್ಟು ಪ್ರಾಥಮಿಕ, ಪೂರ್ವ ಪ್ರಾಥಮಿಕ (PreKG,LKG,UKG) ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು ;

(ಆ) ಇವುಗಳಲ್ಲಿ ಆಂಗ್ಲ ಮಾಧ್ಯಮದ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು ; ಕನ್ನಡ ಮಾಧ್ಯಮಗಳ ಸಂಖ್ಯೆ ಎಷ್ಟು ; ಸರ್ಕಾರಿ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು ; ಅನುದಾನಿತ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು ; ಅನುದಾನ ರಹಿತ ಕನ್ನಡ ಮಾಧ್ಯಮ ಹಾಗೂ ಆಂಗ್ಲ ಮಾಧ್ಯಮ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು ; (ವಿಳಾಸದೊಂದಿಗೆ ವಿವರ ನೀಡುವುದು)

(ಇ) ಈ ಶಾಲೆಗಳಲ್ಲಿ ಕಲಿಯುತ್ತಿರುವ ಮಕ್ಕಳ ಸಂಖ್ಯೆ ಎಷ್ಟು; (ಶಾಲಾವಾರು ವಿವರ ನೀಡುವುದು)

(ಈ) ಈ ಶಾಲೆಯಲ್ಲಿ ಕಲಿಯುತ್ತಿರುವ ಹೆಣ್ಣು ಮಕ್ಕಳ ರಕ್ಷಣೆಗೆ ಯಾವ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ?

## ಆಂಗ್ಲ ಮಾಧ್ಯಮದಲ್ಲಿ ಶಿಕ್ಷಣ ನೀಡುತ್ತಿರುವ ಮಕ್ಕಳಿಂದ ಸಂಗ್ರಹಿಸುತ್ತಿರುವ ಶುಲ್ಕದ ಬಗ್ಗೆ.

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೩೭೩ (೪೬೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿರುವ ಆಂಗ್ಲ ಮಾಧ್ಯಮದಲ್ಲಿ ಶಿಕ್ಷಣ ನೀಡುತ್ತಿರುವ ಶಿಕ್ಷಣ ಸಂಸ್ಥೆಗಳಲ್ಲಿ ಮಕ್ಕಳಿಂದ ಎಷ್ಟು ಶುಲ್ಕವನ್ನು ವಸೂಲು ಮಾಡಲಾಗುತ್ತಿದೆ ; (ಡೊನೇಷನ್, ಟ್ಯೂಷನ್ ಫೀ, ಶಾಲಾ ಕಟ್ಟಡಕ್ಕೆ ಕೊಡುಗೆ ಮತ್ತು ಇತರ ಹೆಸರಿನಲ್ಲಿ ಸಂಗ್ರಹಿಸುವ ಒಟ್ಟು ಮೊತ್ತದ ವಿವರ ನೀಡುವುದು) ;

(ಆ) ಬೆಂಗಳೂರು ನಗರದಲ್ಲಿರುವ ಆಂಗ್ಲ ಮಾಧ್ಯಮದಲ್ಲಿ ಶಿಕ್ಷಣ ನೀಡುತ್ತಿರುವ ಶಿಕ್ಷಣ ಸಂಸ್ಥೆಗಳಿಗೆ ಸರ್ಕಾರದಿಂದ ಯಾವ ಯಾವ ಸೌಲಭ್ಯ ನೀಡಲಾಗುತ್ತಿದೆ ;

(ಇ) ಬೆಂಗಳೂರು ನಗರದಲ್ಲಿ ಆಂಗ್ಲ ಮಾಧ್ಯಮ ಶಿಕ್ಷಣ ನೀಡುತ್ತಿರುವ ಶಿಕ್ಷಣ ಶಾಲೆಗಳು ಗುಣಮಟ್ಟದ ಶಿಕ್ಷಣ ನೀಡುವುದಕ್ಕಿಂತ ಹೆಚ್ಚಾಗಿ ವ್ಯವಹಾರಿಕ ದೃಷ್ಟಿಯಿಂದ ನಡೆಸಲ್ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ನಿಟ್ಟಿನಲ್ಲಿ ನಿಯಂತ್ರಿಸಲು ಹಾಕಿಕೊಂಡಿರುವ ಯೋಜನೆಗಳಾವುವು ?



## ರಾಜ್ಯದ ಪ್ರಾಥಮಿಕ ಪ್ರೌಢ ಮತ್ತು ಪದವಿ ಕಾಲೇಜುಗಳಲ್ಲಿನ ದೈಹಿಕ ಶಿಕ್ಷಣ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೩೭೪ (೫೨೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಷ್ಟು ಪ್ರಾಥಮಿಕ, ಪ್ರೌಢ ಮತ್ತು ಪದವಿ ಶಾಲಾ ಕಾಲೇಜುಗಳಲ್ಲಿ ದೈಹಿಕ ಶಿಕ್ಷಕರು, ದೈಹಿಕ ನಿರ್ದೇಶಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಪ್ರಾಥಮಿಕ ಶಾಲಾ ಮತ್ತು ಪ್ರೌಢ ಶಾಲಾ ಹಂತದಲ್ಲಿ ಶಿಕ್ಷಣದ ಜೊತೆಯಲ್ಲಿ ದೈಹಿಕ ಶಿಕ್ಷಣವು ಮುಖ್ಯವಾಗಿರುವುದರಿಂದ ದೈಹಿಕ ಶಿಕ್ಷಕರ ನೇಮಕಾತಿ ಕುರಿತು ಸರ್ಕಾರವು ಯಾವ ಕ್ರಮ ಕೈಗೊಂಡಿದೆ ;

(ಇ) ಈ ಕುರಿತಾಗಿ ಸರ್ಕಾರ ಸ್ವೀಕರಿಸಿರುವ ಪ್ರೊ: ವೈದ್ಯನಾಥನ್ ವರದಿ ಅನುಷ್ಠಾನಗೊಳಿಸುವಲ್ಲಿ ವಿಳಂಬ ನೀತಿಗೆ ಕಾರಣವೇನು ;

(ಈ) ಪ್ರಾಥಮಿಕ ಶಾಲೆಯ ದೈಹಿಕ ಶಿಕ್ಷಕರ ನೇಮಕಾತಿಗಿರುವ ವಿದ್ಯಾರ್ಥಿಗಳ ಮಾನದಂಡಗಳೇನು ; ಈ ಮಾನದಂಡಗಳನ್ವಯ ರಾಜ್ಯದ ಎಲ್ಲಾ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳಿಗೆ ದೈಹಿಕ ಶಿಕ್ಷಣ ನೀಡುವಲ್ಲಿ ಶಿಕ್ಷಣ ಇಲಾಖೆ ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ರಾಜ್ಯದ ಎಲ್ಲಾ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳ ವಿದ್ಯಾರ್ಥಿಗಳಿಗೆ ದೈಹಿಕ ಶಿಕ್ಷಣ ನೀಡಲು ಸರ್ಕಾರ ಏನು ಕ್ರಮ ಕೈಗೊಳ್ಳಲಿದೆ ?

## ಶಾಲೆಗಳಲ್ಲಿ ಸಿ. ಸಿ. ಕ್ಯಾಮರಾ ಅಳವಡಿಸುವ ಬಗ್ಗೆ.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೩೭೫ (೪೪೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಶಾಲೆಗಳಲ್ಲಿ ಸಿ.ಸಿ. ಕ್ಯಾಮರಾಗಳನ್ನು ಅಳವಡಿಸದೆ ಇರುವ ಕಾರಣ ಶಿಕ್ಷಕರುಗಳ ವೇತನ ತಡೆಹಿಡಿಯಲಾಗಿದೆಯೇ ; ಈ ಸಿ.ಸಿ. ಕ್ಯಾಮರಾ ಅಳವಡಿಸುವ ಜವಾಬ್ದಾರಿ ಆಡಳಿತ ಮಂಡಳಿಯವರದಲ್ಲವೆ ; ಇದಕ್ಕೆ ಶಿಕ್ಷಕರನ್ನು ಜವಾಬ್ದಾರಿನ್ನಾಗಿ ಮಾಡುವುದು ಸರಿಯೇ ;

(ಆ) ಮಕ್ಕಳಿಂದ ಈ ಬಗ್ಗೆ ವಂತಿಗೆ ಪಡೆಯುತ್ತಿರುವುದು ಸರಿಯೇ ; ಈ ಬಗ್ಗೆ ಸರ್ಕಾರದ ನಿಲುವೇನು ; ತಡೆಹಿಡಿದಿರುವ ಶಿಕ್ಷಕರ ವೇತನವನ್ನು ತಕ್ಷಣದಿಂದ ಜಾರಿಗೆ ಬರುವಂತೆ ಬಿಡುಗಡೆಗೊಳಿಸಲು ಕೈಗೊಳ್ಳುವ ಕ್ರಮವೇನು ?

## ಶಾಲಾ ಕಟ್ಟಡ ಕಾಮಗಾರಿಗಳು ಕುಂಠಿತಗೊಂಡಿರುವುದು.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೩೭೬ (೪೪೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ (RMSA) ಅಡಿಯಲ್ಲಿ ಮಂಜೂರಾದ ಶಾಲಾ ಕಟ್ಟಡಗಳ ಕಾಮಗಾರಿಗಳು ಅರ್ಧಕ್ಕೆ ನಿಂತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದಲ್ಲಿ ಅರ್ಧಕ್ಕೆ ನಿಂತಿರುವ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸರ್ಕಾರದ ಮುಂದಿರುವ ಕ್ರಮಗಳೇನು ; ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ;



(ಆ) ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ (RMSA) ಅಡಿಯಲ್ಲಿ ಮಂಜೂರಾದ ಶಾಲಾ ಕಟ್ಟಡಗಳ ಕಾಮಗಾರಿಗಳ ನಿರ್ಮಾಣಕ್ಕಾಗಿ ಮೊದಲು ಗುತ್ತಿಗೆ ವಹಿಸಿದ ಏಜೆನ್ಸಿಯನ್ನು ಬದಲಾಯಿಸಿರುವುದು ನಿಜವೇ ; ಹಾಗಿದ್ದರೆ, ಇದಕ್ಕೆ ಕಾರಣವೇನು ? (ಮಾಹಿತಿ ನೀಡುವುದು)

## ಮಾಧ್ಯಮಿಕ ಶಿಕ್ಷಣ ಅಭಿಯಾನದಡಿ ಮಂಜೂರಾದ ಶಾಲಾ ಕಟ್ಟಡಗಳು.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೩೭೭ (೪೪೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ (RMSA) ಅಡಿಯಲ್ಲಿ ಮಂಜೂರಾದ ಶಾಲಾ ಕಟ್ಟಡಗಳೆಷ್ಟು ಮತ್ತು ಅವುಗಳು ಮಂಜೂರಾಗಿದ್ದು ಯಾವಾಗ ;(ಹೈದ್ರಾಬಾದ್ ಕರ್ನಾಟಕ ಭಾಗದ ಜಿಲ್ಲೆಗಳ ವಿವರ ನೀಡುವುದು)

(ಆ) ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ (RMSA) ಅಡಿಯಲ್ಲಿ ಮಂಜೂರಾದ ಶಾಲಾ ಕಟ್ಟಡಗಳ ಪೈಕಿ ಇಲ್ಲಿಯವರೆಗೆ ಪೂರ್ಣಗೊಂಡ ಹಾಗೂ ಬಾಕಿ ಉಳಿದಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ; (ಹೈದ್ರಾಬಾದ್ ಕರ್ನಾಟಕ ಭಾಗದ ಜಿಲ್ಲೆಗಳ ವಿವರ ನೀಡುವುದು)

(ಇ) ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ (RMSA) ಅಡಿಯಲ್ಲಿ ಮಂಜೂರಾದ ಶಾಲಾ ಕೊಠಡಿಗಳ ನಿರ್ಮಾಣದ ಕಾಮಗಾರಿಯನ್ನು ಯಾವ ಏಜೆನ್ಸಿಗೆ ಗುತ್ತಿಗೆಯನ್ನು ನೀಡಲಾಗಿದೆ ?

## ಗೃಹ ನಿರ್ಮಾಣ ಮಂಡಳಿಯ ನಿವೇಶನಗಳು.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೩೭೮ (೪೧೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಲಹಂಕ ಉಪನಗರದ ಕರ್ನಾಟಕ ಗೃಹ ನಿರ್ಮಾಣ ಮಂಡಳಿಯಲ್ಲಿ ೧,೨,೩, ಹಾಗೂ ೪ನೇ ಹಂತಗಳಲ್ಲಿರುವ ನಿವೇಶನಗಳ ಸಂಖ್ಯೆ ಎಷ್ಟು ; ಆ ಪೈಕಿ ಖಾಲಿ ಇರುವ ಸ್ಟ್ರೇ ಸೈಟ್, ಕಾರ್ನರ್ ಸೈಟ್, ಕಮರ್ಷಿಯಲ್ ಸೈಟ್, ಕೋರ್ಟಿನಲ್ಲಿ ವ್ಯಾಜ್ಯ ಇರುವಂತಹದೂ ಸೇರಿ ಖಾಲಿ ಇರುವ ಸೈಟುಗಳೆಷ್ಟು ; (ಹಂತವಾರು, ನಿವೇಶನದ ಅಳತೆ ಸಮೇತ ಪ್ರತ್ಯೇಕವಾಗಿ ವಿವರ ಒದಗಿಸಿ)

(ಆ) ಎಷ್ಟು ಮನೆಗಳು, ಪ್ಲ್ಯಾಟ್‌ಗಳು ಖಾಲಿ ಇವೆ ೧ನೇ ಹಂತದಲ್ಲಿ ನಿರ್ಮಿಸಲಾಗಿರುವ ಬಹು ಅಂತಸ್ತಿನ ಕಟ್ಟಡದಲ್ಲಿ ಎಷ್ಟು ಮನೆಗಳಿವೆ ; ಇದನ್ನು ಯಾವ ರೀತಿಯಲ್ಲಿ ಅಲಾಟ್ ಮಾಡಲಾಗಿದೆ ; ಎಷ್ಟು ಮೊತ್ತಕ್ಕೆ ಅಲಾಟ್ ಮಾಡಲಾಗಿದೆ ; ಇನ್ನು ಎಷ್ಟು ಮನೆಗಳು ಖಾಲಿ ಇವೆ ; (ಮನೆ ಅಲಾಟ್ ಆದವರ ಹೆಸರು ಸಮೇತ ಮಾದರಿಯ ವಿವರ ಒದಗಿಸುವುದು) ?



## ಡಾ: ಕಸ್ತೂರಿರಂಗನ್‌ರವರ ನೇತೃತ್ವದ ಕರ್ನಾಟಕ ಜ್ಞಾನ ಆಯೋಗದ ಕುರಿತು.

**ಪ್ರೊ: ಪಿ.ವಿ. ಕೃಷ್ಣಭಟ್ಟ (ನಾಮನಿರ್ದೇಶನ ಹೊಂದಿದವರು) :–**

೩೭೯ (೪೧೯) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಡಾ: ಕಸ್ತೂರಿರಂಗನ್ ಅವರ ನೇತೃತ್ವದಲ್ಲಿ ರಚಿಸಲಾಗಿದ್ದ ಕರ್ನಾಟಕ ಜ್ಞಾನ ಆಯೋಗದ ಶಿಫಾರಸ್ಸುಗಳನ್ನು ಸರ್ಕಾರ ಅಂಗೀಕರಿಸಿದೆಯೇ ;

(ಆ) ಅಂಗೀಕರಿಸಿದ್ದರೆ ಶಿಫಾರಸ್ಸುಗಳನ್ನು ಜಾರಿಗೊಳಿಸುವ ನಿಟ್ಟಿನಲ್ಲಿ ಸರ್ಕಾರ ಈವರೆವಿಗೂ ಯಾವ ಕ್ರಮ ಕೈಗೊಂಡಿದೆ ;

(ಇ) ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳಲಾಗುವುದು ?

## ರಾಜ್ಯದಲ್ಲಿ ಭಾಗ್ಯಲಕ್ಷ್ಮೀ ಯೋಜನೆ ಚಾಲನೆಯಲ್ಲಿದೆಯೇ.

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೮೦ (೪೨೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಭಾಗ್ಯಲಕ್ಷ್ಮೀ ಯೋಜನೆ ಚಾಲನೆಯಲ್ಲಿದೆಯೇ ;

(ಆ) ಚಾಲನೆಯಲ್ಲಿದ್ದರೆ ರಾಜ್ಯದ ಪ್ರತಿಯೊಂದು ಜಿಲ್ಲೆಯಲ್ಲಿ ಎಷ್ಟೆಷ್ಟು ಭಾಗ್ಯಲಕ್ಷ್ಮೀ ಯೋಜನೆಯಲ್ಲಿ ಮಕ್ಕಳ ಸಂಖ್ಯೆ ನೋಂದಣಿಯಾಗಿದೆ ; (ವಿವರಣೆ ನೀಡುವುದು)

## ರಾಜ್ಯದಲ್ಲಿ ಜೀತದಾಳು ಗುರುತಿಸುವ ಸಮೀಕ್ಷಾ ಕಾರ್ಯ ಪ್ರಗತಿಯ ಬಗ್ಗೆ.

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು):–**

೩೮೧ (೪೨೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜೀತದಾಳುಗಳನ್ನು ಗುರುತಿಸುವ ಸಮೀಕ್ಷಾ ಕಾರ್ಯ ಪ್ರಗತಿಯಲ್ಲಿದೆಯೇ ; ಇದ್ದಲ್ಲಿ ಇದುವರೆಗೂ ಎಷ್ಟು ಜನ ಜೀತದಾಳುಗಳನ್ನು ಗುರುತಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಜೀತದಾಳುಗಳನ್ನು ಗುರುತಿಸಲು ಮತ್ತು ಅವರಿಗೆ ಪುನರ್ವಸತಿ ಕಲ್ಪಿಸಲು ಜಿಲ್ಲಾ ಮತ್ತು ಉಪವಿಭಾಗ ಮಟ್ಟದಲ್ಲಿ ಜಾಗೃತ ಸಮಿತಿಗಳನ್ನು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಇಲ್ಲವಾದಲ್ಲಿ, ಜಾಗೃತ ಸಮಿತಿಗಳ ರಚನೆಯ ವಿಳಂಬಕ್ಕೆ ಕಾರಣವೇನು ;

(ಈ) ಕೊಪ್ಪಳ ಜಿಲ್ಲೆಯೊಂದರಲ್ಲಿಯೇ ೨೦೧೩ ಕ್ಕೆ ೧೪೦ ಜೀತದಾಳುಗಳನ್ನು ಗುರುತಿಸಲಾಗಿತ್ತು ಇವರ ಪುನರ್ವಸತಿಗಾಗಿ ಕೈಗೊಂಡ ಕ್ರಮಗಳೇನು (ಮಾಹಿತಿಯನ್ನು ನೀಡುವುದು)



## ಕೊಪ್ಪಳ ಜಿಲ್ಲೆಯ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಕಟ್ಟಡಗಳ ದುರಸ್ಥಿ.

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೮೨ (೪೬೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯಲ್ಲಿ ಇರುವ ಒಟ್ಟು ಪ್ರಾಥಮಿಕ ಮತ್ತು ಪ್ರೌಢ ಶಾಲಾ ಕಟ್ಟಡಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇವುಗಳಲ್ಲಿ ಸುಸ್ಥಿತಿಯಲ್ಲಿರುವ ಕಟ್ಟಡಗಳ ಸಂಖ್ಯೆ ಹಾಗೂ ದುರಸ್ಥಿ ಸ್ಥಿತಿಯಲ್ಲಿರುವ ಕಟ್ಟಡಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಪ್ರತ್ಯೇಕ ವಿವರ ನೀಡುವುದು)

(ಇ) ೨೦೧೨–೧೩ ರಿಂದ ಪ್ರಸಕ್ತ ಸಾಲಿನವರೆಗೂ ದುರಸ್ಥಿಗೊಳಗಾದ ಶಾಲಾ ಕಟ್ಟಡಗಳ ಸಂಖ್ಯೆ ಎಷ್ಟು ;

(ಈ) ಇವುಗಳಿಗೆ ಒದಗಿಸಲಾಗಿರುವ ಅನುದಾನದ ಪ್ರಮಾಣ ಎಷ್ಟು ; ದುರಸ್ಥಿಗೊಳ್ಳಬೇಕಾದ ಕಟ್ಟಡಗಳಿಗೆ ಅನುದಾನವನ್ನು ಹಂಚಿಕೆ ಮಾಡಲಾಗಿದೆಯೇ ; ಯಾವ ಲೆಕ್ಕಶೀರ್ಷಿಕೆಯಡಿ ಶಾಲಾ ಕಟ್ಟಡಗಳ ದುರಸ್ಥಿ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ ;

(ಉ) ಇಲಾಖೆಯವರು ದುರಸ್ಥಿಗೊಳಿಸುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದಾರೆಯೇ ; ಸಲ್ಲಿಸಿದ್ದಲ್ಲಿ, ಅದರ ಪ್ರತಿಗಳನ್ನು ನೀಡುವುದು ;

(ಊ) ಸರ್ಕಾರ ಈ ಕುರಿತು ಕೈಗೊಂಡ ಕ್ರಮಗಳೇನು ; ವಿಳಂಬಕ್ಕೆ ಕಾರಣಗಳೇನು ? (ವಿವರ ನೀಡುವುದು)

## ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಯಲ್ಲಿರುವ ಶಿಕ್ಷಕರ ಸಂಖ್ಯೆ ಬಗ್ಗೆ.

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೮೩ (೫೦೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಸಂಖ್ಯೆ ಎಷ್ಟು ; ಇದರಲ್ಲಿ ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿರುವ ಖಾಲಿ ಹುದ್ದೆಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ೨೦೧೩–೧೪ನೇ ಸಾಲಿನಿಂದ ಇಲ್ಲಿಯವರೆಗೂ ನೇಮಕಾತಿ ಮಾಡಿದ ಶಿಕ್ಷಕರ ಸಂಖ್ಯೆ ಎಷ್ಟು ;

(ಇ) ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರುಗಳಿಗೆ ಪ್ರತಿ ಮಾಹೆ ವೇತನ ನಿಗದಿತ ಸಮಯದಲ್ಲಿ ಪಾವತಿ ಮಾಡಲಾಗುತ್ತಿದೆಯೇ ;

(ಈ) ಕೊಪ್ಪಳ ಜಿಲ್ಲೆಯಲ್ಲಿ ಶಿಕ್ಷಕರಿಗೆ ಮೂರು ತಿಂಗಳಿಗೆ ಒಮ್ಮೆ ವೇತನ ಪಾವತಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದರೆ, ವಿಳಂಬವಾಗಿ ವೇತನ ಪಾವತಿ ಮಾಡಲು ಕಾರಣಗಳೇನು ?



## ಕೊಪ್ಪಳ ಜಿಲ್ಲೆಯಲ್ಲಿರುವ ಅನುದಾನಿತ ಪ್ರಾಥಮಿಕ ಶಾಲೆಗಳಿಗೆ ಸವಲತ್ತುಗಳು.

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೮೪ (೫೦೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯಲ್ಲಿರುವ ಅನುದಾನಿತ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಅವುಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಇ) ಅನುದಾನಿತ ಪ್ರಾಥಮಿಕ ಶಾಲೆಗಳ ವಿದ್ಯಾರ್ಥಿಗಳಿಗೆ ಸರ್ಕಾರಿ ಶಾಲೆಗಳಂತೆ ಪೂರ್ಣ ಪ್ರಮಾಣದ ಸವಲತ್ತು ನೀಡಲಾಗುತ್ತಿದೆಯೇ ;

(ಈ) ಸವಲತ್ತು ನೀಡದಿದ್ದಲ್ಲಿ ಕಾರಣಗಳೇನು ? (ವಿವರಣೆ ನೀಡುವುದು)

## ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಜಾರಿಯಲ್ಲಿರುವ ಜನಪರ ಯೋಜನೆಗಳ ಬಗ್ಗೆ.

**ಶ್ರೀ ಬಿ. ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೮೫ (೪೨೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಮಹಿಳೆಯರಿಗೆ, ಅಂಗವಿಲಕರಿಗೆ, ಮಕ್ಕಳ ಅಭಿವೃದ್ಧಿಗೆ, ವಿಕಲಚೇತನರಿಗೆ ಮತ್ತು

ಹಿರಿಯ ನಾಗರೀಕ ಸಬಲೀಕರಣಕ್ಕೆ ಹಲವಾರು ಜನಪರ ಯೋಜನೆಗಳನ್ನು ಜಾರಿ ಮಾಡಿರುವುದು ನಿಜವೇ ;

(ಆ) ಆಗಿದ್ದರೆ, ಅಂತಹ ಯೋಜನೆಗಳ ಪೂರ್ಣ ವಿವರ ಒದಗಿಸುವುದು ;

(ಇ) ಈ ಯೋಜನೆಗಳಿಂದ ಕಳೆದ ೩ ವರ್ಷಗಳಲ್ಲಿ ಸರ್ಕಾರದ ವಿವಿಧ ಯೋಜನೆಗಳಿಗೆ ಖರ್ಚು ಮಾಡಿದ ಹಣದ ಮೊತ್ತ ಎಷ್ಟು ; ಮತ್ತು ಪ್ರಯೋಜನ ಪಡೆದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ? (ವಿವರ ತಿಳಿಸುವುದು)

## ಶಿವಮೊಗ್ಗ ವಿಮಾನ ನಿಲ್ದಾಣದ ಕಾಮಗಾರಿಯ ಬಗ್ಗೆ

**ಶ್ರೀ ಆರ್. ಕೆ. ಸಿದ್ದರಾಮಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೮೬ (೪೨೩) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗದಲ್ಲಿ ನಿರ್ಮಿಸಲು ಉದ್ದೇಶಿಸಿರುವ ವಿಮಾನ ನಿಲ್ದಾಣದ ಕಾಮಗಾರಿಯು ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಸದರಿ ವಿಮಾನ ನಿಲ್ದಾಣದ ಕಾಮಗಾರಿಯನ್ನು ಪೂರ್ಣಗೊಳಿಸಲು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)



## ಸುರಕ್ಷಿತ ಶಾಲಾ ಕಟ್ಟಡ ನಿರ್ಮಿಸುವ ಕುರಿತು.

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೮೭ (೪೨೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅರಸೀಕೆರೆ ತಾಲ್ಲೂಕಿನ ಬೆಂಡೆಕೆರೆ ಗ್ರಾಮದ ರಾಷ್ಟ್ರೀಯ ಹೆದ್ದಾರಿ ೨೦೬ರ ಬದಿ ಇರುವ ಸರ್ಕಾರಿ ಪ್ರಾಥಮಿಕ ಶಾಲೆ ಸಂಪೂರ್ಣ ಶಿಥಿಲಾವಸ್ಥೆಯಲ್ಲಿದ್ದು ಮಕ್ಕಳು ಜೀವ ಭಯದಲ್ಲಿ ಕುಳಿತು ಪಾಠ ಕೇಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಶಾಲೆಯಲ್ಲಿ ಓದುತ್ತಿರುವ ಮಕ್ಕಳ ಸಂಖ್ಯೆ ಎಷ್ಟು ; ಶಾಲೆಯಲ್ಲಿ ಮೂಲ ಸೌಕರ್ಯ ಒದಗಿಸಲು ಕೈಗೊಂಡಿರುವ ಕ್ರಮಗಳೇನು ?

## ತೆರೆದ ಕೊಳವೆ ಬಾವಿಗಳನ್ನು ಮುಚ್ಚುವ ಕುರಿತು.

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೮೮ (೪೩೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮುಚ್ಚಲು ಬಾಕಿ ಇರುವ ತೆರೆದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ;

(ಆ) ರಾಜ್ಯ ಹೈಕೋರ್ಟ್ ಆದೇಶದಂತೆ ಕೊಳವೆ ಬಾವಿಗಳ ಸ್ಥಿತಿಗತಿಯ ಬಗ್ಗೆ ವಿಸ್ತೃತ ವರದಿ ಸಲ್ಲಿಸಲಾಗಿದೆಯೇ ;

(ಇ) ತೆರೆದ ಎಲ್ಲಾ ಕೊಳವೆ ಬಾವಿಗಳನ್ನು ಮುಚ್ಚಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಅರಕಲಗೂಡು ತಾಲ್ಲೂಕಿನ ಕೊಣನೂರು ಬಳಿ ಇರುವ ತೂಗು ಸೇತುವೆ ನಿರ್ವಹಣೆ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೮೯ (೪೩೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅರಕಲಗೂಡು ತಾಲ್ಲೂಕಿನ ಕೊಣನೂರು ಬಳಿ ಕಾವೇರಿ ನದಿಗೆ ಅಡ್ಡಲಾಗಿ ನಿರ್ಮಿಸಿರುವ ತೂಗು ಸೇತುವೆಯನ್ನು ಯಾವಾಗ ಮತ್ತು ಎಷ್ಟು ವೆಚ್ಚದಲ್ಲಿ ನೇಮಿಸಲಾಯಿತು ;

(ಆ) ಸದರಿ ತೂಗು ಸೇತುವೆಯ ನಿರ್ವಹಣೆಗೆ ಇದುವರೆವಿಗೂ ವ್ಯಯಿಸಿರುವ ಮೊಬಲಗೆಷ್ಟು ;

(ಇ) ಸದರಿ ತೂಗು ಸೇತುವೆಗೆ ರಕ್ಷಕರನ್ನು ನೇಮಿಸಲಾಗಿದೆಯೇ; ತೂಗು ಸೇತುವೆ ಸಂಪೂರ್ಣ ಶಿಥಿಲಗೊಂಡಿದ್ದು, ಇದರ ನಿರ್ವಹಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)

## ಕಲಬುರಗಿ ಜಿಲ್ಲೆಯ ಹಿರಿಯ ನಾಗರೀಕರ ಆಶ್ರಯ ಕೇಂದ್ರಗಳು

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ) :–**

೩೯೦ (೪೨೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಬುರ್ಗಿ ಜಿಲ್ಲೆಯಲ್ಲಿ ಇರುವ ಒಟ್ಟು ಹಿರಿಯ ನಾಗರೀಕರ ಆಶ್ರಯ ಕೇಂದ್ರಗಳು ಎಷ್ಟು; ಎಷ್ಟು ಹಿರಿಯ ನಾಗರೀಕರಿಗೆ ಆಶ್ರಯ ನೀಡಲಾಗಿದೆ;



(ಆ) ಸದರಿ ಕೇಂದ್ರಗಳನ್ನು ಹೊಸದಾಗಿ ಸ್ಥಾಪಿಸುವ ಪ್ರಸ್ತಾವನೆ ಇದೆಯೇ ;

(ಇ) ಈ ಆಶ್ರಯ ಕೇಂದ್ರಗಳಲ್ಲಿ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ ?

## ಕಲಬುರಗಿ ಜಿಲ್ಲೆಯ ವಸತಿ ಸಮಸ್ಯೆ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ) :–**

೩೯೧ (೪೨೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಬುರ್ಗಿ ಜಿಲ್ಲೆಗೆ ಕಳೆದ ೨ ವರ್ಷಗಳಲ್ಲಿ ರಾಜೀವ್‌ಗಾಂಧಿ ವಸತಿ ಸೌಕರ್ಯದಿಂದ ಎಷ್ಟು ಮನೆಗಳನ್ನು ಬಿಡುಗಡೆ ಮಾಡಲಾಗಿದೆ ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಬಿಡುಗಡೆಗೊಂಡಿರುವ ಮನೆಗಳು ಫಲಾನುಭವಿಗಳಿಗೆ ಸರಿಯಾಗಿ ತಲುಪುತ್ತಿವೆಯೇ; ಇಲ್ಲದಿದ್ದಲ್ಲಿ ಕಾರಣ ತಿಳಿಸುವುದು ;

(ಇ) ಫಲಾನುಭವಿಗಳನ್ನು ಆಯ್ಕೆ ಮಾಡಲು ಅನುಸರಿಸುತ್ತಿರುವ ಮಾನದಂಡಗಳನ್ನು ತಿಳಿಸುವುದು ?

## ತುಳು ಭಾಷೆಯನ್ನು ಸಂವಿಧಾನದ ೮ನೇ ಪರಿಚ್ಛೇದಕ್ಕೆ ಸೇರಿಸುವುದು

**ಶ್ರೀ ಐವಾನ್ ಡಿ' ಸೋಜಾ ((ನಾಮನಿರ್ದೇಶನ ಹೊಂದಿದವರು) :–**

೩೯೨ (೪೪೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಳು ಭಾಷೆಯಲ್ಲಿ ಸಂವಿಧಾನ ೮ನೇ ಪರಿಚ್ಛೇದಕ್ಕೆ ಸೇರಿಸಬೇಕೆನ್ನುವ ತುಳು ಭಾಷಿಕರ ಬೇಡಿಕೆ ಯಾವ ಹಂತದಲ್ಲಿದೆ ;

(ಆ) ತುಳು ಭಾಷೆಯನ್ನು ಸಂವಿಧಾನ ೮ನೇ ಪರಿಚ್ಛೇದದಲ್ಲಿ ಸೇರಿಸಲು ತೊಡಕುಗಳೇನಾದರೂ ಇದೆಯೇ; ಇದ್ದರೆ, ಅವು ಯಾವುವು ;

(ಇ) ೨೦೧೧ನೇ ಜನಗಣತಿ ಪ್ರಕಾರ ಕರ್ನಾಟಕ, ಭಾರತ ಮತ್ತು ಪ್ರಪಂಚದಾದ್ಯಂತ ತುಳು ಭಾಷೆ ಮಾತನಾಡುವ ಭಾಷಿಕರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ತುಳು ಭಾಷೆಯನ್ನು ಪ್ರೋತ್ಸಾಹಿಸಲು ಸರ್ಕಾರ ಕೈಗೊಂಡ ಕಾರ್ಯಕ್ರಮಗಳೇನು ;

(ಉ) ತುಳು ಭಾಷೆಯಲ್ಲಿ ವಿಶ್ವವಿದ್ಯಾನಿಲಯ ಮಟ್ಟದಲ್ಲಿ ಡಿಪ್ಲೋಮಾ ಕೋರ್ಸ್‌ನ್ನು ಬೋಧಿಸಲು ನಿರ್ಧರಿಸಲಾಗಿದ್ದು, ಪ್ರಸ್ತುತ ಯಾವ ಹಂತದಲ್ಲಿದೆ; ವಿಳಂಬವಾಗಿದ್ದರೆ, ಇದಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಊ) ತುಳು ಅಕಾಡೆಮಿಯ ನೂತನ ಕಟ್ಟಡ ಪೂರ್ಣಗೊಳ್ಳುವುದು ಯಾವಾಗ; ಇದಕ್ಕೆ ವೆಚ್ಚ ಮಾಡಲಾಗಿರುವ ಮೊತ್ತ ಎಷ್ಟು ? (ವಿವರ ನೀಡುವುದು)

## "ಶಿಕ್ಷಕರ ಅದಾಲತ್" ಕಾರ್ಯಕ್ರಮ

**ಶ್ರೀ ಐವಾನ್ ಡಿ' ಸೋಜಾ ((ನಾಮನಿರ್ದೇಶನ ಹೊಂದಿದವರು) :–**

೭೪೩ (೫೦೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಶಿಕ್ಷಕರ ನೇಮಕಾತಿ, ವರ್ಗಾವಣೆ ಮತ್ತಿತರ ಸಮಸ್ಯೆಗಳಿಗೆ ಸಂಬಂಧಪಟ್ಟಂತೆ "ಶಿಕ್ಷಕರ ಅದಾಲತ್" ಕಾರ್ಯಕ್ರಮ ನಡೆಸಿ ಪರಿಹಾರ ಕಂಡುಕೊಳ್ಳಲು ಸರ್ಕಾರ ಕ್ರಮ ಕೈಗೊಳ್ಳುವುದೇ ;



(ಆ) ಸರ್ಕಾರಿ ಮತ್ತು ಅನುದಾನಿತ ಕಾಲೇಜುಗಳಲ್ಲಿ ೫೦ಕ್ಕಿಂತ ಕಡಿಮೆ ಇರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ರಾಜ್ಯದ ಅನುದಾನಿತ ಸರ್ಕಾರಿ ಕಾಲೇಜುಗಳಲ್ಲಿ ಶಿಕ್ಷಕ ಮತ್ತು ಶಿಕ್ಷಕಿಯರಿಗೆ ಯೂನಿಫಾರಂ ಕಡ್ಡಾಯಗೊಳಿಸಲಾಗಿದೆಯೇ ;

(ಈ) ರಾಜ್ಯದಲ್ಲಿ ಒಟ್ಟು ಎಷ್ಟು ಶಾಲೆಗಳಲ್ಲಿ ಸಿ.ಸಿ. ಕ್ಯಾಮರಾ ಅಳವಡಿಸಲಾಗಿದೆ ? (ವಿವರ ನೀಡುವುದು)

## ಶಾಲೆಗಳಲ್ಲಿ ನೈತಿಕ ಶಿಕ್ಷಣ

**ಶ್ರೀ ಐವಾನ್ ಡಿ' ಸೋಜಾ ((ನಾಮನಿರ್ದೇಶನ ಹೊಂದಿದವರು) :–**

೭೪೪ (೫೦೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ನೈತಿಕ ಶಿಕ್ಷಣ (Moral Education) ಬೋಧಿಸಲು ಸರ್ಕಾರ ಶಿಕ್ಷಕರನ್ನು ನೇಮಿಸಲು ಕ್ರಮ ಕೈಗೊಂಡಿದೆಯೇ ;

(ಆ) ಶಾಲೆಗಳಲ್ಲಿ ನೈತಿಕ ಶಿಕ್ಷಣ ಬೋಧನೆ ಬಗ್ಗೆ ಕಡ್ಡಾಯವಾಗಿ ಬೋಧಿಸಲು ಸರ್ಕಾರದಿಂದ ಸುತ್ತೋಲೆ ಹೊರಡಿಸಲಾಗಿದೆಯೇ ;

(ಇ) ನೈತಿಕ ಶಿಕ್ಷಣ ಬೋಧನೆ ಮಾಡುವುದು ಪ್ರಸ್ತುತ ಕಾಲದ ಬೇಡಿಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರಣೆ ನೀಡುವುದು)

## ಪದವಿ ಪೂರ್ವ ಹಂತದಲ್ಲಿ ಕೊಂಕಣಿ ಭಾಷೆ ಬೋಧನೆ

**ಶ್ರೀ ಐವಾನ್ ಡಿ' ಸೋಜಾ ((ನಾಮನಿರ್ದೇಶನ ಹೊಂದಿದವರು) :–**

೩೯೫ (೫೧೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಿ.ಯು.ಸಿ. ಹಂತದಲ್ಲಿ ಕೊಂಕಣಿ ಭಾಷೆಯನ್ನು ಬೋಧಿಸಲು ಪಠ್ಯಕ್ರಮವನ್ನು ರಾಜ್ಯ ಸರ್ಕಾರ ರಚಿಸದೇ ಇರಲು ಕಾರಣಗಳೇನು; ಇದರಿಂದ ನಿರಂತರ ಕಲಿಕೆಗೆ ತೊಂದರೆ ಉಂಟಾಗಿರುವುದು ಕೊಂಕಣಿಭಾಷೆಯು ಬಗ್ಗೆ ರಾಜ್ಯ ಸರ್ಕಾರದ ನಿರ್ಲಕ್ಷವಾಗುವುದಿಲ್ಲವೇ ;

(ಆ) ಕೊಂಕಣಿ ಭಾಷೆಯನ್ನು ೬ನೇ ತರಗತಿಯಿಂದ ೧೦ನೇ ತರಗತಿಯವರೆಗೆ ಐಚ್ಛಿಕ ವಿಷಯವಾಗಿ ಕಲಿಸಲು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ವಿಸ್ತರಿಸದಿರಲು ಕಾರಣಗಳೇನು ;

(ಇ) ಪದವಿ ಹಂತದಲ್ಲಿ ಎಲ್ಲಾ ವಿಶ್ವವಿದ್ಯಾನಿಲಯಗಳಲ್ಲಿ ಕೊಂಕಣಿ ಭಾಷೆಯಲ್ಲಿ ಐಚ್ಛಿಕ ವಿಷಯವಾಗಿ ಬೋಧನೆ ಮಾಡಲು ಕ್ರಮ ಕೈಗೊಳ್ಳದಿರಲು ಕಾರಣವೇನು; ಕೊಂಕಣಿ ಭಾಷೆಯನ್ನು ರಾಜ್ಯದಲ್ಲಿ ಯಾವ ಲಿಪಿಯಲ್ಲಿ ಕಲಿಸಲಾಗುತ್ತಿದೆ;

(ಈ) ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಕೊಂಕಣಿ ಅಧ್ಯಯನ ಪೀಠ ರಚಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ; ರಾಜ್ಯದಲ್ಲಿ ಕೊಂಕಣಿ ಭಾಷಿಕರ ಸಂಖ್ಯೆ ಎಷ್ಟು; ಯಾವ ಯಾವ ಧರ್ಮದವರು ಕೊಂಕಣಿ ಭಾಷೆ ಮಾತನಾಡುತ್ತಾರೆ ?



## ಆಂಗ್ಲಭಾಷಾ ಶಿಕ್ಷಕರ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮಿನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೩೯೬ (೪೫೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲಾ ವ್ಯಾಪ್ತಿಗೆ ಬರುವ ಸರ್ಕಾರಿ ಪ್ರಾಥಮಿಕ ಶಾಲೆಗಳ ಆಂಗ್ಲಭಾಷೆ ಶಿಕ್ಷಕರ ಸಂಖ್ಯೆ ಎಷ್ಟು; ಸದರಿ ಶಿಕ್ಷಕರ ಹೆಸರು ಮತ್ತು ಕರ್ತವ್ಯ ನಿರ್ವಹಿಸುತ್ತಿರುವ ಶಾಲೆಗಳ ವಿಳಾಸವನ್ನೊಳಗೊಂಡಂತೆ ತಾಲ್ಲೂಕುವಾರು ವಿವರ ನೀಡುವುದು ;

(ಆ) ತುಮಕೂರು ಜಿಲ್ಲೆಯಲ್ಲಿ ಆಂಗ್ಲಭಾಷಾ ವಿಷಯದ ಮೇಲೆ ಆಯ್ಕೆಯಾಗಿರುವ ಶಿಕ್ಷಕರ ಸಂಖ್ಯೆ ಎಷ್ಟು ; (ಹೆಸರು ಮತ್ತು ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಶಾಲೆಗಳ ವಿವರದೊಂದಿಗೆ ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಖಾಲಿಯಿರುವ ಆಂಗ್ಲಭಾಷೆ ಶಿಕ್ಷಕರ ಸಂಖ್ಯೆ ಎಷ್ಟು; ಯಾವ ಯಾವ ಶಾಲೆಗಳಲ್ಲಿ ಖಾಲಿ ಇದೆ; ಇದಕ್ಕೆ ಕಾರಣವೇನು ;

(ಈ) ತುಮಕೂರು ಜಿಲ್ಲೆ, ಕುಣಿಗಲ್ ತಾಲ್ಲೂಕಿನ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ, ಉಜ್ಜನಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು; ಹಾಗೂ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ? (ಭಾಷಾವಾರು ಶಿಕ್ಷಕರ ಹೆಸರು ಮತ್ತು ವಿವರ ನೀಡುವುದು)

## ಶಿಕ್ಷಣ ಹಕ್ಕು ಕಾಯ್ದೆಯ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮಿನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೩೯೭ (೪೫೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಶಿಕ್ಷಣ ಹಕ್ಕು ಕಾಯ್ದೆ ಪ್ರಾರಂಭಗೊಂಡಿದ್ದು ಯಾವಾಗ; ಇದರ ರೂಪುರೇಷೆಗಳು ಹಾಗೂ ಮಾನದಂಡಗಳೇನು ;

(ಆ) ಈ ಯೋಜನೆ ಜಾರಿಗೆ ಬಂದ ನಂತರ ರಾಜ್ಯದಲ್ಲಿರುವ ಎಷ್ಟು ಖಾಸಗಿ ಶಿಕ್ಷಣ ಸಂಸ್ಥೆಗಳು ಇದನ್ನು ಅನುಷ್ಠಾನಗೊಳಿಸಿವೆ; ಇಲ್ಲವಾದಲ್ಲಿ ಕಾರಣಗಳೇನು ; (ಮಾಹಿತಿ ಒದಗಿಸುವುದು)

(ಇ) ಈ ಯೋಜನೆ ಜಾರಿಗೊಳಿಸಿದ ನಂತರ ಒಟ್ಟು ಎಷ್ಟು ವಿದ್ಯಾರ್ಥಿಗಳು ಇದರ ಫಲಾನುಭವಿಗಳಾಗಿದ್ದಾರೆ ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಈ) ಈ ಯೋಜನೆಯನ್ನು ಅನುಷ್ಠಾನಗೊಳಿಸದಿರುವ ಖಾಸಗಿ ಶಿಕ್ಷಣ ಸಂಸ್ಥೆಗಳ ವಿರುದ್ಧ ತೆಗೆದುಕೊಂಡಿರುವ ಕ್ರಮವೇನು ;

(ಉ) ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಈ ಯೋಜನೆಯಲ್ಲಿ ಅನುಸರಿಸಿರುವ ಕ್ರಮವೇನು ?



## ದಿ॥ ಸಿ.ಹೊನ್ನಪ್ಪ ಭಾಗವತರ ಶತಮನೋತ್ಸವ ಆಚರಣೆ

**ಶ್ರೀ ಎಂ.ಡಿ. ಲಕ್ಷ್ಮಿನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೩೯೮ (೪೫೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಅನೇಕ ರಂಗಗಳಲ್ಲಿ ದುಡಿದ ಹಿರಿಯರಿಗೆ ಗೌರವ ಸಲ್ಲಿಸಲು ಶತಮಾನೋತ್ಸವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಇರುವ ಮಾನದಂಡಗಳೇನು ;

(ಆ) ರಾಜ್ಯದಲ್ಲಿ ಈವರೆವಿಗೂ ನಡೆಸಿದ ಶತಮಾನೋತ್ಸವ ಕಾರ್ಯಕ್ರಮಗಳು ಯಾವುವು ; (ಸಮಾರಂಭದ ಹೆಸರು, ಕಾರ್ಯಕ್ರಮ ನಡೆದ ಸ್ಥಳ ದಿನಾಂಕ, ಕಾರ್ಯಕ್ರಮಕ್ಕೆ ಮಾಡಿರುವ ವೆಚ್ಚ ಇತ್ಯಾದಿ ವಿವರ ಕೊಡುವುದು)

(ಇ) ದಿ॥ ಸಿ.ಹೊನ್ನಪ್ಪ ಭಾಗವತರ್ ಶತಮಾನೋತ್ಸವ ಆಚರಣೆಯನ್ನು ಸರ್ಕಾರ ಯಾವ ದಿನಾಂಕದಂದು ಮಾಡಲು ತೀರ್ಮಾನಿಸಲಾಗಿದೆ; ಈ ಬಗ್ಗೆ ಇಲಾಖೆ ತೆಗೆದುಕೊಂಡಿರುವ ಕ್ರಮಗಳೇನು; ಇದಕ್ಕೆ ಸರ್ಕಾರ ಎಷ್ಟು ಹಣ ನೀಡಲು ನಿರ್ಧರಿಸಿದೆ ;

(ಈ) ಶತಮಾನೋತ್ಸವ ಕಾರ್ಯಕ್ರಮದಲ್ಲಿ ನಡೆಯುವ ಕಾರ್ಯಕ್ರಮಗಳ ವಿವರ ನೀಡುವುದು ಎಷ್ಟು ದಿವಸ ಕಾರ್ಯಕ್ರಮಗಳನ್ನು ನಡೆಸಲಾಗುವುದು ;

(ಉ) ಈ ಕಾರ್ಯಕ್ರಮಗಳ ಪೂರ್ವ ತಯಾರಿಗೆ ನಡೆಸಿದ ಸಭೆಗಳ ಬಗ್ಗೆ ಮಾಹಿತಿ ನೀಡುವುದು ;

(ಊ) ದಿ॥ ಸಿ.ಹೊನ್ನಪ್ಪ ಭಾಗವತರ್ ಶತಮಾನೋತ್ಸವ ಕಾರ್ಯಕ್ರಮದಲ್ಲಿ ಅವರ ಸವಿನೆನಪಿಗಾಗಿ ಅವರ ಸ್ಮಾರಕಭವನ ನಿರ್ಮಾಣ ಮಾಡಲು ಘೋಷಿಸಲಾಗುವುದೆ ?

## ದಿ॥ ಸಿ.ಹೊನ್ನಪ್ಪ ಭಾಗವತರ ಶತಮನೋತ್ಸವ ಆಚರಣೆ

**ಶ್ರೀ ಎಂ.ಡಿ. ಲಕ್ಷ್ಮಿನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೩೯ (೪೫೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿವಿಧ ಉತ್ಸವ, ಸಾಂಸ್ಕೃತಿಕ ಚಟುವಟಿಕೆ ನಡೆಸಲು ಸರ್ಕಾರೇತರ ಹಾಗೂ ಸರ್ಕಾರಿ ಸಂಘ–ಸಂಸ್ಥೆಗಳು, ಟ್ರಸ್ಟ್‌ಗಳಿಗೆ ಅನುದಾನವನ್ನು ಬಿಡುಗಡೆ ಮಾಡಲು ಇಲಾಖೆಗೆ ಇರುವ ಮಾನದಂಡವೇನು ; (ಮಾಹಿತಿ ಒದಗಿಸುವುದು)

(ಆ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಸಾಂಸ್ಕೃತಿಕ ಚಟುವಟಿಕೆ/ ಇತರೆ ವಿಷಯಗಳಿಗೆ ೨೦೧೪–೧೫ನೇ ಸಾಲಿಗೆ ಅನುದಾನ ಪಡೆದಿರುವ ಸರ್ಕಾರೇತರ ಸಂಘ–ಸಂಸ್ಥೆಗಳು, ಟ್ರಸ್ಟ್‌ಗಳ ಹೆಸರು, ವಿಳಾಸ ಮತ್ತು ಪಡೆದಿರುವ ಅನುದಾನದ ವಿವರ ನೀಡುವುದು ;

(ಇ) ೨೦೧೪–೧೫ನೇ ಸಾಲಿಗೆ ಅನುದಾನ ಪಡೆದಿರುವ ಸರ್ಕಾರಿ ಟ್ರಸ್ಟ್‌ಗಳು ಮತ್ತು ಸರ್ಕಾರಿ ಸಂಸ್ಥೆಗಳು ಪ್ರತ್ಯೇಕವಾಗಿ ಪಡೆದಿರುವ



ಅನುದಾನದ ಮೊತ್ತ, ಹೆಸರು, ವಿಳಾಸ ಸಂಪೂರ್ಣ ಮಾಹಿತಿ ಒದಗಿಸುವುದು ;

(ಈ) ರಾಜ್ಯದಲ್ಲಿ ನಡೆದಿರುವ ಯಾವ ಯಾವ ಉತ್ಸವಗಳಿಗೆ ಎಷ್ಟು ಅನುದಾನ ನೀಡಲಾಗಿದೆ ? (ಜಿಲ್ಲಾವಾರು, ಉತ್ಸವವಾರು ವಿವರ ನೀಡುವುದು)

## ಪ್ರೌಢ ಶಾಲೆಗಳಲ್ಲಿ ಕಂಪ್ಯೂಟರ್ ಶಿಕ್ಷಣ

**ಶ್ರೀ ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೪೦ (೪೫೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಸರ್ಕಾರಿ ಅನುದಾನಿತ ಪ್ರೌಢಶಾಲೆಗಳಲ್ಲಿ ಕಳೆದ ೨ ವರ್ಷಗಳಿಂದ ಕಂಪ್ಯೂಟರ್ ಶಿಕ್ಷಣ ಸಂಪೂರ್ಣವಾಗಿ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಇದಕ್ಕೆ ಕಾರಣಗಳೇನು ;

(ಇ) ಕಂಪ್ಯೂಟರ್ ಶಿಕ್ಷಕರನ್ನು ಸರ್ಕಾರಿ/ಅನುದಾನಿತ ಪ್ರೌಢಶಾಲೆಗಳಿಗೆ ಖಾಯಂ ಆಗಿ ನೇಮಕಾತಿ ಮಾಡಿಕೊಳ್ಳದೇ ಇದ್ದರೆ ಗುಣಾತ್ಮಕ ಶಿಕ್ಷಣ ನೀಡಲು ಸಾಧ್ಯವೇ; ಈ ದಿಸೆಯಲ್ಲಿ ಸರ್ಕಾರದ ಯೋಜನೆಗಳೇನು ?

## ಬೆಂಗಳೂರು ವಿಶ್ವವಿದ್ಯಾಲಯ ವಿಭಜನೆ

**ಶ್ರೀ ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೪೦೧ (೪೬೦) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ವಿಶ್ವವಿದ್ಯಾಲಯದ ವ್ಯಾಪ್ತಿಯೆಷ್ಟು; ಹಾಗೂ ಅದರಲ್ಲಿ ಸಂಯೋಜಿತಗೊಂಡಿರುವ ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಆ) ಈ ವಿಶ್ವವಿದ್ಯಾಲಯವನ್ನು ವಿಭಜನೆ ಮಾಡಲು ಸರ್ಕಾರ ಯೋಚಿಸಿದೆಯೇ ;

(ಇ) ಇದಕ್ಕೆ ಸರ್ಕಾರ ಕೈಗೊಂಡಿರುವ ಕಾರ್ಯಯೋಜನೆಗಳೇನು ?

## ಉನ್ನತ ವ್ಯಾಸಂಗ ಮಾಡಿರುವ ಪ್ರಾಂಶುಪಾಲರು/ ಉಪನ್ಯಾಸಕರಿಗೆ ಬಡ್ತಿ

**ಶ್ರೀ ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೪೦೨ (೪೫೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರಾಂಶುಪಾಲರು ಹಾಗೂ ಉಪನ್ಯಾಸಕರ ಸಂಖ್ಯೆ ಎಷ್ಟು ; (ವಿಷಯವಾರು, ಜಿಲ್ಲಾವಾರು ಮಾಹಿತಿ ನೀಡುವುದು)



ಇವರುಗಳಲ್ಲಿ ಎಂ.ಫಿಲ್, ಎನ್.ಇ.ಟಿ. ಎಸ್.ಎಲ್.ಇ.ಟಿ ಹಾಗೂ ಪಿ.ಹೆಚ್.ಡಿ ಅಂತಹ ಉನ್ನತ ವ್ಯಾಸಂಗ ಮಾಡಿರುವ ಪ್ರಾಂಶುಪಾಲರ ಹಾಗೂ ಉಪನ್ಯಾಸಕರ ಸಂಖ್ಯೆ ಎಷ್ಟು ;

(ಆ) ಈ ಪ್ರಾಂಶುಪಾಲರು ಹಾಗೂ ಉಪನ್ಯಾಸಕರಿಗೆ ಸರ್ಕಾರಿ ಪದವಿ ಕಾಲೇಜುಗಳಿಗೆ ಬಡ್ತಿ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಜ್ಯೋತಿ ಸಂಜೀವಿನಿ ಯೋಜನೆ

**ಶ್ರೀ ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೪೦೩ (೪೫೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ಜ್ಯೋತಿ ಸಂಜೀವಿನಿ ಯೋಜನೆ ಜಾರಿಗೊಳಿಸಲಾಗಿದೆಯೇ ;

(ಆ) ಜಾರಿಗೊಳಿಸಿದ್ದಲ್ಲಿ, ಈ ಯೋಜನೆಯ ರೂಪುರೇಷೆಗಳೇನು; ಹಾಗೂ ಇದನ್ನು ಪಡೆಯಲು ಇರುವ ಮಾನದಂಡ ಹಾಗೂ ನಿಬಂಧನೆಗಳೇನು ;

(ಇ) ಈ ಯೋಜನೆಯನ್ನು ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರಿಗೆ ವಿಸ್ತರಿಸಲು ಸರ್ಕಾರ ಯೋಚಿಸಿದೆಯೇ ?

## ತಾಲ್ಲೂಕು ಸಂಯೋಜಕರು ಹಾಗೂ ಹೋಬಳಿ ಸಂಯೋಜಕರುಗಳ ನೇಮಕಾತಿ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ ( ಪದವೀಧರರ ಕ್ಷೇತ್ರ ) :–**

೪೦೪ (೪೬೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಯೋಜನೆಯು ರಾಜ್ಯದಲ್ಲಿ ಈಗಲೂ ಮುಂದುವರಿಯುತ್ತಿದೆಯೇ ;

(ಆ) ಮುಂದುವರಿಯುತ್ತಿದ್ದಲ್ಲಿ ಈ ಯೋಜನೆಯಡಿ ಕೆಲಸ ಮಾಡುತ್ತಿದ್ದ BRC ಹಾಗೂ CRC ಗಳನ್ನು ಮುಂದುವರಿಕೆ ಬಗ್ಗೆ ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಪಿಟಿಶನ್ ಸಂಖ್ಯೆ: ೧೭೩೦೩–೩೦೪/೨೦೧೨ ರ ಪ್ರಕರಣದಲ್ಲಿ ಯಥಾಸ್ಥಿತಿ ಮುಂದುವರಿಸಲು ಆದೇಶಿಸಿರುವುದು ನಿಜವೆ ;

(ಇ) ಯೋಜನೆ ಜಾರಿಯಲ್ಲಿದ್ದರೂ ಕೂಡ ಸರ್ಕಾರವು ಲಿಖಿತ ಪರೀಕ್ಷೆ ನಡೆಸಿ ನೇಮಕ ಮಾಡಿಕೊಂಡ ತಾಲ್ಲೂಕು ಸಂಯೋಜಕರು ಹಾಗೂ ಹೋಬಳಿ ಸಂಯೋಜಕರುಗಳನ್ನು ಹೊರಗುತ್ತಿಗೆ ಏಜೆನ್ಸಿಗಳ ಮೂಲಕ ನೇಮಿಸಿಕೊಳ್ಳಲು ಆದೇಶಿಸಿರುವುದರಿಂದ ನ್ಯಾಯಾಲಯದ ಆದೇಶವನ್ನು ತಿರುಚಿದಂತಾಗುವುದಿಲ್ಲವೆ ;

(ಈ) ನ್ಯಾಯಾಲಯದ ಆದೇಶವಾಗುವುದಕ್ಕಿಂತ ಮೊದಲೇ ಇವರನ್ನು ತೆಗೆದು ಹಾಕಲಾಗಿತ್ತೆಂದು ಸರ್ಕಾರ ನಿರ್ಧರಿಸಿದ್ದರೆ, BRC ಹಾಗೂ CRC ಗಳನ್ನು ತೆಗೆದು ಹಾಕಿದ್ದಕ್ಕೆ ಅವರು ನ್ಯಾಯಾಲಯದ ಮೊರೆ ಹೋಗಲು ಸಾಧ್ಯವಿಲ್ಲವೆ ;



(ಉ) ಯೋಜನೆ ಜಾರಿಯಲ್ಲಿರುವುದರಿಂದ BRC ಹಾಗೂ CRC ಗಳನ್ನು ಮಾನವೀಯ ದೃಷ್ಟಿಯಿಂದ ಹಾಗೂ ಮಾನ್ಯ ಉಚ್ಚ ನ್ಯಾಯಾಲಯದ ಆದೇಶವನ್ನು ಗೌರವಿಸುವ ದೃಷ್ಟಿಯಿಂದ ಪುನಃ ಸರ್ಕಾರವೇ/ ಜಿಲ್ಲಾ ಪಂಚಾಯ್ತಿಯ ಮೂಲಕ ಪುನರ್ ನೇಮಕ ಮಾಡಿಕೊಳ್ಳಲಿದೆಯೇ ;

(ಊ) ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?

## ಮೈಲಾಂಡ್ಲ ಹಳ್ಳಿಯ ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ಕೊಠಡಿಗಳು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ ( ಪದವೀಧರರ ಕ್ಷೇತ್ರ ) :–**

೪೦೫ (೪೬೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ತಾಲ್ಲೂಕಿನ ಮೈಲಾಂಡ್ಲ ಹಳ್ಳಿಯಲ್ಲಿ ಸರ್ಕಾರಿ ಪದವಿಪೂರ್ವ ಕಾಲೇಜನ್ನು ಆರಂಭಿಸಿದ್ದು ಯಾವಾಗ ;

(ಆ) ಈ ಪದವಿಪೂರ್ವ ಕಾಲೇಜಿನಲ್ಲಿ ಎಷ್ಟು ಜನ ವಿದ್ಯಾರ್ಥಿಗಳು ಅಧ್ಯಯನ ಮಾಡುತ್ತಿದ್ದಾರೆ ;

(ಇ) ಈ ಕಾಲೇಜಿಗೆ ಎಷ್ಟು ಕೊಠಡಿಗಳನ್ನು ಒದಗಿಸಲಾಗಿದೆ ;

(ಈ) ಈ ಕಾಲೇಜಿಗೆ ಇನ್ನೂ ಹೆಚ್ಚಿನ ಕೊಠಡಿಗಳನ್ನು ಒದಗಿಸಲು ಸರ್ಕಾರಕ್ಕೆ ಮನವಿಗಳು ಬಂದಿವೆಯೇ ;

(ಉ) ಬಂದಿದ್ದಲ್ಲಿ, ಕೊಠಡಿಗಳ ನಿರ್ಮಾಣಕ್ಕೆ ಸರ್ಕಾರ ಏನು ಕ್ರಮ ಕೈಗೊಂಡಿದೆ ?

## ಕರ್ನಾಟಕ ರಾಜ್ಯ ಪ್ರವಾಸೋದ್ಯಮ ನಿಗಮ ಟ್ಯಾಕ್ಸಿ ಸೇವೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ ( ಪದವೀಧರರ ಕ್ಷೇತ್ರ ) :–**

೪೦೬ (೪೬೭) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಪ್ರವಾಸೋದ್ಯಮ ನಿಗಮ (KSTDC) ದಿಂದ ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ (BIAL)ದಲ್ಲಿ ಪ್ರೀಪೇಡ್ ಟ್ಯಾಕ್ಸಿ ಸೇವೆಯುನ್ನು ಪ್ರಾರಂಭಿಸಲಾಗಿದ್ದು ಯಾವಾಗ ;

(ಆ) ಈಗ ಕಾರ್ಯನಿರ್ವಹಿಸುತ್ತಿರುವ ಪ್ರೀಪೇಡ್ ಟ್ಯಾಕ್ಸಿಗಳ ಸಂಖ್ಯೆ ಎಷ್ಟು ; (ಅವುಗಳ ನೋಂದಣಿ ಸಂಖ್ಯೆ ತಿಳಿಸುವುದು)

(ಇ) ಇಲ್ಲಿಯವರೆಗೆ ಪ್ರೀಪೇಡ್ ಟ್ಯಾಕ್ಸಿಗಳ ಸೇವೆಯಿಂದ ಪಡೆದ ಒಟ್ಟಾರೆ ಪಾರ್ಕಿಂಗ್ ಶುಲ್ಕ ಎಷ್ಟು ; (ತಿಂಗಳವಾರು ವಿವರ ನೀಡುವುದು)

(ಈ) ಇಲ್ಲಿಯವರೆಗೆ ಪ್ರೀಪೇಡ್ ಟಾಕ್ಸಿಗಳ ಸೇವೆಯನ್ನು ನಿರ್ವಹಿಸುತ್ತಿರುವ ಕಾಲ್ ಸೆಂಟರ್‌ಗಳಿಗೆ ಎಷ್ಟು ಶುಲ್ಕ ನೀಡಲಾಗಿದೆ; ವಿವರ ನೀಡುವುದು ; (ಕಾಲ್‌ಸೆಂಟರ್ ಹೆಸರು ಕಛೇರಿ ವಿಳಾಸದೊಂದಿಗೆ ವಿವರ ನೀಡುವುದು)

(ಉ) ಪ್ರೀಪೇಡ್ ಟ್ಯಾಕ್ಸಿ ಸೇವೆಯ ಪಾರ್ಕಿಂಗ್ ಶುಲ್ಕ ಮತ್ತು ನಿರ್ವಹಣೆಯಲ್ಲಿ ಅಕ್ರಮಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರವಾದ ಮಾಹಿತಿ ನೀಡುವುದು)



## ರಾಜ್ಯದ ವಿಶ್ವವಿದ್ಯಾನಿಲಯಗಳಲ್ಲಿ ಖಾಲಿ ಇರುವ ಉನ್ನತ ಹುದ್ದೆಗಳು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ ( ಪದವೀಧರರ ಕ್ಷೇತ್ರ ) :–**

೪೦೭ (೪೭೦) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ವಿಶ್ವವಿದ್ಯಾನಿಲಯಗಳ ಸಂಖ್ಯೆ ಎಷ್ಟು ;

(ಆ) ಈ ವಿಶ್ವವಿದ್ಯಾನಿಲಯಗಳಲ್ಲಿ ಖಾಲಿ ಇರುವ ಕುಲಪತಿಗಳ, ಕುಲಸಚಿವರ ಹಾಗೂ ಹಣಕಾಸು ಅಧಿಕಾರಿಗಳ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಈ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಪ್ರಮುಖ ಹುದ್ದೆಗಳು ಖಾಲಿ ಇರುವುದರಿಂದ ವಿಶ್ವವಿದ್ಯಾಲಯದ ದಿನನಿತ್ಯದ ಆಡಳಿತ ಮೇಲೆ ದುಷ್ಪರಿಣಾಮಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ೧೯೯೪–೯೫ರ ನಂತರ ಪ್ರಾರಂಭವಾದ ಶಿಕ್ಷಣ ಸಂಸ್ಥೆಗಳ ಅನುದಾನ ಒಳಪಡಿಸುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ ( ಪದವೀಧರರ ಕ್ಷೇತ್ರ ) :–**

೪೦೮ (೪೮೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೧೯೯೪–೯೫ರ ನಂತರ ಪ್ರಾರಂಭಿಸಲಾದ ಪ್ರಾಥಮಿಕ, ಪ್ರೌಢ ಹಾಗೂ ಪದವಿಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ;

(ಆ) ಈ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಇ) ಈ ಶಿಕ್ಷಣ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಬೇಕಾಗಬಹುದಾದ ಅನುದಾನ ಎಷ್ಟು ;

(ಈ) ೧೯೯೪–೯೫ರ ನಂತರ ಪ್ರಾರಂಭಿಸಲಾದ ಶಿಕ್ಷಣ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಸರ್ಕಾರ ಉದ್ದೇಶಿಸಿದೆಯೇ ;

(ಉ) ಹಾಗಿದ್ದಲ್ಲಿ, ಯಾವಾಗಿನಿಂದ ಈ ಶಿಕ್ಷಣ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಉದ್ದೇಶಿಸಲಾಗಿದೆ ?

## ಪದವಿ ಕಾಲೇಜುಗಳ ಬೋಧಕ ಸಿಬ್ಬಂದಿಗೆ ವೇತನ ಪಾವತಿ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) :–**

೪೦೯ (೪೭೪) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಅನುದಾನಿತ ಪದವಿ ಕಾಲೇಜುಗಳ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಯ ಎರಡು ತಿಂಗಳು (ನವೆಂಬರ್ ಮತ್ತು ಡಿಸೆಂಬರ್ ೨೦೧೪) ಗಳ ವೇತನ ನೀಡಲಾಗಿದೆಯೇ; ಇಲ್ಲವಾದಲ್ಲಿ ಕಾರಣವೇನು ;



(ಆ) ಕರ್ನಾಟಕ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿ ಕಾಯ್ದೆ ಜಾರಿಯಾಗಿದ್ದು ಯಾವಾಗ; ಈ ಕಾಯ್ದೆಯನ್ನು ಯಾವ ವರ್ಷದಿಂದ ಪೂರ್ವಾನ್ವಯವಾಗುವಂತೆ ಜಾರಿಗೊಳಿಸಲಾಗಿದೆ ;

(ಇ) ಸದರಿ ವೇತನ ಸಮಸ್ಯೆಯ ಅಧ್ಯಯನಕ್ಕಾಗಿ ಸಮಿತಿ ರಚಿಸಲಾಗಿದೆಯೇ; ಸಮಿತಿಯು ವರದಿ ನೀಡಿದೆಯೇ ? (ವಿವರ ನೀಡುವುದು)

## ಆರ್.ಟಿ.ಇ. ಅಡಿಯಲ್ಲಿ ವಿದ್ಯಾರ್ಥಿಗಳ ಪ್ರವೇಶ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) :–**

೪೧೦ (೪೭೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಈ ಶೈಕ್ಷಣಿಕ ವರ್ಷದಲ್ಲಿ ಆರ್.ಟಿ.ಇ ಅಡಿಯಲ್ಲಿ ಖಾಸಗಿ ಶಾಲೆಗಳಿಗೆ ಬಡ ವಿದ್ಯಾರ್ಥಿಗಳ ಪ್ರವೇಶಕ್ಕೆ ಅವಕಾಶ ಇರುವ ಸೀಟುಗಳ ಸಂಖ್ಯೆ ಎಷ್ಟು ; (ಬೆಂಗಳೂರು ನಗರ ಜಿಲ್ಲೆಯ ಪ್ರತ್ಯೇಕ ಮಾಹಿತಿ ನೀಡಿ)

(ಆ) ಅರ್ಜಿಗಳನ್ನು ಸಲ್ಲಿಸಲು ನಿಗಧಿಪಡಿಸಿರುವ ಕಾಲಾವಧಿಯೇನು ;

(ಇ) ಜನವರಿ ೨೦೧೫ರ ತಿಂಗಳಿನಲ್ಲಿ ಸಲ್ಲಿಕೆಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ಬೆಂಗಳೂರು ಜಿಲ್ಲೆಯ ಪ್ರತ್ಯೇಕ ವಿವರ ನೀಡಿ)

(ಈ) ಅರ್ಜಿಗಳನ್ನು ಸಲ್ಲಿಸಲು ಪೋಷಕರಿಗೆ ಇರುವ ಮಾರ್ಗಗಳೇನು ;

(ಉ) ಪೋಷಕರಿಗೆ ಗೊಂದಲ ಉಂಟಾದಲ್ಲಿ ನಿವಾರಣೆಗೆ ಯಾವ ರೀತಿಯ ವ್ಯವಸ್ಥೆ ಕಲ್ಪಿಸಲಾಗಿದೆ ?

## ನಾಡಗೀತೆ ಕುರಿತು ಸಮಿತಿ ರಚನೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) :–**

೪೧೧ (೪೭೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಾಡಗೀತೆ ಕುರಿತು ರಾಜ್ಯ ಸರ್ಕಾರ ಯಾವುದಾದರು ಸಮಿತಿ ರಚಿಸಿದೆಯೇ ; (ಸಮಿತಿಯ ಕುರಿತು ಹಾಗೂ ಸಮಿತಿ ನಿರ್ಮಾಣದ ಕಾರಣ ಕುರಿತು ವಿವರ ನೀಡುವುದು)

(ಆ) ಈ ಸಮಿತಿಯನ್ನು ಯಾವಾಗ ನಿರ್ಮಿಸಲಾಯಿತು ;

(ಇ) ಸಮಿತಿಯು ಯಾವುದಾದರೂ ವರದಿ ನೀಡಿದಿಯೇ; ನೀಡಿದ್ದಲ್ಲಿ, ವರದಿಯಲ್ಲಿರುವ ಪ್ರಮುಖ ಅಂಶಗಳು ಯಾವುವು ?

## ಪ್ರೌಢಶಾಲಾ ಶಿಕ್ಷಕರ ಸಂಘದ ಬೇಡಿಕೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) :–**

೪೧೨ (೪೮೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಸರ್ಕಾರಿ ಪ್ರೌಢಶಾಲಾ ಶಿಕ್ಷಕರ ಸಂಘದಿಂದ ಇತ್ತೀಚೆಗೆ ಬಡ್ತಿಗಾಗಿ ಬೇಡಿಕೆಗಳು ಬಂದಿವೆಯೇ ; (ವಿವರ ನೀಡುವುದು)



(ಆ) ಈ ಕುರಿತು ಯಾವುದಾದರೂ ಉಪ ಸಮಿತಿ ರಚಿಸಲಾಗಿದೆಯೇ; ರಚಿಸಿದ್ದಲ್ಲಿ ಮತ್ತು ವರದಿ ನೀಡಿದ್ದಲ್ಲಿ, ವಿವರ ನೀಡುವುದು ;

(ಇ) ಇವರುಗಳಿಗೆ ೧೦ ವರ್ಷ ಸೇವೆಯ ಕಾಲಮಿತಿಯ ವೇತನ ಬಡ್ತಿ ನೀಡುವ ಕುರಿತು ಸರ್ಕಾರದ ನಿಲುವೇನು; ನೀಡುವಲ್ಲಿ ಬೇಕಾಗುವ ಕಾಲಮಿತಿಯೇನು ?

## ಖಾಲಿ ಇರುವ ಬೋಧಕ ಹುದ್ದೆಗಳು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) :–**

೪೧೩ (೪೭೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಾಥಮಿಕ, ಪ್ರೌಢ ಪೂರ್ವ ಪದವಿ ಕಾಲೇಜುಗಳನ್ನು ಒಳಗೊಂಡಂತೆ ಶಿಕ್ಷಣ ಇಲಾಖೆಯಲ್ಲಿ ಒಟ್ಟು ಎಷ್ಟು ಬೋಧಕ ಮತ್ತು ಬೋಧಕೇತರ ಹುದ್ದೆಗಳು ಖಾಲಿ ಇವೆ ; (ವಿವರ ನೀಡುವುದು)

(ಆ) ಖಾಲಿ ಹುದ್ದೆಗಳ ಕೊರತೆ ನೀಗಿಸಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ;

(ಇ) ಖಾಲಿ ಹುದ್ದೆಗಳಿಂದಾಗಿ ಇಲಾಖೆಯು ಸಮರ್ಪಕ ಕಾರ್ಯಚಟುವಟಿಕೆಗಳಲ್ಲಿ ಮತ್ತು ಬೋಧನೆಯ ಕಾರ್ಯ ಚಟುವಟಿಕೆಯಲ್ಲಿ ತೊಂದರೆಯಾಗಿರುವುದು ನಿಜವೆ ;

(ಈ) ಈ ಸಂಬಂಧ ಖಾಲಿ ಹುದ್ದೆಗಳನ್ನು ತುಂಬಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ; ಇದಕ್ಕೆ ಬೇಕಾದ ಕಾಲಾವಧಿಯೇನು ?

## ಶಾಲಾ ಮಕ್ಕಳಿಗೆ ನೀಡಲಾಗುತ್ತಿರುವ ಸೌಲಭ್ಯಗಳ ಕುರಿತು.

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ) :–**

೪೩೪ (೪೯೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರವು ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಮಕ್ಕಳಿಗೆ ಬಿಸಿಯೂಟ, ಸಮವಸ್ತ್ರ ಹಾಗೂ ಇನ್ನಿತರ ಯಾವ ಯಾವ ಸೌಲಭ್ಯಗಳನ್ನು ಯಾವ ಉದ್ದೇಶಕ್ಕಾಗಿ ನೀಡಲಾಗುತ್ತಿದೆ ;

(ಆ) ಈ ಸೌಲಭ್ಯಗಳಲ್ಲಿ ಯಾವ ಸೌಲಭ್ಯಗಳನ್ನು ಸರ್ಕಾರಿ ಅನುದಾನಿತ, ಅನುದಾನ ರಹಿತ ಶಾಲೆಗಳಲ್ಲಿ ನೀಡಲಾಗುತ್ತಿದೆ ? (ಸಂಪೂರ್ಣ ಮಾಹಿತಿಯೊಂದಿಗೆ ವಿವರ ನೀಡುವುದು)

## ಸಿಂದಗಿ ನಗರದಲ್ಲಿ ಸ್ವ–ವಸತಿ ಹಾಗೂ ಗುರುಭವನ ಕಟ್ಟಡ.

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ) :–**

೪೩೫ (೪೯೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂದಗಿ ನಗರದಲ್ಲಿ ಸ್ವ–ವಸತಿ, ಗುರುಭವನ ಕಟ್ಟಡದ ಬೇಡಿಕೆಯ ಪ್ರಸ್ತಾವನೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ತಯಾರಿಸಿರುವ ಪ್ರಸ್ತಾವನೆಗಳ ವಿವರಗಳೇನು ಹಾಗೂ ಅದಕ್ಕೆ ಬೇಕಾಗುವ ಹಣವೆಷ್ಟು ;

(ಇ) ಸರ್ಕಾರದಿಂದ ವಿಶೇಷ ಅನುದಾನ ಕೊಡಲು ಯಾವ ಕ್ರಮ ಕೈಗೊಳ್ಳಲಾಗಿದೆ ?



## ಬಾಲ ಭವನ ಸ್ಥಾಪನೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೩೬ (೫೦೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯಾದ್ಯಂತ ಇರುವ ಬಾಲ ಭವನಗಳ ಸಂಖ್ಯೆ ಎಷ್ಟು ;

(ಆ) ರಾಜ್ಯಾದ್ಯಂತ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಬಾಲ ಭವನಗಳನ್ನು ಸ್ಥಾಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಇ) ಇದ್ದಲ್ಲಿ, ೨೦೧೫–೧೬ನೇ ಸಾಲಿನಲ್ಲಿ ಜಿಲ್ಲಾವಾರು, ತಾಲ್ಲೂಕುವಾರು ಹಾಗೂ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಬಾಲ ಭವನ ಸ್ಥಾಪಿಸಲು ಕೈಗೊಂಡ ಕ್ರಮಗಳೇನು ?

## ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪನೆ.

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೩೭ (೫೦೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಶುದ್ಧ ಕುಡಿಯುವ ನೀರಿನ ಘಟಕವನ್ನು ನಿರ್ಮಿಸುವ ಉದ್ದೇಶ ಸರ್ಕಾರಕ್ಕಿದೆಯೇ ;

(ಆ) ಇದ್ದಲ್ಲಿ, ಶುದ್ಧ ಕುಡಿಯುವ ನೀರಿನ ಘಟಕವನ್ನು ಸ್ಥಾಪಿಸಲು ಇರುವ ಮಾನದಂಡವೇನು ;

(ಇ) ರಾಜ್ಯಾದ್ಯಂತ ಇರುವ ಗ್ರಾಮ ಪಂಚಾಯತಿಗಳಿಗೂ ಶುದ್ಧ ಕುಡಿಯುವ ನೀರಿನ ಘಟಕವನ್ನು ಸರ್ಕಾರದ ವೆಚ್ಚದಲ್ಲಿಯೇ ಸ್ಥಾಪಿಸಲು ಉದ್ದೇಶ ಸರ್ಕಾರಕ್ಕೆ ಇದೆಯೇ ?

## ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರ ನೇಮಕಾತಿ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೩೮ (೫೦೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರ ನೇಮಕಾತಿ ಪ್ರಕ್ರಿಯೆ ಯಾವ ಹಂತದಲ್ಲಿದೆ ;

(ಆ) ಎಷ್ಟು ಜನ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳುವ ಉದ್ದೇಶ ಸರ್ಕಾರಕ್ಕೆ ಇದೆ ;

(ಇ) ನೇಮಕಾತಿ ಪ್ರಕ್ರಿಯೆ ವಿಳಂಬವಾಗುತ್ತಿರಲು ಕಾರಣವೇನು ?

## ಬೆಳಗಾವಿಯಲ್ಲಿರುವ ಮಾಹೇಶ್ವರಿ ಅಂಧ ಮಕ್ಕಳ ಶಾಲೆಯ ಉಳಿದ ಗ್ರಾಂಟ್ ಸಂದಾಯ ಮಾಡುವ ಬಗ್ಗೆ.

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ):–**

೪೩೯ (೫೧೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿಯಲ್ಲಿರುವ ಮಾಹೇಶ್ವರಿ ಅಂಧ ಮಕ್ಕಳ ಶಾಲೆಗೆ ಎಷ್ಟು ಹಣ ಸಂದಾಯ ಮಾಡದೇ ಉಳಿದಿರುತ್ತದೆ ;



(ಆ) ಎಷ್ಟು ಹಣ ಸಂದಾಯವಾಗಿರುವುದು ; ಹಾಗೂ ಎಂದಿನಿಂದ ಹಣ ಸಂದಾಯವಾಗದೇ ಉಳಿದಿರುವುದು ; ಹಾಗೂ ಇನ್ನೂ ಎಷ್ಟು ದಿನಗಳೊಳಗಾಗಿ ಹಣ ಸಂದಾಯ ಮಾಡಲಾಗುವುದು ;

(ಇ) ಅಲ್ಲಿ ಇರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಈ) ಅಂಧ ಮಕ್ಕಳ ಶಾಲೆಗೆ ಶುದ್ಧ ಕುಡಿಯುವ ನೀರು ಹಾಗೂ ಇನ್ನೂ ಹೆಚ್ಚಿನ ಮೂಲಭೂತ ಸೌಕರ್ಯ ಒದಗಿಸುವುದು ಅವಶ್ಯವಿದ್ದು, ಹೆಚ್ಚಿನ ಹಣ ಒದಗಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಶ್ರೀ ಸಿದ್ದಲಿಂಗೇಶ್ವರ ಕಮರಿ ಮಠಕ್ಕೆ ಯಾತ್ರಾ ನಿವಾಸ ನಿರ್ಮಾಣ.

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ):–**

೪೪೦ (೫೧೩) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆ, ವಿಜಯಪುರ ತಾಲ್ಲೂಕಿನ, ಸಂಗಾಪುರ ಗ್ರಾಮದಲ್ಲಿರುವ ಶ್ರೀ ಸಿದ್ದಲಿಂಗೇಶ್ವರ ಕಮರಿ ಮಠದಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಜ್ಯ ಹಾಗೂ ಹೊರರಾಜ್ಯದಿಂದ ಪ್ರವಾಸಿಗರು ಆಗಮಿಸುವುದರಿಂದ, ಇವರಿಗೆ ಇಲ್ಲಿ ಉಳಿದುಕೊಳ್ಳಲು ಯಾವುದೇ ರೀತಿಯ ವಸತಿ ವ್ಯವಸ್ಥೆ ಇಲ್ಲವಾದ್ದರಿಂದ, ಇಲ್ಲಿ ಯಾತ್ರಾ ನಿವಾಸ ಹಾಗೂ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ ;

(ಇ) ಸದರಿ ಮಠಕ್ಕೆ ಬರುವ ಜನರಿಗೆ ಉಳಿದುಕೊಳ್ಳಲು ಯಾತ್ರಾನಿವಾಸ ನಿರ್ಮಾಣ ಮಾಡಲು ಇಲ್ಲಿನ ಸ್ಥಳೀಯರು ಸಹ ಸಹಾಯ ನೀಡಲು ಮುಂದೆ ಬಂದಿದ್ದು, ಇದರೊಂದಿಗೆ ಸರ್ಕಾರವು ಕೂಡ ಈ ಕೂಡಲೇ ಯಾತ್ರಾನಿವಾಸ ನಿರ್ಮಾಣಕ್ಕೆ ಹಾಗೂ ಇನ್ನುಳಿದ ಮೂಲಭೂತ ಸೌಲಭ್ಯವನ್ನು ಕಲ್ಪಿಸಲು ಕೂಡಲೇ ಕ್ರಮ ಕೈಗೊಳ್ಳುವುದೇ ?

## ಶ್ರೀ ಶಿವಚಿದಂಬರ ಮೂಲಪೀಠ ಕೆಂಗೇರಿ–ಮುರಗೋಡ ಇಲ್ಲಿಗೆ ಬರುವ ಪ್ರವಾಸಿಗರಿಗೆ ಮೂಲಭೂತ ಸೌಕರ್ಯ.

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ):–**

೪೪೧ (೫೧೧) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಷ್ಟ್ರದಲ್ಲಿ ಏಕೈಕ ಐತಿಹಾಸಿಕ ಶಿವ ಚಿದಂಬರ ದೇವಸ್ಥಾನವಿದ್ದು ಹಾಗೂ ಸುಂದರವಾದ ಕಲ್ಲುಗಳಿಂದ ಕಟ್ಟಿದ ಕೆತ್ತನೆಯನ್ನು ನೋಡಲು (ಬಾದಾಮಿ ಹಾಗೂ ಬನಶಂಕರಿಕ್ಕಿಂತಲು ಉತ್ತಮವಾದ) ಪ್ರವಾಸಿಗರು ಇಲ್ಲಿಗೆ ಬರುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಕೆಂಗೇರಿ–ಮುರಗೋಡದಲ್ಲಿ ಶ್ರೀ ಶಿವಚಿದಂಬರ ಮೂಲ ಪೀಠ ವೀಕ್ಷಣೆಗೆ ಬರುವ ಪ್ರವಾಸಿಗರಿಗೆ ಇಲ್ಲಿ ವಾಸ್ತವ್ಯ ಮಾಡಲು ಯಾತ್ರಿನಿವಾಸ, ಕುಡಿಯುವ ನೀರು ಹಾಗೂ ಮೂಲಭೂತ ಸೌಕರ್ಯ ಒದಗಿಸಲು ಮಾನ್ಯ ಪ್ರವಾಸೋದ್ಯಮ ಸಚಿವರು ಈ ಪೀಠಕ್ಕೆ ಬಂದಾಗ ಆಶ್ವಾಸನೆ ನೀಡಿದ ಪ್ರಕಾರ ಕ್ರಮ ಕೈಗೊಳ್ಳಲಾಗುವುದೇ ;



(ಇ) ಮಾನ್ಯ ಸಚಿವರು ದಿನಾಂಕ: ೨೪–೧೨–೨೦೧೪ ರಂದು ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ ಇವರಿಗೆ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದಂತೆ ಕೂಡಲೇ ಕ್ರಮ ಕೈಗೊಳ್ಳಲಾಗುವುದೇ ಹಾಗೂ ಅವಶ್ಯವಿರುವ ಒಂದು ಕೋಟಿ ರೂ. ಬಿಡುಗಡೆ ಮಾಡಲಾಗುವುದೇ ?

## ಪತ್ರಿಕಾ ಭವನ ನಿರ್ಮಾಣ.

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೪೪೨ (೫೧೪) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಗಡಿನಾಡಿನಲ್ಲಿ ಪ್ರಕಟವಾಗುತ್ತಿರುವ ಕನ್ನಡ ಪತ್ರಿಕೆಗಳು ಆರ್ಥಿಕ ಮುಗ್ಗಟ್ಟಿನಿಂದ ತೊಂದರೆ ಅನುಭವಿಸುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ ಇವುಗಳಿಗೆ ವಿಶೇಷ ಹೆಚ್ಚಿನ ಜಾಹಿರಾತು ನೀಡಿ ಪ್ರೋತ್ಸಾಹಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಇ) ರಾಜ್ಯದಲ್ಲಿ ೨ನೇ ರಾಜಧಾನಿ ಆಗುವ ಎಲ್ಲಾ ಅರ್ಹತೆ ಹೊಂದಿದ ಬೆಳಗಾವಿಯಲ್ಲಿ ಇನ್ನೂ ಸ್ವತಂತ್ರವಾದ ಪತ್ರಿಕಾ ಭವನ ಇಲ್ಲದೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ವಾರ್ತಾ ಭವನ ಕಟ್ಟಲು ಸರ್ಕಾರವು ಎಲ್ಲಾ ರೀತಿಯಿಂದ ಸಹಾಯ ಮಾಡಲಾಗುವುದೇ ?

## ಅಬಕಾರಿ ಆದಾಯದಲ್ಲಿ ಭಾರಿ ಪ್ರಮಾಣದ ಇಳಿಕೆ.

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ) :–**

೪೪೩ (೫೧೨) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಈ ವರ್ಷದ ಆಯವ್ಯಯದಲ್ಲಿ ಅಬಕಾರಿ ಇಲಾಖೆಯಿಂದ ಎಷ್ಟು ಹಣ ಸಂಗ್ರಹವಾಗುವುದೆಂದು ಅಂದಾಜಿಸಲಾಗಿದೆ ;

(ಆ) ಇಲ್ಲಿಯವರೆಗೆ ಎಷ್ಟು ಹಣ ಸಂಗ್ರಹವಾಗಿದೆ ;

(ಇ) ಕಡಿಮೆ ಹಣ ಸಂಗ್ರಹವಾಗಲು ಕಾರಣಗಳೇನು ;

(ಈ) ಹೆಚ್ಚು ಹಣ ಸಂಗ್ರಹವಾಗಲು ಯಾವ ವಿಶೇಷ ಕ್ರಮ ಕೈಗೊಳ್ಳಲಾಗಿದೆ ?

## ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಇಲಾಖೆ ವತಿಯಿಂದ ಹಮ್ಮಿಕೊಂಡಿರುವ ಯೋಜನೆಗಳು.

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೪೪ (೫೧೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಗಳಲ್ಲಿ ಇಲಾಖಾ ವತಿಯಿಂದ ಹಮ್ಮಿಕೊಳ್ಳಲು ಉದ್ದೇಶಿಸಿರುವ ಯೋಜನೆಗಳಾವುವು ; ಪ್ರಸ್ತುತ ವರ್ಷದಲ್ಲಿ ಅವುಗಳಿಗೆ ಮೀಸಲಿಟ್ಟ ಹಣವೆಷ್ಟು ;



(ಆ) ಪ್ರಸ್ತುತ ಈ ಜಿಲ್ಲೆಗಳಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಇಲಾಖೆವತಿಯು ಪ್ರಗತಿಯಲ್ಲಿರುವ ಯೋಜನೆಗಳಾವುವು ; ಈ ಯೋಜನೆಗಳಿಗೆ ಮೀಸಲಿಟ್ಟ ಅನುದಾನದ ಮೊತ್ತವೆಷ್ಟು ; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಇ) ಈ ಜಿಲ್ಲೆಗಳಿಗೆ ಹೊಸ ಪ್ರಸ್ತಾವನೆ ಏನಾದರೂ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರವು ತೆಗೆದುಕೊಂಡ ಕ್ರಮಗಳೇನು ? (ವಿವರಗಳನ್ನು ನೀಡುವುದು)

## ಕುಡಿಯುವ ನೀರಿನ ಸಮಸ್ಯೆ.

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೪೫ (೫೧೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ರಾಜ್ಯದಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿರುವ ಗ್ರಾಮಗಳ ಸಂಖ್ಯೆ ಎಷ್ಟು ;

(ಆ) ಟ್ಯಾಂಕರ್‌ಗಳ ಮೂಲಕ ನೀರು ಸರಬರಾಜು ಮಾಡುತ್ತಿರುವ ಗ್ರಾಮಗಳಾವುವು ; ಈ ವರ್ಷದ ಬೇಸಿಗೆಯಲ್ಲಿ ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಅಂದಾಜಿಸಲಾಗಿದೆ ;

(ಇ) ಸಮರ್ಪಕ ನೀರಿನ ಸರಬರಾಜಿಗೆ ಶಾಶ್ವತ ಕ್ರಮಗಳನ್ನು ಕೈಗೊಳ್ಳಲು ಸರ್ಕಾರದ ಕ್ರಮಗಳೇನು ; ಈ ಕುಡಿಯುವ ನೀರಿನ ಸರಬರಾಜಿಗೆ ಪ್ರಸ್ತುತ ವರ್ಷದಲ್ಲಿ ಎಷ್ಟು ಹಣವನ್ನು ನಿಗದಿಪಡಿಸಲಾಗಿದೆ ?

## ಮೈಸೂರು ಚಾಮರಾಜನಗರ ಜಿಲ್ಲೆಗಳಲ್ಲಿ ಮಹಾತ್ಮಗಾಂಧಿ ಉದ್ಯೋಗ ಖಾತ್ರಿ ಯೋಜನೆಯ ಅವ್ಯವಹಾರ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೪೬ (೫೧೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಚಾಮರಾಜನಗರ ಜಿಲ್ಲೆಗಳಲ್ಲಿ ಸಂಬಂಧಪಟ್ಟಂತೆ ಮಹಾತ್ಮಗಾಂಧಿ ಉದ್ಯೋಗ ಖಾತ್ರಿ ಯೋಜನೆ ಪ್ರಸ್ತುತ ವರ್ಷದಲ್ಲಿ ಗ್ರಾಮ ಪಂಚಾಯ್ತಿಗಳಿಗೆ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ ;

(ಆ) ರಾಜ್ಯದ ಸದರಿ ಯೋಜನೆಗಳಲ್ಲಿ ಅವ್ಯವಹಾರ ತಡೆಗಟ್ಟುವ ಸಲುವಾಗಿ ಸರ್ಕಾರವು ಕಳೆದ ಸಾಲಿನಲ್ಲಿ ಓಂಬುಡ್ಸ್‌ಮೆನ್‌ಗಳನ್ನು ನೇಮಿಸಿದ್ದರಿಂದ ಈ ಅವ್ಯವಹಾರಗಳನ್ನು ತಡೆಗಟ್ಟಲು ಯಶಸ್ವಿಯಾಗಿದೆಯೇ ;

(ಇ) ಈ ಯೋಜನೆಗಳಲ್ಲಿನ ಅವ್ಯವಹಾರಗಳನ್ನು ತಡೆಹಿಡಿಯುವ ನಿಟ್ಟಿನಲ್ಲಿ ಸರ್ಕಾರವು ಓಂಬುಡ್ಸ್‌ಮೆನ್‌ಗಳನ್ನು ನೇಮಿಸಿದ್ದರಿಂದ ಎಷ್ಟು ಪ್ರಕರಣಗಳು ಇವರ ಮುಂದೆ ಬಂದಿದ್ದು, ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ?

## ಶಾಲಾ ವಿದ್ಯಾರ್ಥಿಗಳಿಗೆ ಸಮವಸ್ತ್ರ ಹಾಗೂ ಬೈಸಿಕಲ್ ಪೂರೈಕೆ.

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೪೪೭(೫೨೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಶಾಲಾ ವಿದ್ಯಾರ್ಥಿಗಳಿಗೆ ಕಳೆದ ೦೫ ವರ್ಷಗಳಿಂದ ಸಮವಸ್ತ್ರ, ಬೈಸಿಕಲ್ ಪೂರೈಕೆಗಾಗಿ ಸರ್ಕಾರವು ಮಾಡಿರುವ ವೆಚ್ಚವೆಷ್ಟು ;



(ಆ) ಕಳೆದ ಸಾಲಿನಲ್ಲಿ ಸಮವಸ್ತ್ರ, ಬೈಸಿಕಲ್ ಪೂರೈಕೆಯ ವ್ಯವಸ್ಥೆಯಲ್ಲಿ ಲೋಪದೋಷಗಳು ಕಂಡುಬಂದಿದ್ದು, ಇದರಿಂದಾದ ಅನಾನುಕೂಲತೆಗಳನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಸಮವಸ್ತ್ರ, ಬೈಸಿಕಲ್ ಪೂರೈಕೆಯನ್ನು ಸರ್ಕಾರದ ವತಿಯಿಂದ ವಿತರಿಸಲು ರಾಜ್ಯದ ಅಭಿವೃದ್ಧಿ ನಿಗಮಗಳಿಂದ ಪಡೆದು ರಾಜ್ಯದ ಜನರಿಗೆ ಉದ್ಯೋಗಾವಕಾಶಗಳನ್ನು ಉಂಟು ಮಾಡಲು ಸರ್ಕಾರದ ನಿಲುವುಗಳೇನು ?

## ಸರ್ಕಾರವು ನಿರ್ಮಿಸಿರುವ ಶೌಚಾಲಯಗಳು.

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೪೪೮ (೫೧೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರವು ಅಸ್ಥಿತ್ವ ಬಂದ ಮೇಲೆ ಒಟ್ಟು ಎಷ್ಟು ಶೌಚಾಲಯಗಳನ್ನು ನಿರ್ಮಿಸಲಾಗಿದೆ ; ಇದರಲ್ಲಿ ವೈಯಕ್ತಿಕ ಕುಟುಂಬಗಳಲ್ಲಿ ನಿರ್ಮಿತವಾದ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ನಿರ್ಮಿತವಾದ ಶೌಚಾಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು. ವೈಯಕ್ತಿಕ ಹಾಗೂ ಸಾರ್ವಜನಿಕ ಶೌಚಾಲಯಗಳ ಪ್ರತ್ಯೇಕ ಮಾಹಿತಿ ನೀಡುವುದು)

(ಆ) ಶೌಚಾಲಯಗಳನ್ನು ನಿರ್ಮಿಸುವ ಸಲುವಾಗಿ ವೈಯಕ್ತಿಕ ಕುಟುಂಬಕ್ಕೆ ಹಾಗೂ ಸಾರ್ವಜನಿಕ ಶೌಚಾಲಯಗಳಿಗೆ ನಿಗಧಿಪಡಿಸಿರುವ ವೆಚ್ಚವೆಷ್ಟು ; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಇ) ಹೀಗೆ ನಿರ್ಮಿಸಿರುವ ಶೌಚಾಲಯಗಳಲ್ಲಿ ನೀರಿನ ವ್ಯವಸ್ಥೆಗಳನ್ನು ಯಾವ ರೀತಿ ಮಾಡಲಾಗಿದೆ ; ಈ ಸೌಲಭ್ಯಗಳ ನಿರ್ವಹಣೆಯ ಜವಾಬ್ದಾರಿಯನ್ನು ಯಾರಿಗೆ ನೀಡಲಾಗಿದೆ ?

## ಸನ್ನದು ಮಂಜೂರಾತಿಯಲ್ಲಿ ಪ.ಜಾತಿ / ಪ.ವರ್ಗಗಳಿಗೆ ಮೀಸಲಾತಿ.

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೪೯ (೫೦೬) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ.ಜಾತಿ /ಪ.ವರ್ಗಗಳಿಗೆ ಸನ್ನದು ಮಂಜೂರಾತಿಯಲ್ಲಿ ಮೀಸಲಾತಿ ನೀಡುವುದಾಗಿ ಈ ಹಿಂದೆ ಸರ್ಕಾರ ಸದನದಲ್ಲಿ ಆಶ್ವಾಸನೆ ನೀಡಿದ್ದು ; ಈ ಬಗ್ಗೆ ಇಲಾಖೆ ತೆಗೆದುಕೊಂಡ ಕ್ರಮವೇನು ;

(ಆ) ರಾಜ್ಯದಲ್ಲಿ ಅಬಕಾರಿ ಇಲಾಖೆಯ ವತಿಯಿಂದ ನೀಡಲಾಗಿರುವ ಸನ್ನದುಗಳೆಷ್ಟು ; ಇವುಗಳಲ್ಲಿ ಪ.ಜಾತಿ / ಪ.ಪಂಗಡಗಳಿಗೆ ನೀಡಿರುವ ಸನ್ನದುಗಳೆಷ್ಟು ?

## ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಒದಗಿಸಲಾದ ಅನುದಾನ.

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೫೦ (೫೦೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಕಳೆದ ೩ ವರ್ಷಗಳಿಂದ ಒದಗಿಸಲಾದ ಅನುದಾನ ಎಷ್ಟು ;



(ಆ) ಈ ಅನುದಾನವನ್ನು ಯಾವ–ಯಾವ ಬಾಬ್ತಿಗೆ ಮತ್ತು ಯಾವ–ಯಾವ ಸಂಸ್ಥೆಗಳಿಗೆ ಎಷ್ಟೆಷ್ಟು ನೀಡಲಾಗಿದೆ, ಖರ್ಚಾಗಿರುವ ಹಣವೆಷ್ಟು ಮತ್ತು ಖರ್ಚಾಗದೇ ಉಳಿದಿರುವ ಹಣ ಎಷ್ಟು ;

(ಇ) ಈ ಬಾಕಿ ಹಣದಲ್ಲಿ ಪ.ಜಾತಿ / ಪ.ವರ್ಗಗಳ ಕಾಮಗಾರಿಗಳಿಗೆ ಎಷ್ಟೆಷ್ಟು ಹಣ ಖರ್ಚು ಮಾಡಲಾಗಿದೆ ; ಮತ್ತು ಯಾವ–ಯಾವ ಸಂಸ್ಥೆಗಳಿಗೆ ಎಷ್ಟೆಷ್ಟು ಹಣ ನೀಡಲಾಗಿದೆ ?

## ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿನ ಶಿಕ್ಷಕರ ಕೊರತೆ

**ಶ್ರೀ ಲಹರ್ ಸಿಂಗ್ ಸಿರೋಯಾ (ನಾಮನಿರ್ದೇಶನ) :–**

೪೫೧ (೪೪೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ೨೦೧೫ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ನಿವೃತ್ತರಾಗಲಿರುವ ಶಿಕ್ಷಕರ ಸಂಖ್ಯೆ ಎಷ್ಟು ;

(ಇ) ಖಾಲಿಯಿರುವ ಶಿಕ್ಷಕರ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು ;

(ಈ) ಖಾಲಿಯಿರುವ ದೈಹಿಕ ಶಿಕ್ಷಕರನ್ನು ನೇಮಕ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಶಾಲೆಗಳಲ್ಲಿ ಶೌಚಾಲಯ ಮತ್ತು ನೀರಿನ ವ್ಯವಸ್ಥೆ ಒದಗಿಸುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ನಾಮನಿರ್ದೇಶನ) :–**

೪೫೨ (೪೪೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಅನೇಕ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶೌಚಾಲಯ ಹಾಗೂ ನೀರಿನ ವ್ಯವಸ್ಥೆ ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತಹ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ವಿದ್ಯಾರ್ಥಿಗಳಿಗೆ ಅವಶ್ಯವಿರುವ ಶೌಚಾಲಯ ಹಾಗೂ ನೀರಿನ ವ್ಯವಸ್ಥೆ ಒದಗಿಸಲು ಸರ್ಕಾರವು ಯಾವ ಕ್ರಮಗಳನ್ನು ಕೈಗೊಂಡಿದೆ ? (ಶಾಲಾವಾರು ವಿವರ ನೀಡುವುದು)

## "ಮನಸ್ವಿನಿ" ಹಾಗೂ "ಮೈತ್ರಿ" ಯೋಜನೆಗಳು.

**ಶ್ರೀ ಲಹರ್ ಸಿಂಗ್ ಸಿರೋಯಾ (ನಾಮನಿರ್ದೇಶನ) :–**

೪೫೩ (೫೨೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) "ಮನಸ್ವಿನಿ" ಹಾಗೂ "ಮೈತ್ರಿ" ಯೋಜನೆಯಡಿ ಇದುವರೆವಿಗೆ ಎಷ್ಟು ಜನ ಫಲಾನುಭವಿಗಳು ಸೌಲಭ್ಯವನ್ನು ಪಡೆದಿರುತ್ತಾರೆ ;



(ಆ) "ಮನಸ್ವಿನಿ" ಹಾಗೂ "ಮೈತ್ರಿ" ಯೋಜನೆಯಡಿ ಸೌಲಭ್ಯವನ್ನು ಪಡೆಯಲು ಅಪೇಕ್ಷಿತ ಫಲಾನುಭವಿಗಳು ಯಾವ ಯಾವ ದಾಖಲೆಗಳನ್ನು ಸಲ್ಲಿಸಬೇಕು ? (ಆದೇಶದ ಪ್ರತಿಗಳನ್ನು ಹಾಗೂ ಯೋಜನೆಯ ಪೂರ್ಣ ಮಾಹಿತಿಯನ್ನು ನೀಡುವುದು)

## ಅನುದಾನ ರಹಿತ ಶಾಲಾ–ಕಾಲೇಜಿನ ಸಿಬ್ಬಂದಿಗೆ ವೇತನಾನುದಾನ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) :–**

೪೧೪ (೪೭೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೧೯೮೭ ರಿಂದ ೧೯೯೫ನೇ ಸಾಲಿನವರೆಗೆ ಪ್ರಾರಂಭವಾಗಿರುವ ಅನುದಾನ ರಹಿತ ಶಾಲಾ ಕಾಲೇಜುಗಳ ಸಿಬ್ಬಂದಿಗೆ ವೇತನಾನುದಾನ ಸವಲತ್ತು ನೀಡಲಾಗುತ್ತಿದೆಯೇ ;

(ಆ) ಹಾಗಾದರೆ, ಸದರಿ ಅನುದಾನ ಕೋರಿಕೆಗಾಗಿ ಸರ್ಕಾರದ ಹಂತಕ್ಕೆ ಬಂದಿರುವ ಕಡತಗಳ ಸಂಖ್ಯೆ ಎಷ್ಟು ; (ಪ್ರಾಥಮಿಕ/ಪ್ರೌಢಶಾಲಾ/ಪದವಿ ಪೂರ್ವ ಪ್ರತ್ಯೇಕವಾಗಿ)

(ಇ) ಸದರಿ ಸಂಸ್ಥೆಗಳ ಸಿಬ್ಬಂದಿಗೆ ನೀಡಬೇಕಾದ ವೇತನಾನುದಾನದ ಮೊತ್ತವೆಷ್ಟು ;

(ಈ) ಈ ಸಿಬ್ಬಂದಿಗಳಿಗೆ ವೇತನಾನುದಾನ ಬಿಡುಗಡೆಯ ವಿಳಂಬಕ್ಕೆ ಕಾರಣಗಳೇನು ; ಯಾವ ಕಾಲಮಿತಿಯಲ್ಲಿ ವೇತನಾನುದಾನ ಬಿಡುಗಡೆ ಮಾಡಲಾಗುವುದು ?

## ಸರ್ಕಾರಿ ಪದವಿ ಪೂರ್ವ ಕಾಲೇಜುಗಳು ಹಾಗೂ ಮೂಲಭೂತ ಸೌಲಭ್ಯಗಳು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) :–**

೪೧೫ (೪೭೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ)

(ಆ) ಸದರಿ ಕಾಲೇಜುಗಳಲ್ಲಿ ಕಟ್ಟಡ, ಪ್ರಯೋಗಾಲಯ, ಶೌಚಾಲಯ ಹಾಗೂ ಇನ್ನಿತರೆ ಮೂಲಭೂತ ಸೌಲಭ್ಯಗಳ ಕೊರತೆ ಇರುವ ಕಾಲೇಜುಗಳ ಸಂಖ್ಯೆ ಎಷ್ಟು ;

(ಇ) ಸದರಿ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ರಾಜ್ಯದಲ್ಲಿ ಕಲಾ ವಿಭಾಗ ಮಾತ್ರ ಬೋಧನೆ ಮಾಡುತ್ತಿರುವ ಕಾಲೇಜುಗಳ ಸಂಖ್ಯೆ ಎಷ್ಟು ; (ವಿವರಗಳೊಡನೆ)

(ಉ) ಕಲಾ ವಿಭಾಗ ಬೋಧನೆ ಮಾಡುತ್ತಿರುವ ಕಾಲೇಜುಗಳಲ್ಲಿ ವಾಣಿಜ್ಯ ವಿಭಾಗ ತೆರೆಯಲು ಎಷ್ಟು ಕಾಲೇಜುಗಳಿಂದ ಪ್ರಸ್ತಾವನೆ ಬಂದಿದೆ ; (ವಿವರಗಳೊಡನೆ)

(ಊ) ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?



## ಪ್ರೌಢಶಾಲಾ ಸಹ ಶಿಕ್ಷಕರಿಗೆ ಟೈಂಬಾಂಡ್ ಸೌಲಭ್ಯ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) :–**

೪೧೬ (೪೭೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಪ್ರಾಥಮಿಕ ಶಾಲೆಯಿಂದ ಬಡ್ತಿ ಪಡೆದು ಪ್ರೌಢಶಾಲಾ ಸಹ ಶಿಕ್ಷಕರಾಗಿ ಕಾರ್ಯನಿರ್ವಹಿಸುತ್ತಿರುವವರಿಗೆ ಟೈಂಬಾಂಡ್ ಸೌಲಭ್ಯ ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಶಿಕ್ಷಕರಿಗೆ ಟೈಂ ಬಾಂಡ್ ಸೌಲಭ್ಯ ನೀಡದಿರಲು ಕಾರಣಗಳೇನು ; (ವಿವರಗಳೊಡನೆ)

(ಇ) ಸದರಿ ಸೌಲಭ್ಯವನ್ನು ಕಲ್ಪಿಸಲು ಸರ್ಕಾರ ಯೋಚಿಸಿದೆಯೇ ;

(ಈ) ಯಾವ ಕಾಲಮಿತಿಯಲ್ಲಿ ಸೌಲಭ್ಯ ಕಲ್ಪಿಸಲಾಗುವುದು ?

## ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) :–**

೪೧೭ (೪೭೮) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು ;

(ಆ) ಸದರಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ನಿವೃತ್ತಿ, ರಾಜೀನಾಮೆ ಇತರೆ ಕಾರಣಗಳಿಂದ ತೆರವಾಗಿರುವ ಉಪನ್ಯಾಸಕರ ಹುದ್ದೆಗಳ ಸಂಖ್ಯೆ ಎಷ್ಟು ; (ವಿಷಯವಾರು ಪೂರ್ಣ ವಿವರಗಳೊಡನೆ)

(ಇ) ಸದರಿ ಹುದ್ದೆಗಳು ಯಾವ ಅವಧಿಯಿಂದ ಖಾಲಿ ಇವೆ ;

(ಈ) ಸದರಿ ಖಾಲಿ ಹುದ್ದೆಗಳಿಗೆ ಎಷ್ಟು ಅತಿಥಿ ಉಪನ್ಯಾಸಕರನ್ನು ಯಾವ ಅವಧಿಯಿಂದ ನೇಮಕ ಮಾಡಿಕೊಳ್ಳಲಾಗಿದೆ ; (ವಿಷಯವಾರು ವಿವರಗಳೊಡನೆ)

(ಉ) ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಊ) ಯಾವ ಕಾಲಮಿತಿಯಲ್ಲಿ ಸದರಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಲಾಗುವುದು ?

## ಹೊಸ ನಿವೃತ್ತಿ ವೇತನ ಯೋಜನೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) :–**

೪೧೮ (೪೭೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೊಸ ನಿವೃತ್ತಿ ವೇತನ ಯೋಜನೆ (ನ್ಯೂ ಪೆನ್‌ಷನ್ ಸ್ಕೀಂ) ಎಂದಿನಿಂದ ಜಾರಿಗೆ ತರಲಾಯಿತು ;



(ಆ) ಸರ್ಕಾರಿ ಹಾಗೂ ಅನುದಾನಿತ ಶಾಲಾ ಕಾಲೇಜುಗಳ ಸಿಬ್ಬಂದಿಗೆ ಸದರಿ ಯೋಜನೆಯಲ್ಲಿ ನೀಡಿರುವ ಸೌಲಭ್ಯಗಳೇನು ;

(ಇ) ಇದಕ್ಕೆ ಅನುಸರಿಸುತ್ತಿರುವ ಮಾನದಂಡಗಳೇನು ; (ಪೂರ್ಣ ವಿವರಗಳೊಡನೆ)

(ಈ) ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗೆ ಈ ಯೋಜನೆ ಇನ್ನೂ ಜಾರಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಸರ್ಕಾರಿ ಸಿಬ್ಬಂದಿಗೆ ನೀಡುವಂತೆ ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗೂ ಈ ಯೋಜನೆಯನ್ನು ಕಲ್ಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಊ) ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಯೋಜನೆಯನ್ನು ಕಲ್ಪಿಸಲಾಗುವುದು ?

## ಪಂಚಾಯಿತಿ ಮಟ್ಟದ ಕ್ರೀಡಾಂಗಣ ನಿರ್ಮಾಣ

**ಶ್ರೀ ಅಶ್ವಥ್‌ನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೪೧೯ (೪೮೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೧೩–೧೪, ೨೦೧೪–೧೫ನೇ ಸಾಲಿನಲ್ಲಿ ಪಂಚಾಯಿತಿ ಮಟ್ಟದಲ್ಲಿ ಕ್ರೀಡಾಂಗಣ ನಿರ್ಮಾಣ ಮಾಡಲು ಹಣ ಬಿಡುಗಡೆ ಮಾಡಲಾಗಿದೆಯೇ ; ಎಷ್ಟು ಕ್ರೀಡಾಂಗಣ ನಿರ್ಮಾಣ ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರೈತರಿಗೆ ಕಣ ನಿರ್ಮಾಣ ಮಾಡಲು ಸರ್ಕಾರದಿಂದ ಎಷ್ಟು ಹಣವನ್ನು ನೀಡಲಾಗುವುದು ; ಎಷ್ಟು ರೈತರು ಇದರ ಅನುಕೂಲತೆ ಪಡೆದುಕೊಂಡಿದ್ದಾರೆ ; ಜಿಲ್ಲಾವಾರು ಬಿಡುಗಡೆ ಮಾಡಿದ ಹಣವೆಷ್ಟು ?

## ಪಂಚಾಯಿತಿಗಳ ಅಭಿವೃದ್ಧಿಗಾಗಿ ಬಿಡುಗಡೆ ಮಾಡಿದ ಹಣ

**ಶ್ರೀ ಅಶ್ವಥ್‌ನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೪೨೦ (೪೮೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಬೆಂಗಳೂರು ಗ್ರಾಮಾಂತರ ಜಿಲ್ಲೆ, ರಾಮನಗರ ಜಿಲ್ಲೆ ಹಾಗೂ ಮಂಡ್ಯ ಜಿಲ್ಲೆಗಳಿಗೆ ೨೦೧೪–೧೫ರಲ್ಲಿ ಜಿಲ್ಲಾ ಪಂಚಾಯಿತಿ ಹಾಗೂ ತಾಲ್ಲೂಕು ಪಂಚಾಯಿತಿಗಳ ಅಭಿವೃದ್ಧಿಗಾಗಿ ನಿಗಧಿ ಮಾಡಿದ ಗ್ರಾಮೀಣ ರಸ್ತೆ ಅಭಿವೃದ್ಧಿ, ಕುಡಿಯುವ ನೀರು ಹಾಗೂ ನೈರ್ಮಲ್ಯ ಕಾಪಾಡುವಿಕೆಗಾಗಿ ಬಿಡುಗಡೆ ಮಾಡಿದ ಹಣವೆಷ್ಟು ; ಹಾಗೂ ಖರ್ಚು ಮಾಡಿದ ಹಣವೆಷ್ಟು ? (ತಾಲ್ಲೂಕುವಾರು ವಿವರ ನೀಡುವುದು)



## ಕ್ರಿಯಾ ಯೋಜನೆಯಲ್ಲಿ ಸಂಘ–ಸಂಸ್ಥೆಗಳಿಗೆ ಹಣ ಬಿಡುಗಡೆ

**ಶ್ರೀ ಅಶ್ವಥ್‌ನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೪೨೧ (೪೮೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಂಘ–ಸಂಸ್ಥೆಗಳಿಗೆ ೨೦೧೩–೧೪ ಮತ್ತು ೨೦೧೪–೧೫ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಬಿಡುಗಡೆ ಮಾಡಿರುವ ಹಣ ಎಷ್ಟು ; ಯಾವ ಯಾವ ಸಂಘ–ಸಂಸ್ಥೆಗಳಿಗೆ ಹಣ ಬಿಡುಗಡೆ ಮಾಡಲಾಗಿದೆ ; (ವರ್ಷವಾರು ಹಾಗೂ ಜಿಲ್ಲಾವಾರು ವಿವರ ನೀಡುವುದು)

(ಆ) ಇವುಗಳಲ್ಲಿ ಸಾಮಾನ್ಯ ಘಟಕಕ್ಕೆ ಸೇರಿದ ಸಂಘ–ಸಂಸ್ಥೆಗಳು ಯಾವುವು ; ವಿಶೇಷ ಘಟಕಕ್ಕೆ ಸೇರಿದ ಸಂಸ್ಥೆಗಳು ಯಾವುವು ; (ಅರ್ಜಿಯನ್ನು ಸಲ್ಲಿಸಿದ್ದರೆ ವಿವರ ನೀಡುವುದು)

(ಇ) ಹೊಸ ನಾಟಕಗಳನ್ನು ರಚಿಸಿ, ನಿರ್ದೇಶಿಸಿ, ರಂಗ ಪ್ರದರ್ಶನಗೊಂಡರೆ ಅಂತಹ ನಾಟಕಕ್ಕೆ ಸರ್ಕಾರದಿಂದ ಅನುದಾನ ನೀಡಲಾಗುವುದೇ ; ನೀಡಿದ್ದರೆ, ೨೦೧೪–೧೫ರಲ್ಲಿ ಪ್ರೋತ್ಸಾಹ ಧನ ಪಡೆದ ತಂಡಗಳು ಯಾವುವು ; ಎಷ್ಟು ಹಣವನ್ನು ನೀಡಲಾಗಿದೆ ;

(ಈ) ಹೊಸದಾಗಿ ಪ್ರಕಟಗೊಂಡ ಪುಸ್ತಕಗಳಿಗೆ ಸಬ್ಸಿಡಿ ನೀಡಲಾಗುವುದೇ ; ಯಾವ ಮಾನದಂಡದಡಿ ನೀಡಲಾಗುತ್ತದೆ ; ಹಾಗೂ ಎಷ್ಟು ಪುಸ್ತಕಗಳನ್ನು ಇಲಾಖೆ ಖರೀದಿಸುತ್ತದೆ ; ಇದರ ಮಾನದಂಡವೇನು ?

## ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಬಿಡುಗಡೆ ಮಾಡಿದ ಹಣ

**ಶ್ರೀ ಅಶ್ವಥ್‌ನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೪೨೨ (೪೮೪) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಪ್ರವಾಸೋದ್ಯಮ ಅಭಿವೃದ್ಧಿಗಾಗಿ ೨೦೧೩–೧೪ ಹಾಗೂ ೨೦೧೪–೨೦೧೫ ರಲ್ಲಿ ನಿಗಧಿಪಡಿಸಿದ ಹಣವೆಷ್ಟು ; ಇದರಲ್ಲಿ ನಿರೂಪಿಸಿರುವ ಕ್ರಿಯಾ ಯೋಜನೆಗಳೇನು ; ಬಿಡುಗಡೆಗೊಳಿಸಿದ ಹಣವೆಷ್ಟು ; ಇದರಲ್ಲಿ ಅನುಷ್ಠಾನಕ್ಕೆ ಬಂದಿರುವ ಯೋಜನೆಗಳಾವುವು ? (ಜಿಲ್ಲಾವಾರು ವಿವರ ನೀಡುವುದು)

## ಕರ್ನಾಟಕ ಲಲಿತ ಕಲಾ ವಿಶ್ವವಿದ್ಯಾಲಯ ಪ್ರಾರಂಭ

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೪೨೩ (೪೮೯) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಲಲಿತ ಕಲಾ ವಿಶ್ವವಿದ್ಯಾಲಯವನ್ನು ಪ್ರಾರಂಭ ಮಾಡುವ ನಿರ್ಧಾರವನ್ನು ಸರ್ಕಾರ ಕೈಗೊಂಡಿದೆಯೇ ;



(ಆ) ಕೈಗೊಂಡಿದ್ದಲ್ಲಿ, ಯಾವ ಸ್ಥಳದಲ್ಲಿ ಮತ್ತು ಯಾವ ಶೈಕ್ಷಣಿಕ ವರ್ಷದಲ್ಲಿ ಆರಂಭಿಸಲಾಗುವುದು ;

(ಇ) ಈ ವಿಷಯಕ್ಕೆ ಪೂರಕವಾಗಿ ಕುಲಪತಿ ಹಾಗೂ ಸಿಬ್ಬಂದಿಗಳ ನೇಮಕಾತಿ ಮಾಡಿಕೊಳ್ಳುವ ಯೋಜನೆ ಸಿದ್ಧಪಡಿಸಲಾಗಿದೆಯೇ ? (ವಿವರಣೆ ನೀಡುವುದು)

## ಚಿತ್ರಕಲಾ ಶಿಕ್ಷಕರ ನೇಮಕಾತಿ

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೪೨೪ (೪೮೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಸದ್ಯ ಚಿತ್ರಕಲಾ ಶಿಕ್ಷಕರ ನೇಮಕಾತಿಗೆ ಇರುವ ವಿದ್ಯಾರ್ಹತೆಗಳೇನು ;

(ಆ) ಈ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರುವ ವಿಚಾರ ಸರ್ಕಾರದ ಮಟ್ಟದಲ್ಲಿದೆಯೇ ; (ಈ ಕುರಿತು ವಿವರಣೆ ನೀಡಿ)

(ಇ) ೨೦೧೫–೨೦೧೬ನೇ ಶೈಕ್ಷಣಿಕ ವರ್ಷದಲ್ಲಿ ಸರ್ಕಾರಿ ಮತ್ತು ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಚಿತ್ರಕಲಾ ಶಿಕ್ಷಕರನ್ನು ನೇಮಕ ಮಾಡಿಕೊಳ್ಳುವ ಉದ್ದೇಶ ಸರ್ಕಾರ ಹೊಂದಿದೆಯೇ ? (ವಿವರಣೆ ನೀಡಿ)

## ಜಿಲ್ಲಾ ಮಕ್ಕಳ ರಕ್ಷಣಾ ಫಲಕದ ಸಿಬ್ಬಂದಿಗಳ ನೇಮಕಾತಿ

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೪೨೫ (೪೯೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಡಿಯಲ್ಲಿ ಇರುವ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿಯನ್ನು ಯಾವ ವರ್ಷದಿಂದ, ಯಾವ ನಿಯಮದಡಿ ನೇಮಕ ಮಾಡಿಕೊಳ್ಳಲಾಗಿದೆ ;

(ಆ) ಈ ಹಿಂದಿನ ನೇಮಕಾತಿ ನಿಯಮಾವಳಿಗಳನ್ನು ಬದಲಾವಣೆ ಮಾಡಿ ಬಾಹ್ಯ ಮೂಲ ಸಂಸ್ಥೆಗಳಿಂದ ನೇಮಕ ಮಾಡುವ ಚಿಂತನೆ ಸರ್ಕಾರದ ಮುಂದಿದೆಯೇ ;

(ಇ) ಬೇರೆ ರಾಜ್ಯದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿಯನ್ನು ಖಾಯಂ ಸಿಬ್ಬಂದಿಯನ್ನಾಗಿ ಮಾಡಿಕೊಳ್ಳಲಾಗಿದೆಯೇ ?

## ಅನುದಾನಿತ ಪದವಿ ಕಾಲೇಜುಗಳಲ್ಲಿನ ಖಾಲಿಯಾದ ಹುದ್ದೆಗಳು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೪೨೬ (೪೮೭) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಇಲ್ಲಿಯವರೆಗೆ ನಿಧನ, ನಿವೃತ್ತಿಯಿಂದ ಖಾಲಿಯಾದ ಹುದ್ದೆಗಳ ಸಂಖ್ಯೆ ಎಷ್ಟು ;



ಈ ರೀತಿ ಖಾಲಿಯಾದ ಹುದ್ದೆಗಳನ್ನು ಯಾವ ವರ್ಷದವರೆಗೆ ತುಂಬಿಕೊಳ್ಳಲು ಅನುಮತಿ ನೀಡಲಾಗಿದೆ ;

(ಆ) ಪದವಿ ಪೂರ್ವ ವಿಭಾಗದಲ್ಲಿ ಪಿ.ಎಚ್.ಡಿ. ಸೆಟ್/ನೆಟ್ ಪಾಸಾಗಿ ಕಾರ್ಯನಿರ್ವಹಿಸುವ ಉಪನ್ಯಾಸಕರನ್ನು ಪದವಿ ಕಾಲೇಜಿಗೆ ಪದೋನ್ನತಿ ನೀಡಲು ಸರ್ಕಾರ ಯೋಜಿಸಿದೆಯೇ ; ಹಾಗಿದ್ದಲ್ಲಿ, ಇದಕ್ಕೆ ಸಂಬಂಧಿಸಿದಂತೆ ವೃಂದ ಮತ್ತು ನೇಮಕಾತಿ ನಿಯಮದಲ್ಲಿ ಯಾವಾಗ ಬದಲಾವಣೆ ತರಲಾಗುವುದು ?

## ಮಹಿಳಾ ಮತ್ತು ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೨೭ (೪೯೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಮಹಿಳೆ ಮತ್ತು ಅಪ್ರಾಪ್ತ ಹೆಣ್ಣು ಮಕ್ಕಳ ಮೇಲೆ ನಡೆದಿರುವ ಲೈಂಗಿಕ ದೌರ್ಜನ್ಯ ಪ್ರಕರಣಗಳ ಸಂಖ್ಯೆ ಎಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಇಂತಹ ಪ್ರಕರಣಗಳಲ್ಲಿ ಭಾಗಿಯಾಗಿ ತಪ್ಪು ಎಸಗಿರುವ ಎಷ್ಟು ಜನರನ್ನು ತಪ್ಪಿತಸ್ಥರೆಂದು ಗುರುತಿಸಿ ಶಿಕ್ಷೆ ನೀಡಲಾಗಿದೆ ;

(ಇ) ಲೈಂಗಿಕ ದೌರ್ಜನ್ಯಕ್ಕೆ ಒಳಪಟ್ಟ ಮಹಿಳೆ ಮತ್ತು ಅಪ್ರಾಪ್ತ ಮಕ್ಕಳಿಗೆ ಸರ್ಕಾರದ ವತಿಯಿಂದ ನೀಡಿರುವ ಸಾಂತ್ವನ ಏನು ;

(ಈ) ಈ ರೀತಿಯ ಪ್ರಕರಣಗಳು ಮರುಕಳಿಸದಂತೆ ಸರ್ಕಾರ ಕೈಗೊಂಡ ಮುಂಜಾಗ್ರತಾ ಕ್ರಮಗಳೇನು ?

## ಅಭಿವೃದ್ಧಿ ಯೋಜನೆಗಳಿಗೆ ವೆಚ್ಚ ಮಾಡಿರುವ ಅನುದಾನ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೨೮ (೪೯೩) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳಿಂದ ಮೂಲಭೂತ ಸೌಲಭ್ಯ ಅಭಿವೃದ್ಧಿ ಇಲಾಖೆಯಿಂದ ಅಭಿವೃದ್ಧಿ ಪಡಿಸಿರುವ ಯೋಜನೆಗಳಾವುವು ;

(ಆ) ಸದರಿ ಯೋಜನೆಗಳಿಗಾಗಿ ವೆಚ್ಚ ಮಾಡಿರುವ ಅನುದಾನದ ಮೊತ್ತವೆಷ್ಟು ;

(ಇ) ಈ ಯೋಜನೆಗಳು ನಿಗಧಿತ ಕಾಲಮಿತಿ ಒಳಗಾಗಿ ಪೂರ್ಣಗೊಳ್ಳದೆ ಯೋಜನಾ ವೆಚ್ಚ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ನಿಗಧಿತ ಅವಧಿಯಲ್ಲಿ ಯೋಜನೆಗಳನ್ನು ಪೂರ್ಣಗೊಳಿಸದೆ ಅಧಿಕಾರಿ ಮತ್ತು ಗುತ್ತಿಗೆದಾರರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ;



(ಉ) ಇಂತಹ ಎಷ್ಟು ಪ್ರಕರಣಗಳಲ್ಲಿ ಎಷ್ಟು ಅಧಿಕಾರಿ ಹಾಗೂ ಗುತ್ತಿಗೆದಾರರ ವಿರುದ್ಧ ಕ್ರಮ ಕೈಗೊಂಡಿದೆ ? (ವಿವರ ನೀಡುವುದು)

## ಕೊಳಚೆ ನಿರ್ಮೂಲನ ಮಂಡಳಿಯಿಂದ ಮಂಜೂರಾದ ಮನೆಗಳು

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೨೯ (೪೯೪) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳಿಂದ ಕೊಳಚೆ ನಿರ್ಮೂಲನ ಅಭಿವೃದ್ಧಿ ಮಂಡಳಿಯಿಂದ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಹಂಚಿಕೆದಾರರಿಗೆ ಮಂಜೂರು ಮಾಡಿರುವ ಮನೆಗಳ ನಿರ್ಮಾಣ ಕಾರ್ಯ ಪೂರ್ಣ ಪ್ರಮಾಣದಲ್ಲಿ ಮುಗಿದಿದ್ದರೂ ಅವರ ಸ್ವಾಧೀನಕ್ಕೆ ನೀಡಲು ತಡ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದರೆ, ಸರ್ಕಾರ ಮನೆಗಳನ್ನು ಹಂಚಿಕೆದಾರರ ಸ್ವಾಧೀನಕ್ಕೆ ನೀಡಲು ನಿಗದಿಪಡಿಸಿರುವ ಕಾಲಾವಕಾಶ ಎಷ್ಟು ? (ವಿವರ ನೀಡುವುದು)

## ಕೊಳವೆ ಬಾವಿಗಳಲ್ಲಿ ಫ್ಲೋರೈಡ್ ಮತ್ತು ನೈಟ್ರೇಟ್ ನಿಯಂತ್ರಣ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೩೦ (೪೯೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅನೇಕ ಜಿಲ್ಲೆಗಳಲ್ಲಿ ಕೊಳವೆ ಬಾವಿಗಳ ನೀರಿನಲ್ಲಿ ಫ್ಲೋರೈಡ್ ಮತ್ತು ನೈಟ್ರೇಟ್ ಅಂಶಗಳು ಹೆಚ್ಚಾಗಿರುವ ಕಾರಣದಿಂದಾಗಿ ಕುಡಿಯಲು ಯೋಗ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದರೆ, ಯಾವ ಯಾವ ಜಿಲ್ಲೆಗಳಲ್ಲಿ ಇಂತಹ ಪ್ರಕರಣಗಳು ಹೆಚ್ಚಾಗಿ ಕಾಣಿಸಿಕೊಂಡಿವೆ ;

(ಇ) ಇಂತಹ ಕಲುಷಿತ ಕೊಳವೆ ಬಾವಿಗಳನ್ನು ಗುರುತಿಸಿ ಶುದ್ಧ ಕುಡಿಯುವ ನೀರನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಖಾಲಿ ಇರುವ ಬೋಧಕ/ಬೋಧಕೇತರ ಹುದ್ದೆಗಳ ಭರ್ತಿ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೪೩೧ (೫೦೦) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಇರುವ ಸರ್ಕಾರಿ/ಅನುದಾನಿತ, ಪದವಿ ಕಾಲೇಜುಗಳಲ್ಲಿ ಖಾಲಿ ಇರುವ



ಬೋಧಕ/ಬೋಧಕೇತರ ಹುದ್ದೆ ಯಾವುವು ಮತ್ತು ಎಷ್ಟು ಖಾಲಿ ಇವೆ ; (ಕಾಲೇಜುವಾರು ವಿವರ ನೀಡುವುದು)

(ಆ) ಪ್ರಸ್ತುತ ಈ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ (ಬೋಧಕ/ಬೋಧಕೇತರ) ಅತಿಥಿ ಉಪನ್ಯಾಸಕರು/ತಾತ್ಕಾಲಿಕ ಅವಧಿಯ ಉಪನ್ಯಾಸಕರು, ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಯು.ಜಿ.ಸಿ. ವೇತನದಡಿ ಕಾರ್ಯನಿರ್ವಹಿಸುತ್ತಿರುವ ಹಾಗೂ ರಾಜ್ಯ ವೇತನ ಶ್ರೇಣಿಯಡಿ ಕಾರ್ಯನಿರ್ವಹಿಸುತ್ತಿರುವವರು ಯಾರು (ಕಾಲೇಜುವಾರು ಸಂಪೂರ್ಣ ವಿವರ ನೀಡಿ)

(ಈ) ಖಾಲಿ ಇರುವ ಹುದ್ದೆಗಳ ಭರ್ತಿಗೆ ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತಿದೆ ?

## ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳ ಶಿಕ್ಷಕರ ಸಂಬಳ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೪೩೨ (೪೯೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿಕ್ಷಕರ ಸಂಬಳವನ್ನು ಜಿಲ್ಲಾ ಪಂಚಾಯತ್‌ನ ವ್ಯವಸ್ಥೆಯ ಮೂಲಕವೇ ನೀಡಲಾಗುತ್ತಿದೆಯೇ ;

(ಆ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲಾ ಪಂಚಾಯತ್ ವ್ಯವಸ್ಥೆಯಲ್ಲಿ ಪ್ರತಿ ತಿಂಗಳು ಸರ್ಕಾರ ನಿಗದಿಪಡಿಸಿದ ಸಮಯದ ಒಳಗೆ ಸಂಬಳ ಪಾವತಿಸಲಾಗುತ್ತಿದೆಯೇ ;

(ಇ) ಸರ್ಕಾರಿ ಅನುದಾನಿತ ಶಾಲೆಗಳ ಯೋಜನೆ ಹಾಗೂ ಯೋಜನೇತರ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಶಿಕ್ಷಕರ ಸಂಬಳವನ್ನು ಕಳೆದ ೦೨ ವರ್ಷಗಳಲ್ಲಿ ಯಾವ ತಿಂಗಳಿನ ಸಂಬಳ ಯಾವ ದಿನಾಂಕದಂದು ನೀಡಲಾಗಿದೆ ; (ವಿವರ ನೀಡುವುದು)

(ಈ) ಬಾಕಿ ಇರುವ ವೈದ್ಯಕೀಯ ಮರು ಪಾವತಿ ಪ್ರಕರಣಗಳ ಸಂಖ್ಯೆ ಎಷ್ಟು ; ಆ ಪ್ರಕರಣಗಳ ಮೊತ್ತವೆಷ್ಟು ;

(ಉ) ಯಾವ ಯಾವ ಲೆಕ್ಕ ಶೀರ್ಷಿಕೆಯ ಅಡಿಯಲ್ಲಿ ಸಂಬಳ ಜಿಲ್ಲಾ ಪಂಚಾಯ್ತಿಯಿಂದ ಮತ್ತು ತಾಲ್ಲೂಕು ಪಂಚಾಯ್ತಿಯಿಂದ ನೀಡಲಾಗುತ್ತದೆ ; (ವಿವರ ನೀಡುವುದು)

(ಊ) ಪ್ರತಿ ಜಿಲ್ಲಾ ಪಂಚಾಯತ್‌ನಲ್ಲಿ ಶಿಕ್ಷಕರ ಶೈಕ್ಷಣಿಕ ಅಭಿವೃದ್ಧಿಗಾಗಿ (ತರಬೇತಿ, ಕಾರ್ಯಗಾರಗಳು ಇತ್ಯಾದಿ) ಕಾರ್ಯಗಳಿಗೆ ಜಿಲ್ಲಾ ಪಂಚಾಯತ್ ಅನುದಾನದಲ್ಲಿ ಒದಗಿಸಿರುವ ಅನುದಾನ ಎಷ್ಟು? (ಕಳೆದ ೦೨ ವರ್ಷಗಳ ವಿವರ ನೀಡುವುದು)

## ಶಿಕ್ಷಕ/ಉಪನ್ಯಾಸಕರ ಸಮಸ್ಯೆಗಳು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೪೩೩ (೪೯೭೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿಕ್ಷಕರ ವರ್ಗಾವಣೆ ಸಮಸ್ಯೆಗಳ ನಿವಾರಣೆಗೆ ಸರ್ಕಾರದ ನೀತಿ ಹಾಗೂ ಕ್ರಮಗಳೇನು ; ಕಾನೂನಿಗೆ ತರಲಿರುವ ತಿದ್ದುಪಡಿ ಕುರಿತು ಮಾಹಿತಿ ನೀಡುವುದು ;



(ಆ) ಉಪನ್ಯಾಸಕರ/ಶಿಕ್ಷಕರ ವೇತನ ತಾರತಮ್ಯ ನಿವಾರಣೆ ಮಾಡಲು **"ಕುಮಾರ್ ನಾಯಕ್"** ಸಮಿತಿಯ ವರದಿಯನ್ನು ಜಾರಿಗೆ ತರುವ ಕುರಿತು ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು ಹಾಗೂ ವರದಿಯ ಪ್ರತಿಯನ್ನು ಒದಗಿಸುವುದು)

(ಇ) ಸ್ನಾತಕೋತ್ತರ ಪದವಿ ಪಡೆದ ಪ್ರೌಢ ಶಾಲಾ ಶಿಕ್ಷಕರಿಗೆ ಪದವಿ ಪೂರ್ವ ಕಾಲೇಜಿಗೆ ಬಡ್ತಿ ನೀಡುವ ಸಂಬಂಧ ಈ ಹಿಂದಿನ ೫೦:೫೦ ಹಾಗೂ ಹಿಂದಿನ ಅರ್ಹತಾ ನಿಯಮಾವಳಿಗಳನ್ನು ಅಳವಡಿಸಿಕೊಂಡು ಪದೋನ್ನತಿ ನೀಡುವ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಪದವಿ ಪೂರ್ವ ಉಪನ್ಯಾಸಕರಿಗೆ ಪದವಿ ಕಾಲೇಜುಗಳಿಗೆ ಪದೋನ್ನತಿ ನೀಡುವ ಕುರಿತು ಸರ್ಕಾರದ ನಿಲುವೇನು ;

(ಉ) ಪ್ರೌಢ ಶಾಲೆಗಳಲ್ಲಿ ವಿಷಯವಾರು ಶಿಕ್ಷಕ ವಿದ್ಯಾರ್ಥಿ ಅನುಪಾತವನ್ನು ೦೧:೭೦ ರಿಂದ ೦೧:೪೦ಗೆ ಇಳಿಸುವ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಊ) ವಿಭಜನೆಗೊಂಡಿರುವ ಸಂಯುಕ್ತ ಪದವಿ ಪೂರ್ವ ಕಾಲೇಜುಗಳಲ್ಲಿನ ಪ್ರೌಢ ಶಾಲಾ ಮುಖ್ಯ ಗುರುಗಳ ಹುದ್ದೆ ಸೃಷ್ಠಿ ಮಾಡುವ ಬಗ್ಗೆ ಯಾವ ಕ್ರಮ ಕೈಗೊಂಡಿದೆ ;

(ಖ) ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಇಂಗ್ಲೀಷ್ ಶಿಕ್ಷಕರ ಹುದ್ದೆ ಸೃಷ್ಠಿ ಮಾಡುವ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ ?

**ವಿ. ಶ್ರೀಶ್**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಘಟಕ–2, ಬೆಂಗಳೂರು–59/ಕಾ.ಸೂ.03488 / 1000 ಪ್ರತಿಗಳು/04–02–15